ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ


ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 299
23-5-2025 ಶುಕ್ರವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 299

## 'ಸಿಂಧೂರ' ಗನ್‌ಪೌಡರ್ ಆದಾಗ ಏನಾಗುತ್ತದೆ ಎಂಬುದನ್ನು ದೇಶದ ಶತ್ರುಗಳು ಅರಿತಿವೆ: ಪ್ರಧಾನಿ ನರೇಂದ್ರ ಮೋದಿ



**ಬಿಕಾನೇರ್:** 'ಸಿಂಧೂರ' ಗನ್‌ಪೌಡರ್ ಆದಾಗ ಏನಾಗುತ್ತದೆ ಎಂಬುದನ್ನು ಇದೀಗ ನಮ್ಮ ದೇಶದ ಶತ್ರುಗಳು ತಿಳಿದುಕೊಂಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದು, ಪಾಕಿಸ್ತಾನವು ಮಂಡಿಯೂರಬೇಕಾದಷ್ಟು ಶೌರ್ಯವನ್ನು ತೋರಿಸಿದ್ದಕ್ಕಾಗಿ ಭಾರತದ ಸಶಸ್ತ್ರ ಪಡೆಗಳನ್ನು ಗುರುವಾರ ಶ್ಲಾಘಿಸಿದ್ದಾರೆ.

ಪಹಲ್ಗಾಮ್‌ನಲ್ಲಿ ನಡೆದ ಉಗ್ರ ದಾಳಿಯ ನಂತರ ಪ್ರಾರಂಭಿಸಲಾದ 'ಆಪರೇಷನ್ ಸಿಂಧೂರ' ನಂತರ ರಾಜಸ್ಥಾನದಲ್ಲಿ ತಮ್ಮ ಮೊದಲ ಸಾರ್ವಜನಿಕ ಭಾಷಣದಲ್ಲಿ, ಪ್ರಧಾನಿ ಪಾಕಿಸ್ತಾನವನ್ನು ಟೀಕಿಸಿದರು ಮತ್ತು ಏಪ್ರಿಲ್ 22 ರಂದು ನಡೆದ ದಾಳಿಗೆ ಪ್ರತಿಕ್ರಿಯೆಯಾಗಿ, 'ನಾವು 22 ನಿಮಿಷಗಳಲ್ಲಿ ಒಂಬತ್ತು ದೊಡ್ಡ ಭಯೋತ್ಪಾದಕ ನೆಲೆಗಳನ್ನು ನಾಶಪಡಿಸಿದ್ದೇವೆ' ಎಂದು ಹೇಳಿದರು.

'ಸಿಂಧೂರವು 'ಬರೂದ್' (ಗನ್ ಪೌಡರ್) ಆಗಿ ಬದಲಾದಾಗ ಏನಾಗುತ್ತದೆ ಎಂಬುದನ್ನು ಜಗತ್ತು ಮತ್ತು ದೇಶದ ಶತ್ರುಗಳು ನೋಡಿ-ದ್ದಾರೆ. ಭಾರತ ಪರಮಾಣು ಬೆದರಿಕೆಗಳಿಗೆ ಹೆದರುವುದಿಲ್ಲ ಮತ್ತು ದೇಶದ ಮೇಲೆ ಭಯೋತ್ಪಾದಕ ದಾಳಿ ನಡೆದರೆ ಅದು ಸೂಕ್ತ ಉತ್ತರವನ್ನು ನೀಡುತ್ತದೆ. 'ಸಮಯ ಮತ್ತು ಯಾವ ವಿಧಾನ ಎಂಬುದನ್ನು ನಮ್ಮ ಸಶಸ್ತ್ರ ಪಡೆಗಳು ನಿರ್ಧರಿಸುತ್ತವೆ' ಎಂದು ಅವರು ಬಿಕಾನೇರ್‌ನ ಪಲಾನಾದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಹೇಳಿದರು.

'ನಮ್ಮ ಸರ್ಕಾರ ಮೂರು ಸಶಸ್ತ್ರ ಪಡೆಗಳಿಗೂ ಮುಕ್ತ ಸ್ವಾತಂತ್ರ್ಯ ನೀಡಿತು. ಅವರು ಒಟ್ಟಾಗಿ ಅಂತಹ ಬಲೆಯನ್ನು ಹೆಣೆದರು. ಈ ಮೂಲಕ ಪಾಕಿಸ್ತಾನವು ಮಂಡಿಯೂರುವಂತೆ ಮಾಡಲಾಯಿತು' ಎಂದು ಅವರು ಹೇಳಿದರು.

ಬಿಕಾನೇರ್‌ನ ನಾಲ್ ವಾಯುನೆಲೆಯನ್ನು ಗುರಿಯಾಗಿಸಲು ಪಾಕಿಸ್ತಾನ ಪ್ರಯತ್ನಿಸಿತ್ತು. ಆದರೆ, ಅದಕ್ಕೆ ಯಾವುದೇ ಹಾನಿ ಮಾಡಲು ಸಾಧ್ಯವಾಗಲಿಲ್ಲ. ಆದರೆ, ಪಾಕಿಸ್ತಾನದ ರಹಿಮ್ಯಾರ್ ಖಾನ್ ವಾಯುನೆಲೆ ಮತ್ತೆ ಯಾವಾಗ ತೆರೆಯುತ್ತದೆ ಎಂಬುದು ಯಾರಿಗೂ ತಿಳಿದಿಲ್ಲ. ಅದು ಐಸಿಯುನಲ್ಲಿದೆ. ನಮ್ಮ ದಾಳಿಯಿಂದಾಗಿ ಅದು ನಾಶವಾಗಿದೆ' ಎಂದರು.

ಭಾರತದ ವಿರುದ್ಧ ನೇರ ಹೋರಾಟದಲ್ಲಿ ಪಾಕಿಸ್ತಾನ ಎಂದಿಗೂ ಗೆಲ್ಲಲು ಸಾಧ್ಯವಿಲ್ಲ. ನೇರ ಯುದ್ಧ ಆದಾಗಲೆಲ್ಲ ಪಾಕಿಸ್ತಾನ ಮತ್ತೆ ಮತ್ತೆ ಸೋಲನ್ನು ಎದುರಿಸಬೇಕಾಗುತ್ತದೆ. ಅದಕ್ಕಾಗಿಯೇ ಪಾಕಿಸ್ತಾನ ಭಯೋತ್ಪಾದನೆಯನ್ನು ಭಾರತದ ವಿರುದ್ಧ ಹೋರಾಡಲು ಅಸ್ತ್ರವನ್ನಾಗಿ ಮಾಡಿಕೊಂಡಿದೆ' ಎಂದು ಅವರು ಹೇಳಿದರು.

ಏಪ್ರಿಲ್ 22ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವಿಗೀಡಾಗಿದ್ದಕ್ಕೆ ಪ್ರತಿಯಾಗಿ ಭಾರತ ಮೇ 7ರಂದು ಮುಂಜಾನೆ 'ಆಪರೇಷನ್ ಸಿಂಧೂರ' ಅಡಿಯಲ್ಲಿ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ನೆಲೆಗಳ ಮೇಲೆ ದಾಳಿ ನಡೆಸಿತು.

ಭಾರತದ ಕಾರ್ಯಾಚರಣೆಯ ನಂತರ, ಪಾಕಿಸ್ತಾನ ಮೇ 8, 9 ಮತ್ತು 10 ರಂದು ಭಾರತೀಯ ಸೇನಾ ನೆಲೆಗಳ ಮೇಲೆ ದಾಳಿ ಮಾಡಲು ಪ್ರಯತ್ನಿಸಿತು. ಭಾರತೀಯ ಪಡೆಗಳು ಹಲವಾರು ಪಾಕಿಸ್ತಾನಿ ಸೇನಾ ನೆಲೆಗಳ ಮೇಲೆ ಉಗ್ರ ಪ್ರತಿದಾಳಿ ನಡೆಸಿದವು.

ಗಡಿಯಾಚೆಗಿನ ನಾಲ್ಕು ದಿನಗಳ ತೀವ್ರ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ನಂತರ ಮಿಲಿಟರಿ ಮುಖಾಮುಖಿಯನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ಕದನ ವಿರಾಮ ಒಪ್ಪಂದ ಮಾಡಿಕೊಂಡವು.

## ರನ್ಯಾರಾವ್‌ಗೆ ಜಿ. ಪರಮೇಶ್ವರ್ 25 ಲಕ್ಷದ ಗಿಫ್ಟ್ ನೀಡಿದ್ದಾರಂತೆ!

### ಇಡಿ ದಾಳಿ ಬೆನ್ನಲ್ಲೇ ಡಿಕೆಶಿ ಅಚ್ಚರಿಯ ಹೇಳಿಕೆ



**ಬೆಂಗಳೂರು:** ಚಿನ್ನದ ಅಕ್ರಮ ಸಾಗಾಟ ಪ್ರಕರಣದಲ್ಲಿ ಬಂಧಿತರಾಗಿರುವ ನಟಿ ರನ್ಯಾ ರಾವ್ ಅವರಿಗೆ ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರು ರೂ. 15 ರಿಂದ 25 ಲಕ್ಷ ನೀಡಿದ್ದಾರಂತೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ಅಚ್ಚರಿಯ ಹೇಳಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಗುರುವಾರ ಮಾತನಾಡಿದ ಅವರು, ಜಾರಿ ನಿರ್ದೇಶನಾಲಯ ಅಧಿಕಾರಿಗಳು ದಾಳಿ ನಡೆಸಿರುವ ಹಿನ್ನೆಲೆಯಲ್ಲಿ ನಾನು ಪರಮೇಶ್ವರ್ ಅವರ ಬಳಿ ಮಾತಾಡಿದ್ದೇನೆ. ರನ್ಯಾ ಅವರಿಗೆ 15 ರಿಂದ 25 ಲಕ್ಷದ ಗಿಫ್ಟ್ ನೀಡಿ-ದ್ದಾರೆ ಅಂತೆ. ಬಹುಷಃ ಅವರ ಕುಟುಂಬಕ್ಕೆ ಕೊಟ್ಟಿರಬಹುದು ಎಂದರು. ಹಾಗಂತ ಅವರು ಚಿನ್ನದ ಅಕ್ರಮ ಸಾಗಾಟ ಮಾಡು ಎಂದು ಹೇಳಲು ಸಾಧ್ಯವೇ? ಎಂದು ಪ್ರಶ್ನಿಸಿದರು.

ಪರಮೇಶ್ ಅವರು ಪ್ರಭಾವಿ ವ್ಯಕ್ತಿ. ರನ್ಯಾ ಅಂತ ಹೆಣ್ಮಗಳು ತಪ್ಪು ಮಾಡಿದ್ರೆ ಕ್ರಮ ಆಗಲಿ. ಪರಮೇಶ್ವರ್ ಅವರ ಮೇಲೆ ಜವಾಬ್ದಾರಿ ಇದೆ. ಅವರು ಗೃಹ ಸಚಿವರು ಹಾಗೂ ಪ್ರಾಮಾಣಿಕ ವ್ಯಕ್ತಿಯಾಗಿದ್ದಾರೆ ಎಂದು ಡಿಕೆಶಿ ಬೆಂಬಲ ಸೂಚಿಸಿದರು.

ಪರಮೇಶ್ವರ್ ಅವರನ್ನು ನಾನು ಭೇಟಿ ಮಾಡಿದ್ದೇನೆ. ಅವರು ಆರೋಗ್ಯವಾಗಿ ಇದ್ದಾರೆ ಎಂದು ಇದೇ ಸಂದರ್ಭದಲ್ಲಿ ಡಿಕೆ ಶಿವಕುಮಾರ್ ಅವರು ಮಾಹಿತಿಯನ್ನು ನೀಡಿದರು.

**ಇ.ಡಿ ದಾಳಿ ಎದುರಿಸೋ ಶಕ್ತಿ ಇದೆ :** ಇಡಿ ನಡೆಸಿರುವ ದಾಳಿಯನ್ನು ಎದುರಿಸುವ ಶಕ್ತಿ ನಮಗಿದೆ ಎಂದು ಸಚಿವ ಶಿವರಾಜ್ ತಂಗಡಗಿ ಹೇಳಿದರು. ವಿಧಾನಸೌಧದಲ್ಲಿ ಮಾತನಾಡಿದ ಅವರು, ಗೃಹ ಸಚಿವ ಪರಮೇಶ್ವರ್ ಅವರ ಶಿಕ್ಷಣ ಸಂಸ್ಥೆಗಳ ಮೇಲೆ ಇ.ಡಿ ದಾಳಿ ವಿಚಾರವಾಗಿ, ಬಿಜೆಪಿಯವರು ಇಡಿ ಸಿಬಿಐ ಐಟಿಯನ್ನು ಕೈಗೊಂಬೆ ತರಹ ಬಳಸಿಕೊಂಡು ಕೆಲಸ ಮಾಡುತ್ತಿದ್ದಾರೆ.

ದಲಿತ ಸಚಿವರನ್ನ ನೋಡಿದ್ರೆ ಬಿಜೆಪಿಯವರಿಗೆ ತಡೆದುಕೊಳ್ಳಲು ಆಗಲ್ಲ ಎಂದು ಆರೋಪಿಸಿದರು. ಈ ದಾಳಿಗೆ ನಾವೂ ಜಗ್ಗಲ್ಲ. ಬಗ್ಗಲ್ಲ. ಇಡಿ, ಸಿಬಿಐ ಮೂಲಕ ಕಾಂಗ್ರೆಸ್ ನಾಯಕರನ್ನ ಹೆದರಿಸುವ ಬೆದರಿಸುವ ಕೆಲಸ ಮಾಡುತ್ತಿದ್ದಾರೆ. ಇದನ್ನ ಎದುರಿಸುವ ಶಕ್ತಿ ನಮ್ಮಗೆ ಇದೆ ಎಂದರು.

ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರ ಒಡೆತನದ ಶಿಕ್ಷಣ ಸಂಸ್ಥೆಗಳ ಮೇಲೆ ಜಾರಿ ನಿರ್ದೇಶನಾಲಯ ದಾಳಿ ನಡೆಸಿದೆ. ಬುಧವಾರ ಇಡಿ ದಾಳಿ ನಡೆಸಿತ್ತು. ಗುರುವಾರವೂ ಈ ದಾಳಿ ಮುಂದುವರಿದಿದೆ. ಇಡಿ ದಾಳಿ ಇದೀಗ ರಾಜಕೀಯ ಆರೋಪ ಪ್ರತ್ಯಾರೋಪಕ್ಕೆ ಕಾರಣವಾಗುತ್ತಿದೆ. ಇದು ರಾಜಕೀಯ ಪ್ರೇರಿತವಾದ ದಾಳಿ ಎಂದು ಕಾಂಗ್ರೆಸ್ ಆರೋಪ ಮಾಡಿದೆ.

### ಮಾಯಕೊಂಡಲ್ಲಿ ನಡೆದ ವಿಜಯ ತಿರಂಗಾಯಾತ್ರೆ

## ಭಾರತೀಯ ಸೇನೆ ಪ್ರೋತ್ಸಾಹಕ್ಕೆ ತಿರಂಗಾಯಾತ್ರೆ: ಅನಿಲ್ ಕುಮಾರ್



**ದಾವಣಗೆರೆ :** ಶೀಘ್ರದಲ್ಲಿ ಭಾರತ ವಿಶ್ವದ ದೊಡ್ಡ ಶಕ್ತಿಯಾಗಲಿದ್ದು, ಭಾರತೀಯರು ಸೇನೆಯನ್ನು ಪ್ರೋತ್ಸಾಹಿಸಬೇಕು, ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನಿಲ್ ಕುಮಾರ್ ಕರೆನೀಡಿದರು.

'ಪಾಕಿಸ್ತಾನ ಒಂದು ದುರ್ಬಲ ದೇಶವಾಗಿದ್ದು, ಉಗ್ರರನ್ನು ತಡೆಯುವ ಶಕ್ತಿ ಇಲ್ಲ. ಆಪರೇಷನ್ ಸಿಂಧೂರ ಕಾರ್ಯಾಚರಣೆಗೆ ಬೆದರಿ ಪಾಕ್ ಸರ್ಕಾರ ಅಮೇರಿಕಾದ ಬಳಿ ಹೋಗಿ ಕದನ ವಿರಾಮ ಕೋರಿದೆ. ಅಮೇರಿಕಾವನ್ನೆ ಬಗ್ಗಿಸುವ ಸಾಮರ್ಥ್ಯ ಭಾರತಕ್ಕೆ ಬಂದಿದ್ದು ಈಗ ಟ್ರಂಪ್ ಹಿಂದಿಕ್ಕಿ ಮೋದಿಯೇ ವಿಶ್ವದ ಹಿರಿಯಣ್ಣ ಎಂಬ ಸ್ಥಿತಿ ನಿರ್ಮಾಣವಾಗಿದೆ. ಶೀಘ್ರದಲ್ಲಿ ಭಾರತವೇ ವಿಶ್ವದ ದೊಡ್ಡಣ್ಣವಾಗಲಿದೆ. ಒಂದೇ ದೇಶ, ಒಂದೇ ಧ್ವಜ ಘೋಷಣೆಯಡಿ ತಿರಂಗಾಯಾತ್ರೆ ಹಮ್ಮಿಕೊಳ್ಳಲಾಗಿದೆ. ನ್ಯಾಮತಿ, ಹೊನ್ನಾಳಿ ಜಿಲ್ಲೆಯಾದ್ಯಂತ ತಿರಂಗಾಯಾತ್ರೆ ನಡೆಸಲಾಗುತ್ತದೆ. ಜಿಲ್ಲೆಯ ಮುಖಂಡರು, ನಿವೃತ್ತ ಯೋಧರು ಪಾಲ್ಗೊಳ್ಳಲಿದ್ದಾರೆ. ಭಾರತೀಯರು ಪಕ್ಷ, ಧರ್ಮ ಮರೆತು ಸೇನೇಯನ್ನು ಬೆಂಬಲಿಸಿ ಭಾರತವನ್ನು ಬಲಿಷ್ಠವಾಗಿಸಬೇಕು, ಎಂದರು.

ಮಾಯಕೊಂಡ ಮಂಡಲ ಬಿಜೆಪಿ ಅಧ್ಯಕ್ಷ ಸಚಿನ್ ಬಿ. ಜಿ ಮಾತನಾಡಿ, ಆಪರೇಷನ್ ಸಿಂಧೂರದಿಂದ ದೇಶದ ಪ್ರತಿಷ್ಠೆ.ಹೆಚ್ಚಿಸಿದ ಸೈನಿಕರನ್ನು ಗೌರವಿಸಬೇಕು. ಹೆಮ್ಮೆಯ ಸೈನಿಕರ ಆತ್ಮವಿಶ್ವಾಸ ಹೆಚ್ಚಿಸುವ ಉದ್ದೇಶ. ಹಿಂದೂಗಳನ್ನೇ ಹುಡುಕಿ ಕೊಂದ ಉಗ್ರರು ಹೇಡಿಗಳು. ಮೋದಿ ತಕ್ಷಣ ಪ್ರತಿಕ್ರಿಯಿಸಿ, ಸಿಂಧೂ ನದಿ ನೀರನ್ನು ನಿಲ್ಲಿಸಿದರು.ಮೂವತ್ತು ವರ್ಷದಿಂದ ಹತ್ತಿಕ್ಕಲಾಗದ ಉಗ್ರರ ಕಾಟ ನಿರ್ಮೂಲನೆ ಮಾಡಿದ್ದಾರೆ. ಯೋಧರಿಗೆ ಉತ್ಸಾಹ ತುಂಬಬೇಕೇ ಹೊರತು ಎದೆಗುಂದಿಸಬಾರದು. ನಾಗರಿಕರು ರಾಷ್ಟ್ರ ಭಕ್ತರು ಒಂದಾಗಿ ಹೋರಾಡಬೇಕು ಎಂದರು.


ಮಾಜಿ ಮಂಡಲ ಅಧ್ಯಕ್ಷ ಬಿ.ಎಸ್. ರಮೇಶ್, ಪೆಹಲ್ಗಾಮ್ ಹತ್ಯೆಯಿಂದ ಇಡೀ ದೇಶವೇ ಆತಂಕಗೊಂಡಿತ್ತು. ಪ್ರದಾನಿ ಮೋದಿ ವಿದೇಶ ಪ್ರವಾಸ ಮೊಟುಕುಗೊಳಿಸಿ ಮಿಲಿಟರಿ ಅಧಿಕಾರಿಗಳ ಸಭೆ ಕರೆದು ಸೇನೆಗೆ ಸಂಪೂರ್ಣ ಜವಬ್ದಾರಿ ಕೊಟ್ಟರು. ನಾಗರಿಕರಿಗೆ ಎಲ್ಲೂ ತೊಂದರೆಯಾಗದಂತೆ ನೂರಾರು ಉಗ್ರರನ್ನು ಹೊಡೆದುರುಳಿಸಿದರು. ದೇಶದೆಲ್ಲೆಡೆ ಜನ ಸೇನೆಗೆ ಅಭೂತಪೂರ್ವ ಬೆಂಬಲ ನೀಡಿದ್ದಾರೆ. ಸೇನೆಗೆ ಆತ್ಮಸ್ಥೈರ್ಯ ತುಂಬಲು ತಿರಂಗಾಯಾತ್ರೆ ಹಮ್ಮಿಕೊಳ್ಳಲಾಗಿದೆ, ಎಂದರು.

ಮಾಯಕೊಂಡ ಕಲ್ಲೇಶ್ ಮಾತನಾಡಿ, ಕಾಶ್ಮೀರದಲ್ಲಿ ಜನ ಬದುಕುಬುದೇ ಕಷ್ಟವಾಗಿತ್ತು. ಸೈನಿಕರನ್ನು, ಪೊಲೀಸರನ್ನು ಕಲ್ಲಿನಿಂದ ಹೊಡೆಯುತ್ತಿದ್ದರು. ಇಂದು ಮೋದಿ ತೆಗೆದುಕೊಂಡ ತೀರ್ಮಾನದಿಂದ ಅಲ್ಲಿ ಶಾಂತಿ ನೆಲಸಿದೆ ಎಂದರು.

ಹಿರೆ ಮದಕರಿ ನಾಯಕರ ಸಮಾಧಿಗೆ ಪೂಜೆ ಸಲ್ಲಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪಾದಯಾತ್ರೆ ನಡೆಸಲಾಯಿತು. ನಾಡಕಛೇರಿ ಆವರಣದಲ್ಲಿ ಸಮಾವೇಶಗೊಳಿಸಲಾಯಿತು. ಶಾಲಾ ಕಾಲೇಜಿನ ವಿದ್ಯಾರ್ಥಿಗಳು ತಿರಂಗಾ ಯಾತ್ರೆಯಲ್ಲಿ ಪಾಲ್ಗೊಂಡರು.

ನಿವೃತ್ತ ಯೋಧರಾದ ತೋಳಹುಣಸೆ ಶಾಮನಾಯ್ಕ, ಮಹಂತೇಶ್, ಮಾಯಕೊಂಡ ಕಲ್ಲೇಶ್ ಸನ್ಮಾನಿಸಲಾಯಿತು. ಮಹಿಳಾ ಮೋರ್ಚಾ ಅಧ್ಯಕ್ಷೆ ಲತಾ ಒಂಕಾರಪ್ಪ, ಮಂಡಲ ಮಾಜಿ ಪ್ರಧಾನ ಕಾರ್ಯದರ್ಶಿ ಪೂಜಾರ್ ಅಶೋಕ್, ಮುಖಂಡರಾದ ಹಿಂಡಸಕಟ್ಟೆ ಮಹಬಲೇಶ್, ಹುಚ್ಚವನಹಳ್ಳಿ ಮಹೇಶ್, ಕರಿಲಕ್ಕೇನಹಳ್ಳಿ ಒಂಕಾರಪ್ಪ, ತ್ಯಾವಣಿಗೆ ಕೃಷ್ಣಕುಮಾರ್, ಕಲಪನಹಳ್ಳಿ ರಾಕೇಶ್, ಮಾಯಕೊಂಡ ಎಂ.ಜಿ.ಗುರುನಾಥ್, ಹೆಬ್ಬಾಳು ಉಮೇಶ್, ದೊಡ್ಡಘಟ್ಟ ಮಲ್ಲಿಕಾರ್ಜುನ, ಅಣ್ಣಾಪುರ ಶಿವಣ್ಣ, ಈಚಗಟ್ಟ ರವಿಕುಮಾರ್, ನೇರ್ಲಿಗೆ ಕರಿಯಣ್ಣ, ಕ್ಯಾತನಹಳ್ಳಿ ಬಸವರಾಜ್, ರಮೇಶ್, ಬಸವಾಪುರ ದೇವರಾಜ್, ಗೋಪನಾಳ್ ಕೆಂಚವೀರಪ್ಪ, ಪೂಜಾರ್ ಶಶಿಧರ, ಕಣವೆಬಿಳಚಿ ಅಜ್ಜಯ್ಯ, ದ್ವಾರಕೀಶ್ ಮತ್ತಿತರರು ಇದ್ದರು.

## ನಾಳೆಯಿಂದ ಮೂರು ದಿನಗಳ ಕಾಲ ಪುರುಷರ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ




**ದಾವಣಗೆರೆ:** ಜಿಲ್ಲಾ ಅಮೆಚೂರ್ ಕಬಡ್ಡಿ ಸಂಸ್ಥೆ (ರಿ.) ಇವರ ಸಹಯೋಗದೊಂದಿಗೆ ಶ್ರೀ ಚಾಮುಂಡೇಶ್ವರಿ ಕ್ರೀಡಾ ಸಮಿತಿ, ನೀಲಮ್ಮನ ತೋಟ ವತಿಯಿಂದ 50ನೇ ವರ್ಷದ ಸುವರ್ಣ ಮಹೋತ್ಸವದ ಅಂಗವಾಗಿ ಪುರುಷರ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ-ಜಿಲ್ಲಾ ಚಾಂಪಿಯನ್ ಶಿಪ್ -2025 ಅನ್ನು ಡಿಸಿಎಂ ಟೌನ್ ಶಿಪ್ ನಲ್ಲಿರುವ ಅನಿಲ್ ಕುಂಬ್ಳೆ ಕ್ರೀಡಾಂಗಣದಲ್ಲಿ ಮೇ 23 ರಿಂದ ಮೇ 25 ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಚಾಮುಂಡೇಶ್ವರಿ ಕ್ರೀಡಾ ಸಮಿತಿ ಅಧ್ಯಕ್ಷ ಶಂಕರ್ ಗಣೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂದ್ಯಾವಳಿಗಳ ಉದ್ಘಾಟನೆ ಮೇ 23 ಶುಕ್ರವಾರ ಸಂಜೆ 6 ಗಂಟೆಗೆ ನೆರವೇರಲಿದೆ. ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಪಂದ್ಯಾವಳಿಗೆ ಚಾಲನೆ ನೀಡಲಿದ್ದಾರೆ. ನಂತರ ಪಂದ್ಯಾವಳಿಗಳು ನಡೆಯಲಿದೆ. ಮೇ. 25 ಸಂಜೆ 6-30 ಗಂಟೆಗೆ ನಡೆಯುವ ಬಹುಮಾನಗಳ ವಿತರಣೆ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ನಡೆಸಿಕೊಡಲಿದ್ದಾರೆ ಎಂದರು.

ಪ್ರಥಮ ಬಹುಮಾನವಾಗಿ ಜಿಲ್ಲಾ ಚಾಂಪಿಯನ್ ಆಕರ್ಷಕ ಟ್ರೋಫಿ ಹಾಗೂ ತಂಡದ 10 ಆಟಗಾರರಿಗೆ ಏರ್ ಕೂಲರ್‌ಗಳು. ದ್ವಿತೀಯ ಬಹುಮಾನ ತಂಡದ 10 ಆಟಗಾರರಿಗೆ ಮಿಕ್ಸರ್‌ಗಳು, ತೃತೀಯ ಬಹುಮಾನ ತಂಡದ 10 ಆಟಗಾರರಿಗೆ ವಾಲ್ ಫ್ಯಾನ್‌ಗಳು ಹಾಗೂ

ಚತುರ್ಥ ಬಹುಮಾನವಾಗಿ ತಂಡದ 10 ಆಟಗಾರರಿಗೆ ಕುಕ್ಕರ್‌ಗಳನ್ನು ನೀಡಲಾಗುವುದು.

ಈ ಪಂದ್ಯಾವಳಿಯಲ್ಲಿ ಬಾಗವಹಿಸುವ ತಂಡಗಳು ಹಾಗೂ ತಂಡದ ಅಟಗಾರರು ದಾವಣಗೆರೆ ಜಿಲ್ಲಾ ಅಮೆಚೂರ್ ಕಬಡ್ಡಿ ಸಂಸ್ಥೆ (ರಿ.) ಇವರಲ್ಲಿ ರಿಜಿಸ್ಟರ್ಸ್ ಅಥವಾ ರಿನಿವಲ್ ಆಗಿರಬೇಕು. ಯಾವುದೇ ತಂಡದ ಆಟಗಾರರಲ್ಲಿ ಹಾಗೂ ತಂಡದಲ್ಲಿ ಸಮಸ್ಯೆಗಳು, ತೊಂದರೆಗಳು, ಇದ್ದಲ್ಲಿ ಜಿಲ್ಲಾ ಅಮೆಚೂರ್ ಕಬಡ್ಡಿ ಸಂಸ್ಥೆ (ರಿ.) ಇವರಲ್ಲಿ ಪರಿಹಾರವನ್ನು ಮಾಡಿಕೊಂಡು ಪಂದ್ಯಾವಳಿಗಳಲ್ಲಿ ಭಾಗವಹಿಸುವುದು. ಪ್ರತಿಯೊಂದು ತಂಡವು ಸಮವಸ್ತ್ರದೊಂದಿಗೆ ಸಮಯಕ್ಕೆ ಸರಿಯಾಗಿ ಭಾಗವಹಿಸುವಂತೆ ತಿಳಿಸಿದರು.

ಹೆಚ್ಚಿನ ಮಾಹಿತಿಗೆ 81974 49131 (ರಘು), 91136 80796 (ಮಣಿಕಂಠ), 80504 11098 (ವಿಷ್ಣು), 63624 77384 (ಸಾಯಿ ಶರತ್) ಸಂಪರ್ಕಿಸಲು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ, ಬಾಲರಾಜ್, ಕೃಷ್ಣಮೂರ್ತಿ, ನಾಗರಾಜ್, ರವಿಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

## ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

**ದಾವಣಗೆರೆ :** ಜಿಲ್ಲೆಯಲ್ಲಿ ಪ್ರತಿ ತಿಂಗಳು ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತದೆ.

ಮೇ.27 ರಂದು ನಗರದ ಕೆಎಸ್‌ಎಸ್ ಪಿ.ಯು ಕಾಲೇಜು, #1382/5/6, 2ನೇ ಕ್ರಾಸ್ ಸರಸ್ವತಿ ನಗರ ದಾವಣಗೆರೆ-577004 ಇಲ್ಲಿ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ, ಪಿಂಚಣಿದಾರರಿಗೆ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮೀಷನರ್ ತಿಳಿಸಿದ್ದಾರೆ.

## ಜಿಲ್ಲಾದ್ಯಂತ ಮುಂದುವರಿದ ಮಳೆ ಆರ್ಭಟ



**ದಾವಣಗೆರೆ :** ದಾವಣಗೆರೆ ನಗರ ಸೇರಿದಂತೆ ಜಿಲ್ಲೆಯ ಹಲವು ಭಾಗಗಳಲ್ಲಿ ಧಾರಾಕಾರ ಮಳೆ ಸುರಿದಿದ್ದು, ಜನಜೀವನವನ್ನು ಸಂಪೂರ್ಣ ಅಸ್ತವ್ಯಸ್ತಗೊಳಿಸಿದೆ. ಬೆಳಗ್ಗೆ 11 ಗಂಟೆಯ ಸುಮಾರಿಗೆ ಆರಂಭವಾದ ಮಳೆ ಮಧ್ಯಾಹ್ನ 1 ಗಂಟೆಯವರೆಗೂ ರಭಸವಾಗಿ ಸುರಿಯಿತು.

ನಗರದಲ್ಲಿ ಜಲಾವೃತಗೊಂಡ ತಗ್ಗು ಪ್ರದೇಶಗಳು: ನಗರದಲ್ಲಿ ಸುರಿದ ಭಾರೀ ಮಳೆಯಿಂದಾಗಿ ಅನೇಕ ತಗ್ಗು ಪ್ರದೇಶಗಳು ಸಂಪೂರ್ಣವಾಗಿ ಜಲಾವೃತಗೊಂಡಿದ್ದು, ಸ್ಥಳೀಯ ನಿವಾಸಿಗಳು ತೀವ್ರ ತೊಂದರೆ ಅನುಭವಿಸಿದ್ದಾರೆ. ರಸ್ತೆಗಳು ನದಿಗಳಂತೆ ಕಾಣುತ್ತಿದ್ದವು, ಇದರಿಂದಾಗಿ ವಾಹನ ಸವಾರರು ತಮ್ಮ ವಾಹನಗಳನ್ನು ಮುಂದೆ ಸಾಗಿಸಲು ಹರಸಾಹಸ ಪಡಬೇಕಾಯಿತು. ಕೆಲವು ಕಡೆಗಳಲ್ಲಿ ವಾಹನಗಳು ನೀರಿನಲ್ಲಿ ಸಿಲುಕಿಕೊಂಡ ಘಟನೆಗಳೂ ವರದಿಯಾಗಿವೆ.

ಜಿಲ್ಲೆಯಾದ್ಯಂತ ಮಳೆ ಅಬ್ಬರ: ದಾವಣಗೆರೆ ನಗರ ಮಾತ್ರವಲ್ಲದೆ, ಜಿಲ್ಲೆಯ ನ್ಯಾಮತಿ, ಸಂತೇಬೆನ್ನೂರು, ಮಲೇಬೆನ್ನೂರು, ಕಡರನಾಯ್ಕನಹಳ್ಳಿ ಸೇರಿದಂತೆ ಹಲವು ಗ್ರಾಮೀಣ ಪ್ರದೇಶಗಳಲ್ಲೂ ಜೋರು ಮಳೆಯಾಗಿದೆ. ಬಸವಾಪಟ್ಟಣದಲ್ಲಿ ಸುರಿದ ಧಾರಾಕಾರ ಮಳೆಯಿಂದಾಗಿ ಬಸ್ ನಿಲ್ದಾಣ ಸಂಪೂರ್ಣವಾಗಿ ಜಲಾವೃತಗೊಂಡು ಪ್ರಯಾಣಿಕರು ಪರದಾಡಿದರು.

ರೈತರಿಗೆ ಹೆಚ್ಚಿದ ಆತಂಕ: ಬಿರುಗಾಳಿ ಸಹಿತ ಸುರಿದ ಮಳೆಯು ರೈತರಲ್ಲಿ ತೀವ್ರ ಆತಂಕ ಮೂಡಿಸಿದೆ. ಭತ್ತದ ಬೆಳೆಗಳು ಗಾಳಿಯ ರಭಸಕ್ಕೆ ನೆಲಕ್ಕೆ ಬಿದ್ದಿದ್ದು, ರೈತರ ಪರಿಶ್ರಮಕ್ಕೆ ಭಾರಿ ನಷ್ಟ ಉಂಟಾಗಿದೆ. ಈಗಾಗಲೇ ಕಟಾವು ಮಾಡಿದ ಭತ್ತವನ್ನು ಒಣಗಿಸಲು ಸಾಧ್ಯವಾಗದೆ ರೈತರು ತೇವಾಂಶದ ಸಮಸ್ಯೆಯಿಂದ ಕಂಗಾಲಾಗಿದ್ದಾರೆ. ಅಕಾಲಿಕ ಮಳೆಯು ಭತ್ತದ ಗುಣಮಟ್ಟದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದ್ದು, ರೈತರು ಕಂಗಾಲಾಗಿದ್ದಾರೆ. ಮುಂದಿನ ದಿನಗಳಲ್ಲಿ ಹವಾಮಾನ ಸುಧಾರಿಸದಿದ್ದರೆ ಹೆಚ್ಚಿನ ನಷ್ಟವಾಗುವ ಭೀತಿ ಎದುರಾಗಿದೆ.

ಹರಿಹರ : ಧಾರಾಕಾರವಾಗಿ ಸುರಿದ ಮಳೆಯಿಂದಾಗಿ ವ್ಯಾಪಾರ-ವಟು ಅಸ್ತವ್ಯಸ್ತ

ಹರಿಹರ, ಮೇ 20 - ನಗರದಲ್ಲಿ ಇಂದು ಬೆಳಿಗ್ಗೆಯಿಂದ ಆರಂಭವಾದ ಮಳೆಯಿಂದಾಗಿ, ಸಂತೆಯ ದಿನವಾಗಿದ್ದರಿಂದ, ದೊಡ್ಡಿಬೀದಿ ಮತ್ತು ಶಿವಮೊಗ್ಗ ರಸ್ತೆಯ ಸಂತೆಯಲ್ಲಿ ವ್ಯಾಪಾರ ವಹಿವಾಟು ಕುಸಿತಗೊಂಡು, ವ್ಯಾಪಾರಸ್ಥರು ನಷ್ಟವನ್ನು ಸರಿದೂಗಿಸಲು ಹರ ಸಾಹಸ ಪಟ್ಟರು.

ಮಳೆ ಆರಂಭದಲ್ಲಿ ಅಬ್ಬರದ ರೂಪದಲ್ಲಿ ಬರತೊಡಗಿತು. ನಂತರ ಮಧ್ಯಾಹ್ನ ಕಡಿಮೆಯಾಗುತ್ತಿದ್ದಂತೆ ಸಾರ್ವಜನಿಕರು ಮಾರುಕಟ್ಟೆಯಲ್ಲಿ ತರಕಾರಿ ಮತ್ತು ದಿನಸಿ ಪದಾರ್ಥಗಳನ್ನು ಖರೀದಿಸಲು ಮುಂದಾಗುತ್ತಿದಂತೆ, ಮತ್ತೆ ಸಿಡಿಲು, ಗುಡುಗು, ಮಿಂಚಿನ ಅರ್ಭಟದೊಂದಿಗೆ ಮಳೆಯ ಪ್ರಮಾಣವು ಹೆಚ್ಚಾಯಿತು. ಇದರಿಂದ ವ್ಯಾಪಾರಸ್ಥರಲ್ಲೂ ಆತಂಕವನ್ನು ಉಂಟುಮಾಡಿತು. ಶಿವಮೊಗ್ಗ ರಸ್ತೆ ಮತ್ತು ದೊಡ್ಡಿಬೀದಿ ಭಾಗದಲ್ಲಿ ನಡೆಯುವಂತಹ ಸಂತೆ ವ್ಯಾಪಾರ ವಹಿವಾಟು ಸಂಪೂರ್ಣವಾಗಿ ಸ್ಥಗಿತಗೊಂಡಿತು.

2-3 ದಿನಗಳಿಂದ ಧಾರಾಕಾರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಮನೆಯಲ್ಲಿ ಗೂಡು ಸೇರಿದ್ದ ಛತ್ರಿ, ರೈನ್ ಕೋರ್ಟ್ ಸೇರಿದಂತೆ ಮಳೆಯಿಂದ ರಕ್ಷಿಸಲು ಬೇಕಾಗುವಂತ ರಕ್ಷಾ ಕವಚಗಳು ಹೊರಗಡೆ ಬಂದಿದ್ದವು. ಎಲ್ಲಿಲ್ಲದ ಬೇಡಿಕೆಯಿಂದಾಗಿ ಆಟೋ ಚಾಲಕರು ಕೇಳಿದಷ್ಟು ಹಣವನ್ನು ಕೊಟ್ಟು ಪ್ರಯಾಣಿಕರು ತಮ್ಮ - ತಮ್ಮ ಮನೆಗೆ ತೆರಳುತ್ತಿರುವುದು ಸಾಮಾನ್ಯವಾಗಿತ್ತು.

## ಆಪರೇಷನ್ ಸಿಂಧೂರ್ ಟೀಕಿಸುವವರಿಗೆ ಗುಂಡು ಹೊಡೆಯಬೇಕು: ಈಶ್ವರಪ್ಪ



**ವಿಜಯಪುರ:** ಭಾರತೀಯ ಸೇನಾಪಡೆಯ ಆಪರೇಷನ್ ಸಿಂಧೂರ್ ಬಗ್ಗೆ ಟೀಕಿಸುವವರಗೆ ಗುಂಡು ಹೊಡಿಬೇಕು ಎಂದು ಮಾಜಿ ಉಪಮುಖ್ಯಂತ್ರಿ ಕೆ.ಎಸ್. ಈಶ್ವರಪ್ಪ ಅವರು ಹೇಳಿದ್ದಾರೆ.


ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪಾಕಿಸ್ತಾನದ ಮೇಲೆ ಭಾರತದ ಸೈನಿಕರು ದಾಳಿ ಮಾಡಿರುವುದನ್ನು ಪ್ರಶ್ನಿಸುತ್ತಿರುವ, ಸಾಕ್ಷ್ಯ ಕೇಳುತ್ತಿರುವ ಕಾಂಗ್ರೆಸ್‌ನ ಪ್ರಿಯಾಂಕಾ ಖರ್ಗೆ, ಸಂತೋಷ ಲಾಡ್, ದಿನೇಶ ಗುಂಡೂರಾವ್, ಕೊತ್ತೂರು ಮಂಜುನಾಥ್, ಬಿ.ಕೆ.ಹರಿಪ್ರಸಾದ್ ಅವರಂತವರು ನಿಜವಾದ ರಾಷ್ಟ್ರದ್ರೋಹಿಗಳು. ಇಂತವರಿಗೆ ಮೊದಲು ಗುಂಡಿಟ್ಟು ಹೊಡೆಯಬೇಕು ಎಂದು ಹೇಳಿದರು.

ಇಡೀ ದೇಶ ಒಂದಾಗಿರುವ ಸಂದರ್ಭದಲ್ಲಿ ಪಾಕಿಸ್ತಾನದ ಪರವಾದ ಹೇಳಿಕೆ ನೀಡಿ, ದೇಶದ ಒಳಗೆ ಅರಾಜಕತೆ ಸೃಷ್ಟಿಸುತ್ತಿರುವ ಕಾಂಗ್ರೆಸಿನಲ್ಲಿರುವ ದೇಶದ್ರೋಹಿಗಳಿಗೆ ಗುಂಡಿಡಬೇಕು. ಆಗ ಬಹಳಷ್ಟು ಕಾಂಗ್ರೆಸಿಗರೇ ಮೊದಲು ಸಂತೋಷ ಪಡುತ್ತಾರೆ.

ಕಾಂಗ್ರೆಸ್ ಸದ್ಯ ಎರಡು ದಿಕ್ಕಾಗಿದೆ. ಜೂನಿಯರ್ ಕಾಂಗ್ರೆಸ್ ನಾಯಕರು ಮಾತ್ರ ಟೀಕೆ ಮಾಡುತ್ತಿದ್ದಾರೆ. ಸೀನಿಯರ್ ಖರ್ಗೆ ವಿಧಿ ಇಲ್ಲದೆ ಅಲ್ಲೊಂದು ಇಲ್ಲೊಂದು ಮಾತನಾಡುತ್ತಾರೆ. ಆದರೆ, ಪಾಕಿಸ್ತಾನ ಪರವಾಗಿ ಮರಿ ಖರ್ಗೆ ಇದ್ದಾರೆ. ಹರಿಪ್ರಸಾದ್, ಸಂತೋಷ್ ಲಾಡ್, ದಿನೇಶ್ ಗುಂಡೂರಾವ್ ಅವರಂತಹ ಕೆಲವರಿಗೆ ಮಾತ್ರ ಎಲ್ಲಿ ಇದ್ದೇವೆ. ಏನು ಮಾಡುತ್ತಿದ್ದೇವೆ. ಕಾಂಗ್ರೆಸ್ ನಾಯಕರು ಹೌದೋ, ಅಲ್ವೋ ಎಂದೇ ಗೊತ್ತಾಗುತ್ತಿಲ್ಲ. ಇವರ ಬಗ್ಗೆ ಕಾಂಗ್ರೆಸ್‌ನವರಿಂದಲೇ ಟೀಕೆ ಕೇಳಿಬರುತ್ತಿದೆ.

ಆಪರೇಷನ್ ಸಿಂಧೂರ್ ಬಗ್ಗೆ ಪ್ರೂಫ್ ಕೇಳೋಕೆ ಪ್ರಿಯಾಂಕ್ ಹಾಗೂ ಲಾಡ್ ಯಾರು? ಇವರಿಗೆ ಆಪರೇಷನ್ ಸಿಂಧೂರದ ಬಗ್ಗೆ ಏನು ಪ್ರೂಫ್ ಕೊಡಬೇಕು. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರು, ಎಲ್ಲಾ ಪಕ್ಷದ ಸಭೆಗೆ ಹೋಗಿದ್ದಾರೆ. ಅವರನ್ನೇ ಕೇಳಲಿ ಇವರು. ಅವರು ಸಾಕ್ಷಿ ಕೊಟ್ಟೇ ಕೊಡುತ್ತಾರೆಂದು ಆಕ್ರೋಶ ಹೊರಹಾಕಿದರು.

## ಬಾಕಿ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ, ಕಿರಿದಾದ ರಸ್ತೆ ವಿಸ್ತರಿಸಿ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡಿ : ಡಾ.ಪ್ರಭಾಮಲ್ಲಿಕಾರ್ಜುನ್



**ದಾವಣಗೆರೆ :** ಜಿಲ್ಲೆಯ ವಿವಿಧೆಡೆ ಬಾಕಿ ಇರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ, ಹಲವೆಡೆ ಕಿರಿದಾದ ರಸ್ತೆ ಹಾಗೂ ಅಂಡರ್ ಪಾಸ್, ಸೇವಾ ರಸ್ತೆ ಸ್ಥಾಪಿಸಿ ಮುಕ್ತ ಸಂಚಾರ-ಕ್ಕೆ ಅನುವು ಮಾಡಿಕೊಡುವಂತೆ ಸಂಸದರಾದ ಡಾ;ಪ್ರಭಾ ಮಲ್ಲಿಕಾರ್ಜುನ್ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಲಾಗಿದ್ದ ರಸ್ತೆ ಸುರಕ್ಷತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಎಸ್.ಎಸ್.ಹೈಟೆಕ್ ಮುಖ್ಯ ಆಸ್ಪತ್ರೆಯ ಮುಖ್ಯ ದ್ವಾರ ರಾಷ್ಟ್ರೀಯ ಹೆದ್ದಾರಿ-48ರ, ಚೈನೇಜ್ ಅಂಡರ್ ಪಾಸ್ ಬಳಿ ಭಾರಿ ವಾಹನ, ನಗರ ಸಾರಿಗೆ, ಲಾರಿ, ಬಸ್ ವಾಹನಗಳು ಸಂಚರಿಸುತ್ತಿವೆ. ಇಲ್ಲಿನ ಕೆಳ ಸೇತುವೆ ತುಂಬಾ ಕಿರಿದಾಗಿದ್ದು, ಸಂಚಾರ ದಟ್ಟಣೆ ಹೆಚ್ಚಾಗಿದೆ. ಈ ಕುರಿತು ಮಾಹಿತಿ ಪಡೆದ ಸಂಸದೆ ಶೀಘ್ರದಲ್ಲಿಯೇ ಇದನ್ನು ಪರಿಶೀಲಿಸಿ ಸಮಗ್ರ ಮಾಹಿತಿ ಒದಗಿಸಬೇಕು ಎಂದು ಹೆದ್ದಾರಿ ಪ್ರಾಧಿಕಾರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಷ್ಟೇ ಅಲ್ಲದೇ ಕೆಲವು ರಾಷ್ಟ್ರೀಯ ಹೆದ್ದಾರಿ ಅಂಡರ್ ಪಾಸ್‌ಗಳಲ್ಲಿ ಸೂಕ್ತವಾದ ಬೆಳಕಿನ ವ್ಯವಸ್ಥೆ ಇಲ್ಲಾ. ಸಂಜೆ ಹಾಗೂ ರಾತ್ರಿಯ ಸಮಯದಲ್ಲಿ ಸಾರ್ವಜನಿಕರು, ಮಹಿಳೆಯರು, ವಿದ್ಯಾರ್ಥಿಗಳು ಸಂಚರಿಸುತ್ತಿರುತ್ತಾರೆ. ಅವರುಗಳಿಗೆ ತೊಂದರೆಯಾಗದಂತೆ ಅಗತ್ಯವಿರುವ ಕಡೆ ಕ್ಯಾರೇಜ್-ವೇ ಹೆಚ್ಚಿಸುವುದರ ಜೊತೆಗೆ ಬೆಳಕಿನ ವಿದ್ಯುತ್‌ದೀಪದ ವ್ಯವಸ್ಥೆ ಮಾಡಬೇಕು. ಇದರಿಂದ ಕಳ್ಳತನ, ಅಪಘಾತ ಸೇರಿದಂತೆ ಇನ್ನಿತರೆ ಅಹಿತಕರ ಘಟನೆಗಳು ಜರುಗುವ ಸಂಭವ ಕಡಿಮೆಯಾಗುತ್ತದೆ ಎಂದ ಅವರು, ಮಳೆಗಾಲ ಆರಂಭವಾಗಿದೆ, ಹಲವೆಡೆ ನೀರು ನಿಲ್ಲುವ ಕುರಿತು ವರದಿ, ಆರೋಪ ಕೇಳಿ ಬರುತ್ತಿವೆ. ಆದ್ದರಿಂದ ಅಂತಹ ಸ್ಥಳಗಳನ್ನು ಗುರುತಿಸಿ ಸರಿಪಡಿಸಬೇಕು ಎಂದರು.

ಹರಿಹರ ತಾಲ್ಲೂಕಿನ ಹರಗನಹಳ್ಳಿ ಹಾಗೂ ಆನಗೋಡು, ಹೆಬ್ಬಾಳು ಬಳಿ ಏಕಾ-ಏಕಿ ತಿರುವು ಪಡೆದುಕೊಳ್ಳುವ ವಾಹನಗಳಿಗೆ ಡಾಬಾ ಹೋಟೆಲ್, ಪೆಟ್ರೋಲ್ ಬಂಕ್, ಇನ್ನಿತರೆ ಅಂಗಡಿ ಮುಂಗಟ್ಟುಗಳು ಅವೈಜ್ಞಾನಿಕ ಮತ್ತು ಅನಧಿಕೃತವಾಗಿ ನಿರ್ಮಿಸಿರುವುದರಿಂದ ಅಪಘಾತ ಹೆಚ್ಚಾಗುತ್ತಿವೆ. ಅಲ್ಲಿನ ಅನಧಿಕೃತ, ಮತ್ತು ನಿಯಮಬಾಹಿರವಾಗಿ ಇರುವವರ ಮೇಲೆ ಸೂಕ್ತ ಕ್ರಮಕೈಗೊಳ್ಳುವಂತೆ ಸೂಚನೆ ನೀಡಿ-ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು. ಹೆಣಟಿಜಜಜಿಟಿಜಜಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ. ಧರ್ಮಕಾರ್ಯಗಳು / ಹವನಗಳು / ಮಂಗಳಕರ ಸಮಾರಂಭಗಳನ್ನು ಮನೆಯಲ್ಲಿ ಕೈಗೊಳ್ಳಲಾಗುವುದು

### ವೃಷಭ ರಾಶಿ

ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ.

### ಮಿಥುನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್ಗಳು ಮತ್ತು ಮ್ಯೂಚುವಲ್ ಫಂಡ್ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ. ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ಇಂದು ನೀವು ನಿಮ್ಮ ಕೆಲಸಗಳನ್ನು ಸಮಯದಲ್ಲೇ ಪೂರೈಸಲು ಪ್ರಯತ್ನಿಸಬೇಕು.

### ಕರ್ಕ ರಾಶಿ

ನಿಮ್ಮನ್ನು ಫಿಟ್ ಆಗಿ ಮತ್ತು ಚೆನ್ನಾಗಿರಿಸಿಕೊಳ್ಳಲು ಹೆಚ್ಚಿನ ಕ್ಯಾಲೋರಿಯ ಆಹಾರವನ್ನು ತಪ್ಪಿಸಿ ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಮಗಳ ಅನಾರೋಗ್ಯ ನಿಮ್ಮ ಮನಸ್ಸಿಗೆ ಅಸಮಾಧಾನ ತರುತ್ತದೆ. ಅವಳು ತನ್ನ ಅನಾರೋಗ್ಯದ ಜೊತೆ ಹೋರಾಡುತ್ತಿದ್ದ ಹಾಗೆ ಅವಳ ಚೈತನ್ಯವನ್ನು ಉದ್ದೀಪನಗೊಳಿಸಲು ಅವಳಿಗೆ ನಿಮ್ಮ ಪ್ರೀತಿಯನ್ನು ನೀಡಿ.

### ಸಿಂಹ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ, ಅದನ್ನು ಮಾಡುವುದು ನಿಮ್ಮ ಆರೋಗ್ಯವನ್ನು ಹದಗೆಡಿಸುತ್ತದೆ ಮತ್ತು ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸಹ ಹದಗೆಡಿಸುತ್ತದೆ.

### ಕನ್ಯಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್ಗೆ ಭೇಟಿ ನೀಡಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಇಂದು ಕಾರ್ಡ್ ನಲ್ಲಿ ಪ್ರಣಯಶಾಲಿ ಪ್ರಭಾವಗಳು ಹೆಚ್ಚಾಗಿವೆ. ನಿಮ್ಮ ಗತಕಾಲದ ಯಾರೆ ನಿಮ್ಮನ್ನು ಸಂಪರ್ಕಿಸಬಹುದು ಮತ್ತು ಇದನ್ನು ಒಂದು ಸ್ಮರಣಯ ದಿನವಾಗಿಸಬಹುದು.

### ತುಲಾ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು. ಅವನು(ಳು) ನಿಮ್ಮ ನಿರೀಕ್ಷೆಗಳನ್ನು ಪೂರೈಸುವುದು ನಿಮ್ಮ ಕನಸನ್ನು ನನಸಾಗಿಸಬಹುದು

### ವೃಶ್ಚಿಕ ರಾಶಿ

ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ.

### ಧನು ರಾಶಿ

ನಿಮ್ಮ ಮನಸ್ಸಿನಲ್ಲಿ ಸಕಾರಾತ್ಮಕ ಆಲೋಚನೆಗಳನ್ನು ತನ್ನಿ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ – ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ನಿಮ್ಮ ಹತ್ತಿರದ ಜನರು ವೈಯಕ್ತಿಕ ಮಟ್ಟದಲ್ಲಿ ನಿಮಗೆ ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ.

### ಮಕರ ರಾಶಿ

ಕೆಲಸದ ಒತ್ತಡ ಇಂದು ಸ್ವಲ್ಪ ಒತ್ತಡ ತರಬಹುದು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ. ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧ ಯಾರಾದರೊಬ್ಬರ ಹಸ್ತಕ್ಷೇಪದಿಂದ ಹಾಳಾಗಬಹುದು. ನಿಮ್ಮ ಅಭಿಪ್ರಾಯ ಕೇಳಿದಾಗ ಅದನ್ನು ವ್ಯಕ್ತಪಡಿಸಲು ನಾಚಬೇಡಿ ಇದಕ್ಕೆ ನಿಮಗೆ ತುಂಬ ಮೆಚ್ಚುಗೆ ಸಿಗುತ್ತದೆ.

### ಕುಂಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ನಿಮ್ಮ ಜ್ಞಾನದಾಹ ನಿಮಗೆ ಹೆಣಟಿಜಜಜಿಟಿಜಜಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಯಾರಾದರೂ ನಿಮ್ಮ ಹೆಸರು ಕೆಡಿಸಲು ಪ್ರಯತ್ನಿಸಬಹುದದ್ದರಿಂದ ಜಾಗರೂಕರಾಗಿರಿ.

### ಮೀನ ರಾಶಿ

ನಿಮ್ಮ ಕುಟುಂಬದ ನೀವು ಕಿರಿಕಿರಿ ಸಾಧ್ಯವಾಯಿತು ಇದು ನಿಮ್ಮಿಂದ ಸಾಕಷ್ಟು ನಿರೀಕ್ಷಿಸುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

# ಭಾರತೀಯ ಸೇನೆ ಪ್ರೋತ್ಸಾಹಿಸಲು ತಿರಂಗಾಯಾತ್ರೆ ಬೆಂಬಲಿಸಿ; ಬಿ.ಜೆ.ಸಚಿನ್



**ಮಾಯಕೊಂಡ;** 'ಪೆಹಲ್ಗಾಮ್ ದಾಳಿಗೆ ಪ್ರತಿರೋಧ ತೋರಿ, ಉಗ್ರರ ಹುಟ್ಟಡಗಿಸಿದ ಸೇನೆಯನ್ನು ಪ್ರೋತ್ಸಾಹಿಸಲು ಮಾಯಕೊಂಡದಲ್ಲಿ ಗುರುವಾರ ನಡೆಯಲಿರುವ ತಿರಂಗಾಯಾತ್ರೆ ನಾಗರಿಕರು ಬೆಂಬಲಿಸಬೇಕು, ಎಂದು ಬಿಜೆಪಿಯ ಮಾಯಕೊಂಡ ಮಂಡಲ ಅಧ್ಯಕ್ಷ ಬಿ.ಜಿ.ಸಚಿನ್ ಕರೆನೀಡಿದರು.

ಇಲ್ಲಿನ ಪ್ರವಾಸಿ ಮಂದಿರದಿರದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡಿದರು.

ತಿರಂಗಾಯಾತ್ರೆ ಕೇವಲ ಬಿಜೆಪಿ ಪಕ್ಷದಿಂದ ನಡೆಯದೇ ದೇಶಾಭಿಮಾನಿಗಳಿಂದ ನಡೆಯುತ್ತಿದೆ. ತಿರಂಗಾಯಾತ್ರೆಯಲ್ಲಿ ಸೇನೆಯ ನಿವೃತ್ತ ಯೋಧರು ಭಾಗವಹಿಸುತ್ತಾರೆ. ಮಾಯಕೊಂಡದಲ್ಲಿ ಗುರುವಾರ ತಿರಂಗಾಯಾತ್ರೆ ಹಮ್ಮಿಕೊಳ್ಳಲಾಗಿದೆ. ಪಕ್ಷದ ಧ್ವಜ ಬಳಸದೇ ರಾಷ್ಟ್ರಧ್ವಜ ಬಳಸುತ್ತೇವೆ.

.ಶಾಲಾ-ಕಾಲೇಜು ವಿದ್ಯಾರ್ಥಿಗಳು, ನಿವೃತ್ತ ನೌಕರರು, ಸಂಘ ಸಂಸ್ಥೆಗಳು ಭಾಗವಹಿಸಬಹುದು. ಕೆಲವರ ಹೇಳಿಕೆಗಳಿಂದಾಗಿ ಸೈನಿಕರ ಆತ್ಮಸ್ಥೈರ್ಯ ಕುಂದಬಾರದೆಂದು ತಿರಂಗಾಯಾತ್ರೆ ನಡೆಸಲಾಗುತ್ತಿದೆ. ತಿರಂಗಾ ಯಾತ್ರೆಯನ್ನು ಪಕ್ಷಬೇಧ ಮರೆತು ದೇಶಭಕ್ತರು ಬೆಂಬಲಿಸಬೇಕು, ಎಂದು ಕರೆನೀಡಿದರು.

ಬಿಜೆಪಿಯಲ್ಲಿ ರವೀಂದ್ರನಾಥ್ ಮತ್ತು ಸಿದ್ದೇಶ್ವರ್ ಬಣಗಳು ಅಂಥಾ ಇಲ್ಲ, ಸಣ್ಣಪುಟ್ಟ ವ್ಯತ್ಯಾಸಗಳಿವೆ. ಎಲ್ಲರೂ ನಮ್ಮ ನಾಯಕರು. ಪದಗ್ರಹಣ ಕಾರ್ಯಕ್ರಮ ನಡೆದಾಗ ಬಣ ಗಲಾಟೆಯಾಗಿಲ್ಲ ಎಂದರು.

ಮಾಜಿ ಮಂಡಲ ಅಧ್ಯಕ್ಷ ಬಿ.ಎಸ್. ರಮೇಶ್,

ಭಾರತೀಯ ಸೇನೆಯ ಪರಾಕ್ರಮ ಪ್ರೋತ್ಸಾಹಿಸಲು ರಾಜ್ಯ ವರಿಷ್ಠರ ಅಣತಿಯಂತೆ ಮಾಯಕೊಂಡ ಕ್ಷೇತ್ರ ಬಿಜೆಪಿಯಿಂದ ಮದಕರಿ ನಾಯಕರ ಸಮಾಧಿಯಿಂದ ತಿರಂಗಾಯಾತ್ರೆ

ಆರಂಭಿಸಲಾಗುತ್ತದೆ. 26 ಭಾರತೀಯರ ಹತ್ಯೆ ಮಾಡುವಾಗಲೂ ಉಗ್ರರು ಧರ್ಮ ಯಾವುದುದೆಂದು ಕೇಳಿ, ಹತ್ಯೆ ಮಾಡಿದ್ದು, ತೀರ ಅಸಹ್ಯ. ಪ್ರಧಾನಿ ಮತ್ತು ಗೃಹ ಸಚಿವರು ಕೂಡಲೇ ಸಭೆ ಕರೆದು ಮಿಲಿಟರಿಗೆ ಅಧಿಕಾರ ನೀಡಿದರು. ಸಾರ್ವಜನಿಕ ತೊಂದರೆಯಾಗದಂತೆ ಉಗ್ರರು ಅಡಗಿದ್ದ 9 ಬಂಕರ್ ನಾಶಪಡಿಸಲಾಗಿದೆ, ಎಂದರು.

ಜಿಲ್ಲಾ ಎಸ್ಟಿ ಮೋರ್ಚಾ ಅಧ್ಯಕ್ಷ ಕೃಷ್ಣಕುಮಾರ್, ಶಾಲಾ ಕೊಠಡಿ, ವಸತಿ ಶಾಲೆ ಉದ್ಘಾಟನೆಗೆ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಂಸದರು ಆಹ್ವಾನಿಸಿದರೂ ಬಂದಿರಲಿಲ್ಲ. ಮಾಜಿ ಸಂಸದರ ಸಿದ್ದೇಶ್ವರ ಯಾವುದೇ ಚಿಕ್ಕ ಹಳ್ಳಿಯ ಕಾರ್ಯಕ್ರಮಕ್ಕೆ ಬರುತ್ತಿದ್ದರು ಎಂದು ಸ್ಮಸಿಸಿದರು.

ಬಿಜೆಪಿ ಮುಖಂಡ ಕಲ್ಲೇಶ್, ತಲೆ ಸರಿಯಿಲ್ಲದ ಶಾಸಕನೋರ್ವ ಪೆಹಲ್ಗಾಮ್ ದಾಳಿಗೆ ಸಾಕ್ಷಿ ಕೇಳುತ್ತಿದ್ದಾನೆ. ಸಾಕ್ಷಿ ಇಡಲು ಸಾಧ್ಯವೆ? ಕಾಂಗ್ರೆಸ್ ಪಕ್ಷ ತೀರಾ ಕೆಳಮಟ್ಟಕ್ಕೆ ಇಳಿದಿದೆ ಎಂದು ಆರೋಪಿಸಿದರು.

ಮಾಯಕೊಂಡ ಮಂಡಲ ಪ್ರಧಾನ ಕಾರ್ಯದರ್ಶಿ ಕರೆಲಕ್ಕೇನಹಳ್ಳಿ ಒಂಕಾರಪ್ಪ, ತಾಲ್ಲೂಕು ಯುವಮೋರ್ಚಾ ಪ್ರಧಾನ ಕಾರ್ಯದರ್ಶಿ ರಾಕೇಶ್, ಮಾಯಕೊಂಡ ಮಂಡಲ ಮಾಜಿ ಪ್ರಧಾನ ಕಾರ್ಯದರ್ಶಿ ಪೂಜಾರ್ ಅಶೋಕ್, ಒಬಿಸಿ ಪ್ರಧಾನ ಕಾರ್ಯದರ್ಶಿ ರಾಜಶೇಖರ್, ಮುಖಂಡರಾದ ಎಂ.ಜಿ. ಗುರುನಾಥ್, ದ್ವಾರಕೀಶ್, ಹೆದ್ನೆ ದಿವಾಕರ್, ಅಣಬೇರು ನಂದನ್ ಕುಮಾರ್, ಪೊರಕೆ ಮಾಲತೇಶ್, ಗುಡ್ಡಿ ತಿಪ್ಪೇಶ್, ಪೂಜಾರ್ ಶಶಿಧರ್, ಪೊರಕೆ ಮಂಜಣ್ಣ ಮತ್ತಿತರರು ಇದ್ದರು.

**ರಾಜ್ಯ ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಶೂನ್ಯ. ಹಿಂದಿನ ಸರ್ಕಾರದ ಅನುದಾನಕ್ಕೂ ತಡೆ**

**ರಾಜ್ಯ ಸರ್ಕಾರದಲ್ಲಿ 2ವರ್ಷದಿಂದ ಯಾವುದೇ ಅಭಿವೃದ್ಧಿ ಕಾರ್ಯಕ್ರಮ ನಡೆದಿಲ್ಲ. ನಮ್ಮ ಕ್ಷೇತ್ರದಲ್ಲಿ ನೆಡೆಯುತ್ತಿರುವ ಸಿಸಿ ರಸ್ತೆ, ಚರಂಡಿ ಕಾಮಗಾರಿಗಳೂ ಬಿಜೆಪಿ ಸರ್ಕಾರದಲ್ಲಿ ಮಂಜೂರಾಗಿದ್ದವು. ಸರ್ಕಾರ ಕೊಡಗನೂರು ಕೆರೆ ದುರಸ್ತಿ ಶೀಘ್ರ ಮುಗಿಸಬೇಕು. ಅಡೆತಡೆ ಸರಿಯಾಗಿ ನಿರ್ವಹಿಸಬೇಕು. ಎಸ್ಸಿಪಿ, ಟಿಎಸ್ಪಿ ಅನುದಾನ ಕೂಡಾ ಬಳಕೆ ಮಾಡದಿರುವುದು, ಸಂವಿಧಾನ ವಿರೋಧಿ ನಡೆಯಾಗಿದೆ. ನೂತನ ಸಂಸದರು ಗ್ರಾಮಗಳಿಗೆ ಭೇಟಿ ನೀಡುತ್ತಿಲ್ಲ, ಎಸ್ ಎಸ್ ಆಸ್ಪತ್ರೆ, ಬಾಪೂಜಿ ಆಸ್ಪತ್ರೆ ಅಭಿವೃದ್ಧಿ ಪಡಿಸುತ್ತಿದ್ದಾರೆ, ಈಗಿನ ಶಾಸಕರು ಹಿಂದಿನ ಬಿಜೆಪಿ ಕಾಲದ ಕೆಲಸಗಳನ್ನು ಮಾಡಲಿಕ್ಕೆ ಬಿಡದೇ ಬದಲಾವಣೆ ಮಾಡಿದ್ದಾರೆ. ಹಿಂದಿನ ಸರ್ಕಾರದ 6.47 ,ಕೋಟಿ ಆರ್ಡಿಪಿಆರ್ ಮತ್ತು ಎಸ್ಸಿಪಿ ಟಿಎಸ್ಪಿಯ 4.50 ಕೋಟಿ ಅನುದಾನ ಲ್ಯಾಂಡ್ ಆರ್ಮಿಗೆ ಬಿಡುಗಡೆಯಾಗಿದ್ದರೂ ಕೆಲಸವಾಗಿಲ್ಲ, ಎಂದು ಮಂಡಲ ಅಧ್ಯಕ್ಷ ಬಿ.ಜೆ ಸಚಿನ್ ಮತ್ತು ಮಾಜಿ ಮಂಡಲ ಅಧ್ಯಕ್ಣ. ಬಸವಾಪುರ ರಮೇಶ್ ಆರೋಪಿಸಿದರು.**

# ಬಿತ್ತನೆ ಬೀಜ ಹಾಗೂ ರಸಗೊಬ್ಬರ ಕೃತಕ ಅಭಾವ ಸೃಷ್ಟಿಸುವವರ ವಿರುದ್ಧ ಕ್ರಮಕ್ಕೆ ಆಗ್ರಹ



**ದಾವಣಗೆರೆ:** ಬಿತ್ತನೆ ಮೆಕ್ಕೇಜೋಳ ಬೀಜದ ದರ ಹೆಚ್ಚಳ ವಿರೋಧಿಸಿ ಮತ್ತು ರಸಗೊಬ್ಬರ ಕೃತಕ ಅಭಾವ ಖಂಡಿಸಿ ರಾಜ್ಯ ರೈತ ಸಂಘ ಹಸಿರು ಸೇನೆ ಹುಚ್ಚವ್ವನಹಳ್ಳಿ ಮಂಜುನಾಥ್ ಬಣದಿಂದ ಬುಧವಾರ ಜಿಲ್ಲಾ ಕೃಷಿ ಇಲಾಖೆ ಜಂಟಿ ನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು.

ಈಗಾಗಲೇ ಜಿಲ್ಲಾದ್ಯಂತ ಮುಂಗಾರು ಪೂರ್ವ ಮಳೆ ಉತ್ತಮವಾಗಿದ್ದು, ರೈತಾಪಿ ವರ್ಗ ಜಮೀನುಗಳನ್ನು ಹಸನು ಮಾಡಿಕೊಂಡು ಬಿತ್ತನೆಗಾಗಿ ಕಾಯುತ್ತಿದ್ದಾರೆ. ಇದರ ಮಧ್ಯೆ ಜಿಲ್ಲೆಯ ಪ್ರಮುಖ ಬೆಳೆಯಾದ ಮೆಕ್ಕೇಜೋಳ ಬಿತ್ತನೆ ಬೀಜ ಪ್ರತಿ ಪ್ಯಾಕೆಟ್ ದರ ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ 300 ರಿಂದ 500 ರೂಗೆ ಹೆಚ್ಚಳವಾಗಿದೆ. ಇದು ನಗರ ಪ್ರದೇಶಗಳಲ್ಲಿ ಹೆಚ್ಚಳವಾದ ದರವಾದರೆ, ಗ್ರಾಮೀಣ ಪ್ರದೇಶದಲ್ಲಿ 500 ರಿಂದ 1000 ರೂ ಹೆಚ್ಚಳವಾಗಿದೆ ಎಂಬ ಮಾತುಗಳು ಕೇಳಿಬರುತ್ತಿವೆ ಎಂದು ಮನವಿಯಲ್ಲಿ ದೂರಲಾಗಿದೆ.

ಇನ್ನು ಡಿಎಪಿ ಗೊಬ್ಬರದ ಕೊರತೆಯನ್ನು ಕೃತಕವಾಗಿ ಸೃಷ್ಟಿಸಲಾಗುತ್ತಿದೆ. ಈ ಮೂಲಕ ವರ್ತಕರು ರೈತರಿಂದ 3500 ರೂ. ವರೆಗೂ ಪ್ರತಿ ಕ್ವಿಂಟಲ್ ಡಿಎಪಿ ಮಾರಾಟ ಮಾಡುತ್ತಿದ್ದಾರೆ. ಈಗಾಗಲೇ ದಾವಣಗೆರೆ ತಾಲೂಕಿನಾದ್ಯಂತ ಡಿಎಪಿ ಗೊಬ್ಬರದ ಕೃತಕ ಅಭಾವ ಸೃಷ್ಟಿಸಲಾಗಿದೆ ಎಂದು ರೈತರು ಆರೋಪಿಸಿದರು.

ಕಾವೇರಿ ಕಂಪನಿ ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ 250 ರೂ ಹೆಚ್ಚಿಸಿದೆ. ಈ ಮೂಲಕ ಬೀಜ ಉತ್ಪಾದನಾ ಕಂಪನಿ ಮತ್ತು ಮಾರಾಟಗಾರರು ರೈತರ ಮೇಲೆ ಪ್ರಹಾರ ಮಾಡಲು ಹೊರಟಿದ್ದಾರೆ ಎಂದು ದೂರಿದರು.

ಕೂಡಲೇ ಕಳೆದ ವರ್ಷದ ದರದಲ್ಲಿಯೇ ಮೆಕ್ಕೇಜೋಳದ ಬಿತ್ತನೆ ಬೀಜಗಳ ಮಾರಾಟ ನಡೆಯಬೇಕು ಹಾಗೂ ಡಿಎಪಿ ಗೊಬ್ಬರದ ಕೃತಕ ಅಭಾವ ಸೃಷ್ಟಿಸುವವರ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಮನವಿ ಸ್ವೀಕರಿಸಿದ ಜಂಟಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್ ಮಾತನಾಡಿ, ಕೂಡಲೇ ವಿಚಕ್ಷಣ ದಳ ರಚನೆ ಮಾಡಿ ಕಾಳ ಸಂತೆಯಲ್ಲಿ ಗೊಬ್ಬರ ಮಾರಾಟಗಾರರು ಮತ್ತು ಹೆಚ್ಚಿನ ಬೆಲೆಗೆ ಬಿತ್ತನೆ ಬೀಜ ಮಾರಾಟ ಮಾಡುವವರ ವಿರುದ್ಧ ನಿಗಾವಹಿಸಲಾಗುವುದು ಎಂದರು.

ಎಲ್ಲ ರೈತರಿಗೂ ಸಮರ್ಪಕವಾಗಿ ಗೊಬ್ಬರ ಮತ್ತು ಬೀಜ ಸಿಗುವ ವ್ಯವಸ್ಥೆಯನ್ನು ಮುಂದಿನ ಮೂರ್ನಾಲ್ಕು ದಿನಗಳಲ್ಲಿ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹೂವಿನಮಡು ನಾಗರಾಜ್, ಹುಚ್ಚವ್ವನಹಳ್ಳಿ ಪ್ರಕಾಶ್, ದಯಾನಂದ, ಗುಮ್ಮನೂರು ರುದ್ರೇಶ್, ಚಿನ್ನಸಮುದ್ರ ಸುರೇಶ್ ನಾಯ್ಕ, ದೇವನಾಯ್ಕ್, ಗಿರಿಯಾಪುರ ಗಂಗಾಧರ ಸ್ವಾಮಿ, ಹೊನ್ನಮರಡಿ ಶಿವಕುಮಾರ್, ಪಾಲನಾಯಕನ ಕೋಟೆ ಮಾರನಾಯ್ಕ, ಬೋರಗೊಂಡನಹಳ್ಳಿ ಕಲ್ಲೇಶ್, ಆಲೂರು ಪರಶುರಾಮ್, ಆನಗೋಡು ಭೀಮಣ್ಣ, ಕಬ್ಬೂರು ಪ್ರಸನ್ನ, ಮಲ್ಲಿಕಾರ್ಜುನ್, ನಾಗರಾಜ್, ಶಾಮನೂರು ನಾಗರಾಜ್, ಯರವನಾಗತಿಹಳ್ಳಿ ಅಣ್ಣಪ್ಪ, ಬಿ.ಆರ್.ಅಣ್ಣಪ್ಪ, ಬೋರಗೊಂಡನಹಳ್ಳಿ ಹಾಲೇಶ್ ಇತರರು ಉಪಸ್ಥಿತರಿದ್ದರು.

## ಡಿಜಿಟಲ್ ವ್ಯವಸ್ಥೆಯ ಮೂಲಕವೇ ಭೂದಾಖಲೆಗಳ ವಿತರಣೆ

**ದಾವಣಗೆರೆ :** ಭೂ ಸುರಕ್ಷಾ ಯೋಜನೆಯಡಿ ಕಂದಾಯ ದಾಖಲೆಗಳನ್ನು ಡಿಜಿಟಲ್ ವ್ಯವಸ್ಥೆಯ ಮೂಲಕವೇ ಡಿಜಿಟಲ್ ಭೂ ದಾಖಲೆಗಳ ವಿತರಣೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

ಕಂದಾಯ ದಾಖಲೆಗಳನ್ನು ಡಿಜಿಟಲ್ ವ್ಯವಸ್ಥೆಯ ಮೂಲಕವೇ ಜಾರಿಗೆ ತರುವ ಉದ್ದೇಶದಿಂದ ಪ್ರಾರಂಭಿಕ ಹಂತದಲ್ಲಿ ಪ್ರತಿ ದಿನ ಕನಿಷ್ಠ 10 ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಪಡೆದು, ಡಿಜಿಟಲ್ ಪ್ರತಿಗಳನ್ನು ತಂತ್ರಾಂಶದಲ್ಲಿಯೇ 2 ದಿನಗಳೊಳಗಾಗಿ ನೀಡಲು, ದಾಖಲೆಯು ಸ್ಕ್ಯಾನಿಂಗ್ ಆಗದೇ ಇದ್ದಲ್ಲಿ 7 ದಿನಗಳೊಳಗಾಗಿ ಸ್ಕ್ಯಾನಿಂಗ್ ಮಾಡಿ ಡಿಜಿಟಲ್ ಪ್ರತಿಯನ್ನೇ ಸಾರ್ವಜನಿಕರಿಗೆ ವಿತರಿಸಬೇಕು.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಈ ವ್ಯವಸ್ಥೆಯನ್ನು ಜಾರಿಗೆ ತರಲು ತಿಳಿಸಲಾಗಿದ್ದು ಜೂನ್ 2025 ರ ನಂತರ ಕಡ್ಡಾಯವಾಗಿ ಕಂದಾಯ ದಾಖಲೆಗಳನ್ನು ಡಿಜಿಟಲ್ ಭೂ ದಾಖಲೆಗಳ ವಿತರಣೆ ಮೂಲಕ ಸಾರ್ವಜನಿಕರಿಗೆ ಒದಗಿಸಲಾಗುವುದು.

ಈ ಜಿಲ್ಲೆಯ ಎಲ್ಲಾ ಕಂದಾಯ ಕಚೇರಿಗಳ ಅಭಿಲೇಖಾಲಯಗಳಲ್ಲಿ ನೀಡುವ ದೃಢೀಕೃತ ನಕಲು ಪ್ರತಿಗಳನ್ನು ಕಡ್ಡಾಯವಾಗಿ ಕಂದಾಯ ದಾಖಲೆಗಳ ಗಣಕೀಕರಣ ತಂತ್ರಾಂಶದ ಮೂಲಕ ವಿತರಣೆ ಮಾಡಲಾಗುವುದು.

## ಮೇ 27 ರಂದು ದಿಶಾ ಸಭೆ

**ಚಿಕ್ಕಮಗಳೂರು:** ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ(ದಿಶಾ)ಯು ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರ ಅಧ್ಯಕ್ಷತೆಯಲ್ಲಿ ಹಾಗೂ ಹಾಸನ ಸಂಸದ

ಶ್ರೇಯಸ್ ಎಂ.ಪಟೇಲ್ ಅವರ ಸಹ ಅಧ್ಯಕ್ಷತೆಯಲ್ಲಿ ಮೇ 27 ರಂದು 11 ಗಂಟೆಗೆ ಜಿಲ್ಲಾ ಪಂಚಾಯಿತಿಯ ಅಬ್ದುಲ್ ಸಜೀರ್ ಸಾಬ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ ತಿಳಿಸಿದ್ದಾರೆ.

## ಮೇ.26 ಮತ್ತು 27ರಂದು ಲೋಕಾಯುಕ್ತ ಅಧಿಕಾರಿಗಳ ಪ್ರವಾಸ ಸಾರ್ವಜನಿಕರ ಅಹವಾಲು ಸ್ವೀಕಾರ

**ಚಿತ್ರದುರ್ಗ:** ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಅಧಿಕಾರಿಗಳು ಜಿಲ್ಲೆಯ ಎಲ್ಲ ತಾಲ್ಲೂಕುಗಳಿಗೆ ಭೇಟಿ ನೀಡಿ ಸಾರ್ವಜನಿಕರಿಂದ ದೂರು ಅಹವಾಲುಗಳನ್ನು ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಲೋಕಾಯುಕ್ತ ಪೊಲೀಸ್ ನಿರೀಕ್ಷಕರು-1 ಮೇ.26ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹಿರಿಯೂರು ನಗರಸಭೆಯಲ್ಲಿ ಉಪಸ್ಥಿತರಿದ್ದು, ಸಾರ್ವಜನಿಕರಿಂದ ದೂರು, ಅಹವಾಲು ಸ್ವೀಕರಿಸುವರು. ಅದೇ ದಿನ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ರವರೆಗೆ ಮೊಳಕಾಲ್ಮುರು ಪಟ್ಟಣ ಪಂಚಾಯಿತಿಯಲ್ಲಿ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಳ್ಳಕೆರೆ ನಗರಸಭೆಯಲ್ಲಿ ಪೊಲೀಸ್ ನಿರೀಕ್ಷಕರು-2 ಹಾಜರಿದ್ದು, ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ನಿಗದಿತ ಅರ್ಜಿ ನಮೂನೆಯಲ್ಲಿ ಸ್ವೀಕರಿಸುವರು.

ಪೊಲೀಸ್ ಉಪಾಧೀಕ್ಷಕರು ಮೇ.27ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಚಿತ್ರದುರ್ಗ ನಗರಸಭೆಯಲ್ಲಿ ಹಾಜರಿದ್ದು, ಸಾರ್ವಜನಿಕರಿಂದ ದೂರು,

ಅಹವಾಲು ಸ್ವೀಕರಿಸುವರು. ಅದೇ ದಿನ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ರವರೆಗೆ ಹೊಸದುರ್ಗ ಪುರಸಭೆ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಹೊಳಲ್ಕೆರೆ ಪುರಸಭೆಯಲ್ಲಿ ಪೊಲೀಸ್ ನಿರೀಕ್ಷಕರು-3 ಹಾಜರಿದ್ದು, ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ನಿಗದಿತ ಅರ್ಜಿ ನಮೂನೆಯಲ್ಲಿ ಸ್ವೀಕರಿಸುವರು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎನ್. ವಾಸುದೇವರಾಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾತೃ ಹೃದಯದಿಂದ ಮಕ್ಕಳ ಸಮಸ್ಯೆಗೆ ಸ್ಪಂದಿಸಿ: ಡಾ.ಕೆ.ಟಿ.ತಿಪ್ಪೇಸ್ವಾಮಿ




**ಚಿಕ್ಕಮಗಳೂರು:** ಮಾತೃ ಹೃದಯದಿಂದ ಮಕ್ಕಳ ಸಮಸ್ಯೆಗೆ ಸ್ಪಂದಿಸಿ ಅವರನ್ನು ಸಮಸ್ಯೆಯಿಂದ ಮುಕ್ತರನ್ನಾಗಿಸಿ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಹೇಳಿದರು.

ಇಂದು ನಗರದ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಿ ಮಕ್ಕಳ ಮೇಲಾಗುತ್ತಿರುವ ದೌರ್ಜನ್ಯ, ಸಮಸ್ಯೆಗಳಿಂದ ಅವರನ್ನು ಮುಕ್ತರನ್ನಾಗಿಸಿ ಅನ್ಯಾಯವಾಗುವುದನ್ನು ತಡೆದು ಕಾಣೆಯಾಗುತ್ತಿರುವ ಪ್ರಕರಣಗಳನ್ನು ತಡೆಗಟ್ಟಲು ಅಧಿಕಾರಿಗಳಿಗೆ ಸೂಚಿಸಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶಶಿಧರ್ ಕೋಸಂಬೆ ಮಾತನಾಡಿ, ಪ್ರೌಢಶಾಲೆ, ಕಾಲೇಜುಗಳಲ್ಲಿ ಪೋಕ್ಸೋ ಕಾಯ್ದೆ ಮುಂತಾದ ಕಾಯಿದೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಮಹಿಳಾ ಪೊಲೀಸ್ ಅಧಿಕಾರಿಗಳು ಹಮ್ಮಿಕೊಳ್ಳಲು ಸೂಚಿಸಿದರು. ಕಾಣೆಯಾಗುತ್ತಿರುವ ಪ್ರಕರಣಗಳನ್ನು ಸಂಗ್ರಹಿಸುವುದಲ್ಲದೆ, ಅವರ ವಿವರಗಳನ್ನು ದಾಖಲಿಸಿ ಅವರು ಕಾಣೆಯಾಗಲು ಕಾರಣವನ್ನು ತಿಳಿದು ಮುಂದೆ ಅಂತಹ ಪ್ರಕರಣ ದಾಖಲಾಗದಂತೆ ಎಚ್ಚರ ವಹಿಸಲು ನಿರ್ದೇಶನ ನೀಡಿದರು. ತೆರೆದ ಮನೆ ಕಾರ್ಯಕ್ರಮ ಕಡಿಮೆಯಾಗುತ್ತಿದ್ದು, ಇತ್ತೀಚೆಗೆ ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚಾಗಿರುವುದರಿಂದ ಖಾಸಗಿ ಶಾಲೆ ಹಾಗೂ ಸರ್ಕಾರಿ ಶಾಲೆಯ ಮುಖ್ಯಸ್ಥರುಗಳ ಜೊತೆ ಕಡ್ಡಾಯವಾಗಿ ಸಭೆ ನಡೆಸಿ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಸರ್ಕಾರಿ ಹಾಗೂ ಖಾಸಗಿ ಶಾಲಾಕಾಲೇಜುಗಳಲ್ಲಿ ಪೋಕ್ಸೋ ಪ್ರಕರಣಗಳು ಹೆಚ್ಚು ದಾಖಲಾಗಿರುವುದರಿಂದ ಮಹಿಳಾ ಪೊಲೀಸ್ ಅಧಿಕಾರಿಗಳು ಅಲ್ಲಿಗೆ ಭೇಟಿ ನೀಡಿ ಅವರಿಗೆ ಅರಿವು ಮೂಡಿಸುವ ಕೆಲಸ ಮಾಡಬೇಕು. ಪೊಲೀಸ್ ಠಾಣೆಗೆ ಮಕ್ಕಳು ತಮ್ಮ ಸಮಸ್ಯೆಯನ್ನು ಹೇಳಲು ಬರುವ ಸಮಯದಲ್ಲಿ ಅವರಿಗೆ ಅಧಿಕಾರಿಗಳು ಸ್ಪಂದಿಸಿ ಅವರ ಸಮಸ್ಯೆಯನ್ನು ನಿಧಾನಗತಿಯಲ್ಲಿ ಆಲಿಸಬೇಕು, ಅದಲ್ಲದೆ ಅವರ ಮೇಲೆ ಯಾವುದೇ ರೀತಿಯ ದಬ್ಬಾಳಿಕೆ ಮಾಡುವುದಾಗಲಿ, ಅವರನ್ನು ಭಯಪಡಿಸಿ ಸತ್ಯವನ್ನು ಮುಚ್ಚಿಡುವುದಾಗಲಿ ಮಾಡಬಾರದು. ಇಂತಹ ದೂರುಗಳು ಕಂಡು ಬಂದಲ್ಲಿ ಸಂಬಂಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ವಿರುದ್ಧ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನಂತರ ತಾಲ್ಲೂಕಿನ ಅಲ್ಲಂಪುರ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯ ಲೋಪದೋಷಗಳನ್ನು ಗಮನಿಸಿ ಅಸಮಾಧಾನ ವ್ಯಕ್ತಪಡಿಸಿ ಅವುಗಳನ್ನು ಮುಂದಿನ ದಿನಗಳಲ್ಲಿ ಸರಿಪಡಿಸಿಕೊಳ್ಳುವಂತೆ ಸೂಚನೆ ನೀಡಿದರು. ಅನಂತರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸಿದರಲ್ಲದೆ, ಅಲ್ಲಿನ ವೈದ್ಯಾಧಿಕಾರಿಗಳ ಜೊತೆ ಚರ್ಚೆ ನಡೆಸಿದರು.

# ಮೂಲಸೌಲಭ್ಯವಿರುವ ಕೆರೆಗಳಲ್ಲಿ ಜಲಸಾಹಸ ಕ್ರೀಡೆ ಆರಂಭಿಸಿ



**ಚಿಕ್ಕಮಗಳೂರು:** ಪ್ರಾಥಮಿಕ ಹಂತದಲ್ಲಿ ಎಲ್ಲೆಲ್ಲಿ ಮೂಲಭೂತ ಸೌಕರ್ಯಗಳು ಲಭ್ಯವಿವೆ ಅಂತಹ ಎರಡು-ಮೂರು ಕೆರೆಗಳನ್ನು ಗುರುತಿಸಿ ಜಲಸಾಹಸ ಕ್ರೀಡೆಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಬೇಕು ನಡೆಸುವಂತೆ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಸಂಜೆ ನಡೆದ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಪ್ರವಾಸಿಗರು ಹೆಚ್ಚಾಗಿ ಭೇಟಿ ನೀಡುವ ಕೆರೆಗಳನ್ನು ಮಾತ್ರ ಈ ಯೋಜನೆಗೆ ಬಳಸಿಕೊಳ್ಳುವುದು ಅಗತ್ಯ. ಅನಂತರ ಯಾವ ಯಾವ ಕೆರೆಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಲು ಅವಕಾಶವಿದೆಯೋ ಅಂತಹ ಕೆರೆಗಳನ್ನು ಮಾತ್ರ ಗುರುತಿಸಿಕೊಳ್ಳಬೇಕು. ಜಲಸಾಹಸ ಕ್ರೀಡೆಗಳನ್ನು ಆರಂಭಿಸಲು ಪೂರಕವಾಗಿ ರಸ್ತೆ ಸೌಲಭ್ಯ, ಸ್ವಚ್ಛತೆ, ಸುರಕ್ಷತೆ ಹಾಗೂ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲು ಅವಕಾಶವಿರುವ ಬಗ್ಗೆ ಗಮನ ಹರಿಸಬೇಕು ಎಂದರು.

ಒಮ್ಮೆ ಜಲಸಾಹಸ ಕ್ರೀಡೆಗಳನ್ನು ಆರಂಭಿಸಿದ ನಂತರ ಕೆರೆಗಳಲ್ಲಿ ನೀರು ಬತ್ತಿಹೋಗುವಂತಹ ಪರಿಸ್ಥಿತಿ ಬರಬಾರದು. ಪ್ರವಾಸಿಗರು ಹೆಚ್ಚಾಗಿ ಭೇಟಿ ನೀಡುವ ಸುತ್ತಮುತ್ತಲ ಕಡೆಗಳಲ್ಲಿರುವ ಬೃಹತ್ ಕೆರೆಗಳಲ್ಲಿ ಜಲಸಾಹಸ ಕ್ರೀಡೆಗಳನ್ನು ಆರಂಭಿಸುವ ಮುನ್ನ ಸಾಧಕ-ಬಾಧಕಗಳನ್ನು ಪರಿಶೀಲಿಸಿ ಟೆಂಡರ್ ಪ್ರಕ್ರಿಯೆ ಈ ಹಿನ್ನೆಲೆಯಲ್ಲಿ ಕೆರೆಗಳಲ್ಲಿ ನೀರಿನ ಲಭ್ಯತೆ ಕುರಿತು ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ಪತ್ರ ಬರೆದು ಮಾಹಿತಿ ಪಡೆದ ಅನಂತರ ಟೆಂಡರ್ ಪ್ರಕ್ರಿಯೆ ನಡೆಸುವಂತೆ ಸೂಚನೆ ನೀಡಿದರು.

ಇದಕ್ಕೂ ಮೊದಲು ಮಾತನಾಡಿದ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಆರ್.ಲೋಹಿತ್ ಹಾಗೂ ಸಣ್ಣ ನೀರಾವರಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ದಕ್ಷಿಣಾಮೂರ್ತಿ ಮಾಹಿತಿ ನೀಡಿ, ಅಯ್ಯನಕೆರೆ, ಮದಗದ ಕೆರೆ, ವಿಷ್ಣುಸಮುದ್ರ, ರಾಮೇಶ್ವರಕೆರೆ,

ಹೇಮಗಿರಿಕೆರೆ, ಮಾಗಡಿ ಕೆರೆ, ಹಿರೇಕೊಳಲೆಕೆರೆ, ಬುಕ್ಕಾಂಬುಧಿಕೆರೆ, ಬೆಳವಾಡಿಕೆರೆ, ತರೀಕೆರೆಯ ದೊಡ್ಡಕೆರೆ ಹೀಗೆ ಆಯ್ದ ದೊಡ್ಡ ಕೆರೆಗಳ ವ್ಯಾಪ್ತಿಯಲ್ಲಿ ರಸ್ತೆ ವ್ಯವಸ್ಥೆ ಇದ್ದು, ಇತರ ಮೂಲ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಿ ಜಲಸಾಹಸ ಕ್ರೀಡೆಗಳನ್ನು ಆರಂಭಿಸಲು ಅವಕಾಶವಿರುವ ಬಗ್ಗೆ ಗಮನ ಸೆಳೆದರು. ಇಂಥ ಕೆರೆಗಳಲ್ಲಿ ಜಲಸಾಹಸ ಕ್ರೀಡೆಗಳನ್ನು ಆರಂಭಿಸಬಹುದು ಎಂದು ಈಗಾಗಲೇ ಕರ್ನಾಟಕ ಕೆರೆ ಅಭಿವೃದ್ಧಿ ಪ್ರಾಧಿಕಾರವು ಅನುಮತಿ ನೀಡಿದ್ದಾರೆ.

ಸಭೆಯಲ್ಲಿ ಪೌರಾಯುಕ್ತ ಬಸವರಾಜ್, ನಗರಾಭಿವೃದ್ಧಿ ಪ್ರಾಧಿಕಾರ, ಯುವ ಸಬಲೀಕರಣ, ಅರಣ್ಯ, ಕೈಗಾರಿಕಾ ಇಲಾಖೆ, ಮೆಸ್ಕಾಂ, ಲೋಕೋಪಯೋಗಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

21ಸಿಕೆಎಂ3: ನಗರದಲ್ಲಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಸಂಜೆ ನಡೆದ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್.ಮಾತನಾಡಿದರು.

# ಕೇಂದ್ರದ ಅನುದಾನ ಕೋರಿ ರಾಜ್ಯ ಸರ್ಕಾರ ದೆಹಲಿಯಲ್ಲಿ ಪ್ರತಿಭಟನೆ ನಡೆಸುವ ಸ್ಥಿತಿ ಮತ್ತೊಮ್ಮೆ ಬರಬಾರದು: ಜಿ ಪರಮೇಶ್ವರ



**ಬೆಂಗಳೂರು:** ಕೇಂದ್ರ ಪ್ರಾಯೋಜಿತ ಯೋಜನೆಗಳು ಮತ್ತು ಅನುದಾನಗಳಿಗೆ ಕರ್ನಾಟಕಕ್ಕೆ ಹಣ ಬಿಡುಗಡೆ ಮಾಡುವಲ್ಲಿ ಕೇಂದ್ರ ಸರ್ಕಾರ ವಿಳಂಬ ಮಾಡುತ್ತಿದೆ ಎಂದು ಆರೋಪಿಸಿರುವ ಗೃಹ ಸಚಿವ ಜಿ ಪರಮೇಶ್ವರ, ರಾಜ್ಯ ಸರ್ಕಾರ ಮತ್ತೊಮ್ಮೆ ಇದಕ್ಕಾಗಿ ದೆಹಲಿಯಲ್ಲಿ ಪ್ರತಿಭಟನೆ ನಡೆಸುವ ಪರಿಸ್ಥಿತಿ ಬರಬಾರದು ಎಂದು ಗುರುವಾರ ಹೇಳಿದ್ದಾರೆ.

ಕೇಂದ್ರವು ಅನುದಾನವನ್ನು ಸಕಾಲದಲ್ಲಿ ಬಿಡುಗಡೆ ಮಾಡುವುದರಿಂದ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲು ಸಹಾಯವಾಗುತ್ತದೆ ಎಂದು ಅವರು ಹೇಳಿದರು.

'ಕಳೆದ ಎರಡು ವರ್ಷಗಳಿಂದ, ರಾಜ್ಯ ಸರ್ಕಾರಕ್ಕೆ ಬರಬೇಕಾದ ಅನುದಾನವನ್ನು ನೀಡುವಂತೆ ನಾವು ಕೇಂದ್ರವನ್ನು ಕೇಳುತ್ತಿದ್ದೇವೆ. ವಿವಿಧ ಕಾರಣಗಳಿಂದ, ಅದು ವಿಳಂಬವಾಗುತ್ತಿದೆ. ಕೆಲವೊಮ್ಮೆ ಅನುದಾನ ಬರುವುದೇ ಇಲ್ಲ. ಆದ್ದರಿಂದ ಮುಖ್ಯಮಂತ್ರಿಗಳು ನಿನ್ನೆ ಪರಿಶೀಲನೆ ನಡೆಸಿದರು' ಎಂದು ಪರಮೇಶ್ವರ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ-ಕ್ಕೆ ಹಣವನ್ನು ಬಿಡುಗಡೆ ಮಾಡುವಂತೆ ಕೇಂದ್ರದ ಮೇಲೆ ಒತ್ತಡ ಹೇರುವಂತೆ ಮುಖ್ಯಮಂತ್ರಿಗಳು ರಾಜ್ಯದ ಸಂಸದರನ್ನು ವಿನಂತಿಸಿದ್ದಾರೆ ಎಂದು ಹೇಳಿದರು.

'ಕೇಂದ್ರ ಮತ್ತು ರಾಜ್ಯ ಸರ್ಕಾರದ ನಡುವಿನ ಸ್ಥಾಪಿತ ಸಂಬಂಧದ ಆಧಾರದ ಮೇಲೆ ಈ ಹಣಕಾಸಿನ ನೆರವು ನ್ಯಾಯಯುತ ಬೇಡಿಕೆಯಾಗಿದೆ. ರಾಜ್ಯಕ್ಕೆ 5,500 ಕೋಟಿ ರೂ.ಗಳನ್ನು ತಕ್ಷಣವೇ ಬಿಡುಗಡೆ ಮಾಡಬೇಕು. ಕಳೆದ ಬಾರಿ ಕೇಂದ್ರದ ಮೇಲೆ ಒತ್ತಡ ಹೇರುವ ಮೂಲಕ ಹಣವನ್ನು ಪಡೆಯಲು ಪದೇ ಪದೆ ಮಾಡಿದ ಪ್ರಯತ್ನಗಳು ವಿಫಲವಾದ ಕಾರಣ ರಾಜ್ಯ ಸರ್ಕಾರ ದೆಹಲಿಗೆ ಹೋಗಿ ಪ್ರತಿಭಟನೆ ನಡೆಸಬೇಕಾದ ಪರಿಸ್ಥಿತಿ ಬಂದಿತ್ತು. ಅಂತಹ ಪರಿಸ್ಥಿತಿ ಮತ್ತೆ ಬರಬಾರದು. ಸಮಯಕ್ಕೆ ಸರಿಯಾಗಿ ಹಣವನ್ನು ಬಿಡುಗಡೆ ಮಾಡಿದರೆ ಅದನ್ನು ಅಭಿವೃದ್ಧಿಗೆ ಬಳಸಬಹುದು' ಎಂದು ಅವರು ಹೇಳಿದರು.

ತೆರಿಗೆ ಹಂಚಿಕೆಯಲ್ಲಿ ರಾಜ್ಯಕ್ಕೆ ಕೇಂದ್ರದ ಅನ್ಯಾಯದ ವಿರುದ್ಧ ಕಳೆದ ವರ್ಷ ಫೆಬ್ರುವರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿ ಪ್ರತಿಭಟನೆ ನಡೆಸಿದ್ದರು.

ಬುಧವಾರ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ (ಆಖಖಊಂ) ಸಭೆಯ ಅಧ್ಯಕ್ಷತೆ ವಹಿಸಿದ್ದ ಸಿಎಂ, ಕೇಂದ್ರ ಸರ್ಕಾರ ಕರ್ನಾಟಕದ ಬಗ್ಗೆ 'ನಿರಾಸಕ್ತಿ' ತೋರಿಸುತ್ತಿರುವುದರಿಂದ ರಾಜ್ಯದಲ್ಲಿ ಅಭಿವೃದ್ಧಿ ಯೋಜನೆಗಳು ವಿಳಂಬವಾಗುತ್ತಿವೆ ಮತ್ತು ಕೇಂದ್ರ ಪ್ರಾಯೋಜಿತ ವಿವಿಧ ಯೋಜನೆಗಳಿಗೆ ಕೇಂದ್ರವು ತನ್ನ ಪಾಲಿನ ಹಣವನ್ನು ಬಿಡುಗಡೆ ಮಾಡುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದ್ದರು.

ಬುಧವಾರದ ಸಭೆಗೆ ಗೈರುಹಾಜರಾದ ಹಲವಾರು ಸಂಸದರ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, 'ಕಾರಣವೇನೆಂದು ಖಚಿತವಿಲ್ಲ. ಅವರಿಗೂ ಕೆಲಸವಿರುತ್ತದೆ ಮತ್ತು ಆದ್ದರಿಂದ ಅವರು ಸಭೆಗೆ ಹಾಜರಾಗಿಲ್ಲ' ಎಂದು ಹೇಳಿದರು.

ರಾಜ್ಯ ಸರ್ಕಾರ ಮತ್ತು ಮುಖ್ಯಮಂತ್ರಿಗಳು ಸಂಸದರಿಗೆ ಗೌರವ ನೀಡಿದ್ದಾರೆ ಎಂದು ಅವರು ರಾಜ್ಯ ಸರ್ಕಾರದ ಬಗ್ಗೆ ಸಂಸದರು ಅಸಮಾಧಾನ ಹೊಂದಿದ್ದಾರೆಯೇ ಎಂಬ ಪ್ರಶ್ನೆಗೆ ಉತ್ತರಿಸಿದರು.

# ಮನುಷ್ಯನ ಸಮೃದ್ಧಿ ಬದುಕಿಗೆ ಧರ್ಮಸ್ಥಳ ಯೋಜನೆ ಸಹಕಾರಿ



**ಮಲೇಬೆನ್ನೂರು :** ಸಮಾಜದಲ್ಲಿ ಬದಲಾವಣೆ ಹಾಗೂ ಮನುಷ್ಯನ ಸಮೃದ್ಧಿ ಬದುಕಿಗೆ ಸಹಕಾರಿಯಾಗುವ ಹತ್ತು ಹಲವು ಜನಪರ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಮೂಲಕ ಧರ್ಮಸ್ಥಳದ ಡಾ. ವಿ.ವೀರೇಂದ್ರ ಹೆಗ್ಗಡೆ ಅವರು ದೇಶಕ್ಕೆ ಮಾದರಿಯಾಗಿದ್ದಾರೆ ಎಂದು ಉಕ್ಕಡಗಾತ್ರಿ ಕರಿಬಸವೇಶ್ವರ ಗದ್ದಿಗೆ ಟ್ರಸ್ಟ್ ಕಮಿಟಿ ಕಾರ್ಯದರ್ಶಿಗಳೂ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಎಸ್.ಸುರೇಶ್ ಮೆಚ್ಚುಗೆ ವ್ಯಕ್ತಪಡಿಸಿದರು.

ಸುಕ್ಷೇತ್ರ ಉಕ್ಕಡಗಾತ್ರಿ ಗ್ರಾಮದ ಶ್ರೀ ಗುರು ಕರಿಬಸವೇಶ್ವರ ಸಮುದಾಯ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಹಾಗೂ ಶ್ರೀ ಗುರು ಕರಿಬಸವೇಶ್ವರ ಗದ್ದಿಗೆ ಟ್ರಸ್ಟ್ ಕಮಿಟಿ, ಉಕ್ಕಡಗಾತ್ರಿ ಗ್ರಾ.ಪಂ. ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿರುವ 1922 ನೇ ಮದ್ಯವರ್ಜನ ಶಿಬಿರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು, ಮಾತನಾಡಿದರು.

ಮದ್ಯವರ್ಜನೆ ಶಿಬಿರ, ಶಾಲೆಗಳಲ್ಲಿ ನಡೆಸುವ ಸ್ವಾಸ್ಥ್ಯ ಸಂಕಲ್ಪ ಜಾಗೃತಿ ಕಾರ್ಯಗಳು ಸಮಾಜದಲ್ಲಿ ಹೊಸ ಬೆಳಕು ಮೂಡಿಸುವ ಪ್ರಯತ್ನವಾಗಿದೆ ಎಂದು ಅವರು ಹೇಳಿದರು.

ಶ್ರೀ ಗುರು ಕರಿಬಸವೇಶ್ವರ ಗದ್ದಿಗೆ ಟ್ರಸ್ಟ್ ಕಮಿಟಿ ನಿರ್ದೇಶಕ ಜಿಗಳಿ ಇಂದೂಧರ್ ಮಾತನಾಡಿ, ರಾಜ್ಯದ ಪ್ರತಿ ವರ್ಷದ ಬಜೆಟ್ ಸುಮಾರು 3.27 ಲಕ್ಷ ಕೋಟಿ ರೂ.ಗಳಾಗಿದ್ದು, ಇದರಲ್ಲಿ 52 ಸಾವಿರ ಕೋಟಿ ರೂ. ಗ್ಯಾರಂಟಿ ಯೋಜನೆಗಳಿಗೆ ಖರ್ಚಾಗುತ್ತಿದೆ. ಅಬಕಾರಿ ಆದಾಯ ಸುಮಾರು 35 ಸಾವಿರ ಕೋಟಿ ರೂ. ಇದೆ. ಅಬಕಾರಿ ಆದಾಯಕ್ಕಿಂತ ಗ್ಯಾರಂಟಿ ಯೋಜನೆಗಳಿಗೆ ಹೆಚ್ಚು ಖರ್ಚು ಮಾಡುವ ಸರ್ಕಾರ, ಮದ್ಯಪಾನ ನಿಷೇಧ ಮಾಡಿದರೆ ಕೋಟ್ಯಾಂತರ ಜನರ ಬದುಕನ್ನು ಉಳಿಸದಂತಾಗುತ್ತದೆ ಎಂದರು.

ಜಿಲ್ಲಾ ಜನಾ ಜಾಗೃತಿ ವೇದಿಕೆಯ ನಿಕಟ ಪೂರ್ವ ಉಪಾಧ್ಯಕ್ಷ ಎನ್.ಜಿ.ನಾಗನಗೌಡ್ರು, ಉಕ್ಕಡಗಾತ್ರಿ ಗ್ರಾ.ಪಂ. ಉಪಾಧ್ಯಕ್ಷ ಚಂದ್ರಗೌಡ ಜಿಗಳೇರ ಮಾತನಾಡಿದರು.


ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಎಂ.ಲಕ್ಷ್ಮಣ್ ಮಾತನಾಡಿ ವೀರೇಂದ್ರ ಹೆಗ್ಗಡೆ ಅವರು 1992 ರಿಂದ ರಾಜ್ಯದಲ್ಲಿ ಮದ್ಯವರ್ಜನ ಶಿಬಿರಗಳನ್ನು ಸಂಘಟಿಸುತ್ತಾ ಬಂದಿದ್ದು, ಇದುವರೆಗೆ ನಡೆದ 1921 ಶಿಬಿರಗಳಲ್ಲಿ ಸುಮಾರು 1.30 ಲಕ್ಷ ಜನ ಕುಡಿತದಿಂದ ಹೊರ ಬಂದು ಹೊಸ ಜೀವನ ಕಟ್ಟಿಕೊಂಡಿದ್ದಾರೆ ಎಂದರು.

ಜನಜಾಗೃತಿ ವೇದಿಕೆಯ ಯೋಜನಾಧಿಕಾರಿ ನಾಗರಾಜ್ ಕುಲಾಲ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಉಕ್ಕಡಗಾತ್ರಿ ಗ್ರಾ.ಪಂ. ಅಧ್ಯಕ್ಷೆ ಶ್ರೀಮತಿ ಭಾರತಿ ಸಿದ್ದಪ್ಪ ಕಟಿಗೇರ ಅವರು ಶಿಬಿರವನ್ನು ದೀಪ ಬೆಳಗಿಸಿ ಉದ್ಘಾಟಿಸಿದರು.

ಜಿಲ್ಲಾ ಜನ ಜಾಗೃತಿ ವೇದಿಕೆಯ ಉಪಾಧ್ಯಕ್ಷರೂ ಆದ ಎಪಿಎಂಸಿ ಮಾಜಿ ಅಧ್ಯಕ್ಷ ಜಿ.ಮಂಜುನಾಥ್ ಪಟೇಲ್, ಜಿಲ್ಲಾ ಜನ ಜಾಗೃತಿ ವೇದಿಕೆ ಸದಸ್ಯರಾದ ಅಣಬೇರು ಮಂಜಣ್ಣ, ಕತ್ತಿಗೆ ರಮೇಶ್, ಕೊಕ್ಕನೂರಿನ ಹನುಮಂತರಾಯ, ಡಾ. ವೆಂಕಟರಾಮಾಂಜನೇಯ, ನಿಟ್ಟೂರಿನ ಶ್ರೀಮತಿ ರೂಪಾ ಪಾಟೀಲ್, ಎಕ್ಕೆಗೊಂದಿ ರುದ್ರಗೌಡ, ಶ್ರೀ ಗುರು ಕರಿಬಸವೇಶ್ವರ ಗದ್ದಿಗೆ ಟ್ರಸ್ಟ್ ಕಮಿಟಿಯ ವೀರನಗೌಡ ಹಲಗಪ್ಪನವರ್, ವಿವೇಕಾನಂದ ಪಾಟೀಲ್, ಗದಿಗೆಯ್ಯ ಪಾಟೀಲ್, ಪ್ರಕಾಶ್ ಕೋಟೇರ್, ಭದ್ರಾ ಕಾಡಾ ಸದಸ್ಯ ಗೋವಿನಹಾಳ್ ರಾಜಣ್ಣ, ವಕೀಲ ಮಂಜು ದೊಡ್ಮನಿ, ಕಲಾವಿದ ಅಜೇಯ್, ಕುಂಬಳೂರಿನ ಎಂ.ಹೆಚ್. ಮಹೇಂದ್ರ, ಶಿಬಿರಾಧಿಕಾರಿ ನಂದಕುಮಾರ್, ಆರೋಗ್ಯ ಸಹಾಯಕಿ ಜಯಲಕ್ಷ್ಮಿ, ಶಿಬಿರದ ಮೇಲ್ವಿಚಾರಕ ರುದ್ರಪ್ಪ ಹೂಗಾರ್, ವಲಯ ಮೇಲ್ವಿಚಾರಕರಾದ ರಕ್ಷಿತಾ, ಹರೀಶ್, ರಂಗಸ್ವಾಮಿ ಭಾಗವಹಿಸಿದ್ದರು.

ಜಿಲ್ಲಾ ಜನ ಜಾಗೃತಿ ವೇದಿಕೆ ಸದಸ್ಯ ಹಾಗೂ ಪತ್ರಕರ್ತ ಜಿಗಳಿ ಪ್ರಕಾಶ್ ಸ್ವಾಗತಿಸಿದರು. ಮಲೇಬೆನ್ನೂರು ಯೋಜನಾಧಿಕಾರಿ ವಸಂತ್ ದೇವಾಡಿಗ ಕಾರ್ಯಕ್ರಮದ ನಿರೂಪಣೆ ಮಾಡಿದರು. ಕೊಕ್ಕನೂರು ವಲಯ ಮೇಲ್ವಿಚಾರಕರಾದ ರಂಜಿತಾ ವಂದಿಸಿದರು.

# ಮೋದಿ ಸರ್ಕಾರ ಕೊಂಡಾಡಿದ ಶಶಿ ತರೂರ್



**ನವದೆಹಲಿ:** 'ಆಪರೇಷನ್ ಸಿಂಧೂರ' ಮತ್ತು ನಂತರದ ಬೆಳವಣಿಗೆಗಳಿಗೆ ಸಂಬಂಧಪಟ್ಟಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವನ್ನು ಹೊಗಳಿದ ಸಂಸದ ಶಶಿ ತರೂರ್ ನಿಲುವಿಗೆ ಕಾಂಗ್ರೆಸ್ ನಾಯಕರು ಅಸಮಾಧಾನ ವ್ಯಕ್ತಪಡಿಸಿದ್ದು, ಕೈಪಡೆ ಇದೀಗ ಮನೆ ಒಡೆದ ಹಾಲಿನಂತಾಗಿದೆ.

ಭಾರತ-ಪಾಕಿಸ್ತಾನ ಸಂಘರ್ಷದ ಕುರಿತ ಪಕ್ಷದ ಅಧಿಕೃತ ಹೇಳಿಕೆಗಿಂತ ಭಿನ್ನವಾಗಿ ಪದೇ ಪದೇ ಶಶಿ ತರೂರ್ ಹೇಳಿಕೆ ನೀಡುತ್ತಿರುವುದು. ಕೇಂದ್ರ ಸರ್ಕಾರ ಮತ್ತು ಪ್ರಧಾನಿ ಮೋದಿ ಅವರನ್ನು ಹೊಗಳುತ್ತಿರುವುದು ಪಕ್ಷದಲ್ಲಿ ಅಸಮಾಧಾನವನ್ನುಂಟು ಮಾಡಿದೆ.

ಭಾರತ-ಪಾಕಿಸ್ತಾನ ಕದನ ವಿರಾಮ ಘೋಷಣೆ, ಆ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೀಡಿರುವ ಹೇಳಿಕೆ ಕುರಿತು ಚರ್ಚಿಸಲು ಗುರುವಾರ ಕಾಂಗ್ರೆಸ್‌ನ ಹಿರಿಯ ನಾಯಕರ ಸಭೆ ಕರೆಯಲಾಗಿತ್ತು. ಈ ಸಭೆಯಲ್ಲಿ, 'ಶಶಿ ತರೂರ್ ಲಕ್ಷ್ಮಣ ರೇಖೆ ದಾಟಿದ್ದಾರೆ' ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂವಹನ) ಜೈರಾಮ್ ರಮೇಶ್ ಹೇಳಿದ್ದಾರೆಂದು ತಿಳಿದುಬಂದಿದೆ.

ಸಭೆಯ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಜೈರಾಮ್ ರಮೇಶ್, "ಶಶಿ ತರೂರ್ ಹೇಳಿಕೆ ಅವರ ವೈಯಕ್ತಿಕ ಅಭಿಪ್ರಾಯ, ಪಕ್ಷದ ಅಧಿಕೃತ ನಿಲುವಲ್ಲ" ಎಂದು ಸ್ಪಷ್ಟಪಡಿಸಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕ ದಾಳಿ, ಆ ಬಳಿಕದ ಭಾರತ-ಪಾಕಿಸ್ತಾನ ಸಂಘರ್ಷ, ಕದನ ವಿರಾಮ ಘೋಷಣೆ, ಅದ-ಕ್ಕೆ ನಾವು ಮಧ್ಯಸ್ಥಿಕೆ ವಹಿಸಿದ್ದೇವೆ ಎಂಬ ಅಮೆರಿಕ ಅಧ್ಯಕ್ಷ ಟ್ರಂಪ್ ಹೇಳಿಕೆ, ಇವೆಲ್ಲವೂ ಮೋದಿ ಸರ್ಕಾರದ ವೈಫಲ್ಯ ಎಂಬುವುದು ಕಾಂಗ್ರೆಸ್ ಪಕ್ಷದ ಅಭಿಪ್ರಾಯವಾಗಿದೆ.

ಈ ಸಂಬಂಧ ಪ್ರತಿದಿನ ಹಲವು ಪ್ರಶ್ನೆಗಳನ್ನು ಕಾಂಗ್ರೆಸ್ ಸರ್ಕಾರಕ್ಕೆ ಕೇಳುತ್ತಿದೆ. ಈ ನಡುವೆ ಸಂಸದ ಶಶಿ ತರೂರ್ ಕೇಂದ್ರ ಸರ್ಕಾರ ಮತ್ತು ಪ್ರಧಾನಿ ಮೋದಿ ಪರ ಬ್ಯಾಟ್ ಬೀಸುತ್ತಿರುವುದು ಕಾಂಗ್ರೆಸ್ ನಾಯಕರ ಅಸಮಾಧಾನಕ್ಕೆ ಕಾರಣವಾಗಿದೆ.

# ತಿರಂಗ ಯಾತ್ರೆಯ ಮೂಲಕ ಭಾರತೀಯ ಸಶಸ್ತ್ರ ಪಡೆಗಳಿಗೆ ಕರ್ನಾಟಕ ಬಿಜೆಪಿ ಕೃತಜ್ಞತೆ



**ಬೆಂಗಳೂರು:** ಆಪರೇಷನ್ ಸಿಂಧೂರ್" ಸಮಯದಲ್ಲಿ ತಮ್ಮ ಶೌರ್ಯವನ್ನು ಪ್ರದರ್ಶಿಸಿದ ಭಾರತೀಯ ಸಶಸ್ತ್ರ ಪಡೆಗಳಿಗೆ ಕೃತಜ್ಞತೆ ಸಲ್ಲಿಸಲು ಬಿಜೆಪಿ ಗುರುವಾರ ಇಲ್ಲಿ ಆಯೋಜಿಸಿದ್ದ ತಿರಂಗ ಯಾತ್ರೆಯಲ್ಲಿ ಭಾರಿ ಜನಸ್ತೋಮ ನೆರೆದಿತ್ತು.

ಫುಟ್ಬಾಲ್ ಮೈದಾನದ ಗಾತ್ರದ ಬೃಹತ್ ತ್ರಿವರ್ಣ ಧ್ವಜದ ಕೆಳಗೆ ಜನರು ಜಮಾಯಿಸಿದರು. ನಗರದ ಮಲ್ಲೇಶ್ವರಂನ ಸಂಪಿಗೆ ರಸ್ತೆಯಲ್ಲಿರುವ ಸಿರೂರ್ ಉದ್ಯಾನವನದಲ್ಲಿ ನಡೆದ ಮೆರವಣಿಗೆಯಲ್ಲಿ ಸಮಾಜದ ವಿವಿಧ ಭಾಗಗಳಿಂದ ಜನರು ಭಾಗವಹಿಸಿದ್ದರು.

ಭಾಗವಹಿಸಿದ್ದವರು "ಭಾರತ್ ಮಾತಾ ಕಿ ಜೈ" ಮತ್ತು "ಭಾರತೀಯ ಸೇನೆಗೆ ಜಯ" ಮುಂತಾದ ಘೋಷಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ಏರ್ ಮಾರ್ಷಲ್ ಎ.ವಿ. ಮುರಳಿ, ಆಪರೇಷನ್ ಸಿಂಧೂರ್ ಮುಗಿದಿಲ್ಲ ಮತ್ತು ಭಯೋತ್ಪಾದಕ ದಾಳಿ ಪುನರಾವರ್ತನೆಯಾದರೆ, ಪಾಕಿಸ್ತಾನವು ಭಾರೀ ಬೆಲೆ ತೆರಬೇಕಾಗುತ್ತದೆ ಎಂದು ಹೇಳಿದರು.

ಭವಿಷ್ಯದಲ್ಲಿ ಪಾಕಿಸ್ತಾನ ಯಾವುದೇ ದುಸ್ಸಾಹಸದಲ್ಲಿ ತೊಡಗಿದರೆ, ಅದು ಪಾಕಿಸ್ತಾನ ಆಕ್ರಮಿತ ಕಾಶ್ಮೀರವನ್ನು ಕಳೆದುಕೊಳ್ಳಲು ಕಾರಣವಾಗುತ್ತದೆ ಎಂದು ಅವರು ಹೇಳಿದರು.

ಪ್ರಧಾನಿ ನರೇಂದ್ರ ಅವರು ಬಲವಾದ ರಾಜಕೀಯ ಇಚ್ಛಾಶಕ್ತಿಯನ್ನು ಪ್ರದರ್ಶಿಸಿದ್ದಕ್ಕಾಗಿ ಶ್ಲಾಘಿಸಿದರು. "ದೇಶವು ಜನರು ಬಯಸಿದ್ದನ್ನು ಮಾಡಿದೆ. ಪಾಕಿಸ್ತಾನಕ್ಕೆ ಸೂಕ್ತ ಉತ್ತರ ನೀಡಿದ ಸೈನಿಕರ ಬೆಂಬಲಕ್ಕೆ ಇಡೀ ರಾಷ್ಟ್ರ ನಿಂತಿದೆ" ಎಂದು ಮುರಳಿ ಹೇಳಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಕಾಂಗ್ರೆಸ್ ಪಕ್ಷವು ಯುದ್ಧವನ್ನು ಬೆಂಬಲಿಸುತ್ತದೆಯೇ ಅಥವಾ ಶಾಂತಿಯನ್ನು ಬೆಂಬಲಿಸುತ್ತದೆಯೇ ಎಂಬುದರ ಕುರಿತು ತನ್ನ ನಿಲುವನ್ನು ಸ್ಪಷ್ಟಪಡಿಸಬೇಕೆಂದು ಒತ್ತಾಯಿಸಿದರು.

ಕೆಲವು ಕಾಂಗ್ರೆಸ್ ನಾಯಕರು ಪಾಕಿಸ್ತಾನದೊಂದಿಗೆ ಯುದ್ಧವನ್ನು ಪ್ರತಿಪಾದಿಸಿದರೆ, ಇತರರು ಶಾಂತಿಗೆ ಕರೆ ನೀಡುತ್ತಾರೆ ಎಂದು ಬಿಜೆಪಿ ನಾಯಕರು ಹೇಳಿದರು.

# ಕೆರೆಗುಡಿಹಳ್ಳಿ: 1ಕೋಟಿ ವೆಚ್ಚದಲ್ಲಿ ನೂತನ ದೇವಸ್ಥಾನ ನಿರ್ಮಾಣಕ್ಕೆ ರೇವಣ ಸಿದ್ದೇಶ್ವರ ಶ್ರೀ ಮೊದಲ ದೇಣಿಗೆ



**ಹರಪನಹಳ್ಳಿ.ಮೇ.15:** ನನ್ನಿಂದಲೇ ಈ ದೇವಸ್ಥಾನ ನಿರ್ಮಾಣಕ್ಕೆ ಮೊದಲ ದೇಣಿಗೆ ಶುರುವಾಗಲಿ, ಶ್ರೀ ದುರ್ಗಾಂಭಿಕ ದೇವಿ ದೇವಸ್ಥಾನ ಬಹಳ ಪ್ರಸಿದ್ಧ ಇದ್ದು, ಇದನ್ನು ನಾನು ಬಹಳ ವರ್ಷಗಳಿಂದ ನೋಡುತ್ತಾ ಬಂದಿದ್ದೇನೆ, ಇಂತಹ ದೇವಾನು ದೇವತೆಗಳ ದೇವಸ್ಥಾನದ ನಿರ್ಮಾಣಕ್ಕೆ ನಾನು ಅಡಿಗಲ್ಲು ಪೂಜೆ ನೆರವೇರಿಸುವುದಕ್ಕೆ ಬಹಳ ಸಂತಸ ತಂದಿದೆ ಎಂದು ರಾಮಘಟ್ಟ ಮಠದ ಶ್ರೀ ರೇವಣ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ತಿಳಿಸಿದರು.

ತಾಲ್ಲೂಕಿನ ಅರಸೀಕೆರೆ ಸಮೀಪದ ಕೆರೆಗುಡಿಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಶ್ರೀ ದುರ್ಗಾಂಭಿಕ ದೇವಿ, ತಿಮ್ಮಪ್ಪ ಸ್ವಾಮಿಯ ದೇವಸ್ಥಾನದ ಅಡಿಗಲ್ಲು ಪೂಜೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀ ರೇವಣ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಗುಡಿಹಳ್ಳಿ ಗೆ ಉತ್ತಮವಾದ ಮಳೆ, ಬೆಳೆ ಮೂಲಕ ಸಮಸ್ತ ಊರಿನ ಸರ್ವರಿಗೂ ಆಯುಷ್ಯ ಅರೋಗ್ಯವಾಗಿರಲಿ ಎಂದು ಆಶೀರ್ವಾದಿಸಿದರು.

ಇನ್ನೂ ದೇವಸ್ಥಾನದ ನಿರ್ಮಾಣಕ್ಕೆ ಮೊದಲ ದೇಣಿಗೆ ನೀಡಿದ ಶ್ರೀಗಳು ಈ ಮೂಲಕ ಎಲ್ಲಾ ಭಕ್ತರ ದೇಣಿಗೆ ಮೂಲಕ ಒಂದು ನೂತನವಾದ ದೇವಸ್ಥಾನ ಈ ಊರಿನಲ್ಲಿ ನಿರ್ಮಾಣವಾದರೆ ಅದೇ ನನಗೆ ನೀವು ತೋರಿಸುವ ಗೌರವ ಎಂದು ತಿಳಿಸಿದರು.

ಈ ನೂತನ ದೇವಸ್ಥಾನ ಸರಿ ಸುಮಾರು 1.5ಕೋಟಿ ರೂಪಾಯಿಗಳ ಅಂದಾಜು ಮೊತ್ತದಲ್ಲಿ ನಿರ್ಮಾಣವಾಗುತ್ತಿದೆ, ಈ ಮೂಲಕ ಸರಕಾರದ ಅನುದಾನದ ಜೊತೆಗೆ ಭಕ್ತರ ದೇಣಿಗೆ ಅತ್ಯಗತ್ಯ ಸಹಕಾರ ನೀಡುತ್ತದೆ, ಆದರಿಂದ್ದ ಒಂದು ಮಾದರಿ ದೇವಸ್ಥಾನ ನಿರ್ಮಾಣ ಮಾಡಬೇಕು, ಇದು ಒಂದು ಪವಿತ್ರ ಕ್ಷೇತ್ರವಾಗಬೇಕು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಊರಿನ ಸರ್ವರೂ ನೂತನ ಅಡಿಗಲ್ಲಿಗೆ ವಿಧಿವಿಧಾನಗಳ ಮೂಲಕ ನೈವೇದ್ಯದೊಂದಿಗೆ ಪೂಜೆಯನ್ನ ನೆರವೇರಿಸಿದರು.

ಈ ವೇಳೆ ಊರಿನ ಮುಖಂಡರಾದ ಸಿ.ಶಿವಣ್ಣ, ಪೂಜಾರ್ ತಿಮ್ಮಣ್ಣ, ಅರ-ಕೇರಿ ದುರುಗಪ್ಪ, ಪಿ. ಎಸ್.ವಿರೇಶ, ಕೆಂಗಪ್ಪರ ಹನುಮಂತಪ್ಪ, ಗುಂಡಗತ್ತಿ ನಾಗರಾಜ್, ಪಾಲ್ಲಾಗಟ್ಟೆ ದುರುಗಪ್ಪ, ಪತ್ರಕರ್ತ ಗುಡಿಹಳ್ಳಿ ಮಂಜುನಾಥ್, ಬಡಿಗೇರ್ ದುರುಗಪ್ಪ, ಬಕ್ಕಲಾಡಿ ನಾಗಪ್ಪ, ಪೂಜಾರಿ ದೊಡ್ಡ ದುರುಗಪ್ಪ, ಯು. ಎಂ. ವೀರಯ್ಯ, ಶಿವನಾಗಣ್ಣ, ಹೊನ್ನೇನಹಳ್ಳಿ ಚಂದ್ರಪ್ಪ, ಸಿ. ಹೆಚ್. ಹನುಮಂತಪ್ಪ, ಕೆ. ನಾಗರಾಜ್ ಹಾಗೂ ಹಾಲುಮತದ ಭಾಂದವರು, ಪಂಚಮಸಾಲಿ ಸಮಾಜದ ಭಾಂದವರು ಸೇರಿದಂತೆ ಊರಿನ ಸರ್ವ ಗ್ರಾಮಸ್ಥರು ಹಾಜರಿದ್ದರು.

# ಮುಖ್ಯವಾಹಿನಿಯಲ್ಲಿ ಪ್ರಜ್ವಲಿಸುತ್ತಿರುವ ಎಸ್‌ಎಸ್‌ಕೆ ಸಮಾಜ: ಓಂಕಾರ ಶ್ರೀ



**ಹರಿಹರ :** ಎಸ್.ಎಸ್.ಕೆ. ಸಮಾಜವು ಕೃತಿಗೆ ಪ್ರಾಮುಖ್ಯತೆ ನೀಡಿ, ಸಮಾಜದ ಒಳಿತಿಗಾಗಿ ಶ್ರಮಿಸುತ್ತಿರುವುದ ರಿಂದ ಮಿಂಚಿನ ವೇಗದಲ್ಲಿ ಮೇಲುಗೈ ಸಾಧಿಸಿ, ಸಮಾಜದ ಮುಖ್ಯವಾಹಿನಿಯಲ್ಲಿ ಪ್ರಜ್ವಲಿಸುತ್ತಿದೆ ಎಂದು ಆವರಗೊಳ್ಳದ ಶ್ರೀ ಓಂಕಾರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದಲ್ಲಿ ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜದ ವತಿಯಿಂದ ಆಯೋಜಿಸಲಾದ ಶ್ರೀ ದುರ್ಗಾದೇವಿ ದೇವಸ್ಥಾನದ ಕಳಸರೋಹಣ ಮತ್ತು ಮಹಾದ್ವಾರ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜವು ಆರ್ಥಿಕವಾಗಿ ಪ್ರಗತಿಪರವಾಗಲು ಇಚ್ಛಾಶಕ್ತಿ, ಕ್ರಿಯಾಶಕ್ತಿ, ಮತ್ತು ಗುರುಶಕ್ತಿಯ ಅಗತ್ಯವಿದೆ.

ಸಂಖ್ಯೆಯಲ್ಲಿ ಕಡಿಮೆ ಇದ್ದರೂ, ಒಗ್ಗಟ್ಟಿನಿಂದ ಸಮಾಜಮುಖಿ ಕಾರ್ಯಗಳನ್ನು ಯಶಸ್ವಿಯಾಗಿ ನಿರ್ವಹಿಸಿದೆ. ಸಂಘಟನೆಯಿಂದಾಗಿ ಕುಂದು-ಕೊರತೆಗಳಿಲ್ಲದೆ, ಎಲ್ಲಾ ಸಮಾಜಗಳ ಜೊತೆಗೆ ಗುರುತಿಸಿಕೊಳ್ಳುವ ಶಕ್ತಿಯನ್ನು ಸಮಾಜವು ಪಡೆದಿದೆ ಎಂದು ಸ್ವಾಮೀಜಿ ಹೇಳಿದರು.

ಕಳಸಾರೋಹಣವು ಕೀರ್ತಿಯ ಸಂಕೇತವಾಗಿದ್ದು, ಇದನ್ನು ಸಾರ್ವಜನಿಕ ದಿವ್ಯ ಸ್ಥಳಗಳಲ್ಲಿ ಮಾತ್ರ ನಿರ್ಮಿಸಲಾಗುತ್ತದೆ. ಕಳಸವನ್ನು ನೋಡುವುದರಿಂದ ಏಳು ಸರೋವರದ ಸ್ನಾನದ ಫಲವೂ, ಸಂಕಷ್ಟ ಪರಿಹಾರವೂ ದೊರೆಯುತ್ತದೆ. ದುರ್ಗಾದೇವಿಯ ಆಶೀರ್ವಾದದಿಂದ ಜ್ಞಾನ, ಬುದ್ಧಿ, ಸಂಪತ್ತು, ಐಶ್ವರ್ಯ, ಆಚಾರ-ವಿಚಾರ, ಮತ್ತು ಸುಶಿಕ್ಷಿತ ಜೀವನ ಲಭಿಸುತ್ತದೆ ಎಂದು ಅವರು ಹೇಳಿದರು.

ಶಾಸಕ ಬಿ.ಪಿ. ಹರೀಶ್ ಮಾತನಾಡಿ, ತುಂಗಭದ್ರಾ ನದಿತೀರದ ಈ ದೇವಸ್ಥಾನದ ನವೀಕರಣ, ಕಳಸರೋಹಣ, ಮತ್ತು ಮಹಾದ್ವಾರ ನಿರ್ಮಾಣವು ಶ್ಲಾಘನೀಯವಾಗಿದೆ. ಈ ಪವಿತ್ರ ಸ್ಥಳದ ಅಭಿವೃದ್ಧಿಗೆ ಸಮಾಜದ ಎಲ್ಲರೂ ಸಹಕರಿಸಿ, ದೇವಿಯ ಆಶೀರ್ವಾದದೊಂದಿಗೆ ಇನ್ನಷ್ಟು ಸಮಾಜಮುಖಿ ಕಾರ್ಯಗಳು ನಡೆಯಲಿ ಎಂದು ಆಶಿಸಿದರು.

ಮಾಜಿ ಶಾಸಕ ಎಚ್.ಎಸ್. ಶಿವಶಂಕರ್ ಮಾತನಾಡಿ, ಸಂಖ್ಯೆಯಲ್ಲಿ ಕಡಿಮೆ ಇದ್ದರೂ ಎಸ್.ಎಸ್.ಕೆ. ಸಮಾಜವು ಪ್ರಾಮಾಣಿಕವಾಗಿ ಏಳಿಗೆಗೆ ಶ್ರಮಿಸಿ, ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದೆ. ಹಿರಿಯರು, ಯುವಕರು ಮತ್ತು ಮಹಿಳೆಯರು ಒಗ್ಗೂಡಿ ದೈವಭಕ್ತಿಯ ಸಮರ್ಪಣೆಯೊಂದಿಗೆ ಈ ಕಾರ್ಯವನ್ನು ಪೂರೈಸಿದ್ದಾರೆ ಎಂದು ಹೇಳಿದರು.

ಎಸ್.ಎಸ್.ಕೆ. ಸಮಾಜದ ರಾಜ್ಯಾಧ್ಯಕ್ಷ ಡಾ. ಶಶಿಕುಮಾರ್ ಮೆಹರ್ವಾಡೆ ಮಾತನಾಡಿ, ಮುಂದಿನ ದಿನಗಳಲ್ಲಿ ಸಭಾಂಗಣ ನಿರ್ಮಾಣಕ್ಕೆ ಕೈಜೋಡಿಸಲಾಗುವುದು ಎಂದು ತಿಳಿಸಿದರು.

ಮಾಜಿ ಜಿಪಂ ಅಧ್ಯಕ್ಷ ಎಸ್.ಎಂ. ವೀರೇಶ್ ಹನಗವಾಡಿ ಮಾತನಾಡಿದರು. ಗಣ್ಯ ಉದ್ಯಮಿ ಕೃಷ್ಣ ಸಾ. ಭೂತೆ ಮಾತನಾಡಿ, ಶಾಶ್ವತ ವೇದಿಕೆ ಕಟ್ಟಡ ನಿರ್ಮಾಣಕ್ಕೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಿಬಿಎಸ್‌ಸಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 625ಕ್ಕೆ 625 ಅಂಕಗಳಿಸಿದ ನಿಮ್ಮಿತಾ ಮೆಹರ್ವಾಡೆ ಮತ್ತು ಪತ್ರಕರ್ತ ಎಂ. ಚಿದಾನಂದ ಕಂಚಿಕೇರಿ ಅವರನ್ನು ಸನ್ಮಾನಿಸಲಾಯಿತು.

ಎಸ್.ಎಸ್.ಕೆ. ಸಮಾಜದ ಹಂಗಾಮಿ ಅಧ್ಯಕ್ಷ ಮೋಹನ್ ಎನ್. ಖಿರೋಜಿ ಪ್ರಾಸ್ತಾವಿಕ ಭಾಷಣ ಮಾಡಿದರು. ಸ್ವಾಗತ ಮತ್ತು ಕಾರ್ಯಕ್ರಮ ನಿರೂಪಣೆಯನ್ನು ಅಂಬಾಸಾ ಪಿ. ಮೆಹರ್ವಾಡೆ, ವಂದನಾರ್ಪಣೆಯನ್ನು ತುಳಜಪ್ಪ ಎನ್. ಭೂತೆ ನಿರ್ವಹಿಸಿದರು.

ಈ ಸಂದರ್ಭದಲ್ಲಿ ವಿನಯ್ ಕೆ. ಪವಾರ್, ಬಟ್ಟು ರಾಜೊಳ್ಳಿ, ಅರ್ಜುನ್ ಸಾ. ಪವಾರ್, ಪರುಶುರಾಮ್ ಕಾಟ್ವೆ, ಶಾಂತಾ ಬಾಯಿ, ವಿಜಯಲಕ್ಷ್ಮಿ ಕೆ.ಟಿ. ಪವಾರ್, ಸಂದೀಪ್ ಎಚ್. ಭೂತೆ, ಆಶೋಕ ಭೂತೆ, ಕೃಷ್ಣ ಪಿ. ರಾಜೊಳ್ಳಿ, ವಿನಾಯಕ ಲದ್ವಾ, ಮೋತಿಲಾಲ್ ಖಿರೋಜಿ, ಶ್ರೀಕಾಂತ್ ಮೆಹರ್ವಾಡೆ, ಸೇವಂತಿಬಾಯಿ ಭೂತೆ, ಅಂಬುಜಾ ಪಿ. ರಾಜೊಳ್ಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪಾಕ್ ಪರ ಘೋಷಣೆ: ಬೆಂಗಳೂರಿನಲ್ಲಿ ಟೆಕ್ಕಿ ಬಂಧನ

**ಬೆಂಗಳೂರು:** ಭಾರತೀಯ ಸೇನೆಯ ಆಪರೇಷನ್ ಸಿಂಧೂರ್‌ನ ಯಶಸ್ಸನ್ನು ಆಚರಿಸುವ ಸಂದರ್ಭದಲ್ಲಿ ಪಾಕಿಸ್ತಾನ ಪರ ಘೋಷಣೆಗಳನ್ನು ಕೂಗಿದ ಆರೋಪದ ಮೇಲೆ ಬೆಂಗಳೂರಿನ ಟೆಕ್ಕಿಯೊಬ್ಬರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬೆಂಗಳೂರಿನ ವೈಟ್‌ಫೀಲ್ಡ್ ಪೊಲೀಸರು 25 ವರ್ಷದ ಸಾಫ್ಟ್‌ವೇರ್ ಎಂಜಿನಿಯರ್ ಶುಭಾಂಶು ಶುಕ್ಲಾ ಎಂಬುವವರನ್ನು ಬಂಧಿಸಿದ್ದಾರೆ. ಮೂಲಗಳ ಪ್ರಕಾರ ಮೇ 9 ರ ಮುಂಜಾನೆ ವೈಟ್‌ಫೀಲ್ಡ್‌ನ ಪ್ರಶಾಂತ್ ಲೇಔಟ್‌ನಲ್ಲಿರುವ ಪೇಯಿಂಗ್ ಗೆಸ್ಟ್ (ಪಿಜಿ) ವಸತಿಗೃಹದಲ್ಲಿ ಈ ಘಟನೆ ಸಂಭವಿಸಿದೆ. ಛತ್ತೀಸ್‌ಗಢ ಮೂಲದ ಶುಕ್ಲಾ, ಸ್ನೇಹಿತನೊಂದಿಗೆ ಪಿಜಿಯಲ್ಲಿ ವಾಸಿಸುತ್ತಿದ್ದರು ಎಂದು ತಿಳಿದುಬಂದಿದೆ.ಪೊಲೀಸ್ ವರದಿಗಳ ಪ್ರಕಾರ, ಮೇ 9 ರಂದು ಸುಮಾರು 12:30 ರ ಸುಮಾರಿಗೆ, ಪಿಜಿಯಲ್ಲಿ ಹಲವಾರು ಯುವಕರು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ನಡೆದ ಮಿಲಿಟರಿ ಕಾರ್ಯಾಚರಣೆ-ಯಾದ ಆಪರೇಷನ್ ಸಿಂಧೂರ್‌ನ ವಿಜಯೋತ್ಸವವನ್ನು ಆಚರಿಸುತ್ತಿದ್ದರು.

# ಸ್ವಯಂಪ್ರೇರಿತ ಸ್ಥಳಾಂತರಕ್ಕೆ ಭೀಮಗಡ ವನ್ಯಜೀವಿ ಅಭಯಾರಣ್ಯದ ಬುಡಕಟ್ಟು ಜನಾಂಗ ಸಮ್ಮತಿ: ಖಂಡ್ರೆ



**ಬೆಂಗಳೂರು:** ಬೆಳಗಾವಿಯ ಭೀಮಗಡ ವನ್ಯಜೀವಿ ಅಭಯಾರಣ್ಯದ ತಲೇವಾಡಿಯ ಬುಡಕಟ್ಟು ಜನಾಂಗದವರು ಕಾಡಿನಿಂದ ಹೊರಬರಲು ಒಪ್ಪಿಕೊಂಡಿದ್ದಾರೆ ಮತ್ತು ಸ್ವಯಂಪ್ರೇರಿತವಾಗಿ ಸ್ಥಳಾಂತರ ಕಾರ್ಯಕ್ರಮವನ್ನು ಆಯ್ಕೆ ಮಾಡಿಕೊಂಡಿದ್ದಾರೆ ಎಂದು ಅರಣ್ಯ, ಪರಿಸರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಹೇಳಿದ್ದಾರೆ.

ಸ್ಥಳಾಂತರ ಕಾರ್ಯಕ್ರಮದ ಮೊದಲ ಹಂತದಲ್ಲಿ ಮೇ 17 ರಂದು 27 ಕುಟುಂಬಗಳಿಗೆ ತಲಾ 10 ಲಕ್ಷ ರೂ.ಗಳನ್ನು ನೀಡಲಾಗುವುದು, ಕುಟುಂಬಗಳು ಅರಣ್ಯದಿಂದ ಹೊರಬಂದ ನಂತರ, ಸಂಪೂರ್ಣ ಪರಿಶೀಲನೆಯ ನಂತರ ಹೆಚ್ಚುವರಿಯಾಗಿ 5 ಲಕ್ಷ ರೂ.ಗಳನ್ನು ನೀಡಲಾಗುತ್ತದೆ ಎಂದು ವಿವರ ನೀಡಿ-ದರು.

ಬುಡಕಟ್ಟು ಜನಾಂಗದ ಸ್ವಯಂಪ್ರೇರಿತ ಸ್ಥಳಾಂತರ ಕಾರ್ಯಕ್ರಮದಡಿಯಲ್ಲಿ, ರಾಜ್ಯ ಅರಣ್ಯ ಇಲಾಖೆಯು ಬುಡಕಟ್ಟು ಜನಾಂಗದವರಿಗೆ ಎರಡು ಪ್ಯಾಕೇಜ್‌ಗಳನ್ನು ನೀಡುತ್ತದೆ. ಮೊದಲ ಆಯ್ಕೆಯಲ್ಲಿ, ಪ್ರತಿ ಕುಟುಂಬಕ್ಕೆ 15 ಲಕ್ಷ ರೂ. ನಗದು ಪರಿಹಾರವನ್ನು ನೀಡಲಾಗುತ್ತದೆ ಮತ್ತು ಅವರು ವಯಸ್ಕ ಮಕ್ಕಳನ್ನು ಹೊಂದಿದ್ದರೆ, ಪ್ರತಿ ಮಗುವನ್ನು ಒಬ್ಬ ವ್ಯಕ್ತಿಯೆಂದು ಪರಿಗಣಿಸಲಾಗುತ್ತದೆ ಮತ್ತು ಅವರಿಗೆ ಹೆಚ್ಚುವರಿಯಾಗಿ 15 ಲಕ್ಷ ರೂ.ಗಳನ್ನು ನೀಡಲಾಗುತ್ತದೆ. ಎರಡನೇ ಆಯ್ಕೆಯಲ್ಲಿ, ಮನೆ ಮತ್ತು ಉದ್ಯೋಗದೊಂದಿಗೆ ನಗದು ಪರಿಹಾರವನ್ನು ನೀಡಲಾಗುತ್ತದೆ ಎಂದರು.

ಕಳೆದ ಡಿಸೆಂಬರ್‌ನಲ್ಲಿ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದ ಸಮಯದಲ್ಲಿ ಕುಟುಂಬಗಳೊಂದಿಗೆ ಸಂವಹನ ನಡೆಸಲಾಗಿತ್ತು. ವನ್ಯಜೀವಿಗಳ ಸಂಖ್ಯೆ ಹೆಚ್ಚಾಗುವ ಭಯದಿಂದ ಅವರು ಅರಣ್ಯದಿಂದ ಹೊರಬರಲು ಇಚ್ಛೆ ವ್ಯಕ್ತಪಡಿಸಿದ್ದರು ಎಂದು ಖಂಡ್ರೆ ಹೇಳಿದರು. ಸಂಪೂರ್ಣ ಸಮೀಕ್ಷೆ ಮತ್ತು ಗ್ರಾಮ ಸಭೆಯ ನಂತರ ಸ್ಥಳಾಂತರ ಪ್ರಕ್ರಿಯೆಯನ್ನು ನಡೆಸಲಾಗುತ್ತಿದೆ.

ಸ್ಥಳಾಂತರಕ್ಕೆ ಅವರ ಒಪ್ಪಿಗೆಯು ಸಂರಕ್ಷಣೆಯ ಕಡೆಗೆ ಮಾತ್ರವಲ್ಲದೆ, ರಸ್ತೆ, ನೀರು, ವಿದ್ಯುತ್ ಮತ್ತು ವೈದ್ಯಕೀಯ ಆರೈಕೆ ಸೇರಿದಂತೆ ಕಾಡಿನ ಹೊರಗೆ ಉತ್ತಮ ಸೌಲಭ್ಯಗಳನ್ನು ಪಡೆಯುವುದರಿಂದ ಜನರಿಗೆ ಸಹ ಸಕಾರಾತ್ಮಕ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು. ಕಾಡಿನ ಇತರ ಭಾಗಗಳಲ್ಲಿ ಇನ್ನೂ ಅನೇಕ ಕುಟುಂಬಗಳಿದ್ದು, ಅವುಗಳನ್ನು ಶೀಘ್ರದಲ್ಲೇ ಸ್ಥಳಾಂತರಿಸಲಾಗುವುದು ಎಂದು ಅವರು ಹೇಳಿದರು.

ಭೀಮಗಡದ ಕೃಷ್ಣಾಪುರ, ಗವಾಡಿ ಮತ್ತು ಮಂಡೇಪುರ ಪ್ರದೇಶಗಳಲ್ಲಿ ವಾಸಿಸುವ ಕುಟುಂಬಗಳು ಸಹ ಸ್ಥಳಾಂತರಗೊಳ್ಳಬೇಕಾಗಿದೆ ಮತ್ತು ಈ ಕುರಿತು ಕೆಲಸ ಮಾಡಲಾಗುತ್ತಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

# ಪಶು ಚಿಕಿತ್ಸಾಲಯ ಕಟ್ಟಡ ನಿರ್ಮಾಣಕ್ಕೆ ಶಾಸಕರಿಂದ ಭೂಮಿ ಪೂಜೆ



**ಮೊಳಕಾಲ್ಮೂರು. :** ತಾಲೂಕಿನ ದೇವಸಮುದ್ರ ಭಾಗದ ಗೋವುಗಳ ಚಿಕಿತ್ಸೆಗಾಗಿ ನಿರ್ಮಾಣವಾಗಲಿರುವ 50.00 ಲಕ್ಷ ರೂ.ವೆಚ್ಚದ ಪಶು ಚಿಕಿತ್ಸಾಲಯವು ತುಂಬಾ ಪ್ರಯೋಜಕಾರಿಯಾಗಲಿದೆ ಎಂದು ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.

ತಾಲೂಕಿನ ದೇವಸಮುದ್ರ ಗ್ರಾಮದಲ್ಲಿ 2024–25 ನೇ ಸಾಲಿನ ಆರ್.ಐ.ಡಿ.ಎಫ್. 30 ರ ಯೋಜನೆಯಡಿ ಮಂಜೂರಾದ 50.00 ಲಕ್ಷ ರೂ.ವೆಚ್ಚದ ಪಶು ಚಿಕಿತ್ಸಾಲಯದ ನೂತನ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ತಾಲೂಕಿನ ದೇವಸಮುದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಲವಾರು ಗ್ರಾಮಗಳಲ್ಲಿನ ಬಹುತೇಕ ರೈತರು ಹೈನುಗಾರಿಕೆಯನ್ನು ಕೈಗೊಂಡು ಆರ್ಥಿಕವಾಗಿ ಸಬಲರಾಗಲು ಸಹಕಾರಿಯಾಗಿದೆ. ಹೈನುಗಾರಿಕೆಯ ಪಶುಗಳು ಸೇರಿದಂತೆ ಕೃಷಿಗೆ ಬಳಸುವ ಪಶುಗಳು ಕಾಲುಬಾಯಿ ಹಾಗೂ ಇನ್ನಿತರ ಕಾಯಿಲೆಗಳಿಗೆ ಬಲಿಯಾಗುವುದನ್ನು ತಡೆಯಲು ಸೂಕ್ತ ಚಿಕಿತ್ಸೆ ನೀಡಲು ಪಶು ಚಿಕಿತ್ಸಾಲಯವು ಅತ್ಯಾವಶ್ಯಕವಾಗಿದೆ. ಈ ಭಾಗದಲ್ಲಿ ಪಶುಗಳು ಹಾಗೂ ಕುರಿ, ಮೇಕೆಗಳನ್ನು ಸಾಕಾಣಿಕೆ ಮಾಡಲಾಗುತ್ತಿದ್ದು ಈ ಜಾನುವಾರುಗಳ ಅನಾರೋಗ್ಯಕ್ಕೆ ಅಗತ್ಯವಾಗಿದೆ. ಅನಾರೋಗ್ಯಕ್ಕೀಡಾದ ಜಾನುವಾರುಗಳನ್ನು ದೂರದ ರಾಂಪುರ ಗ್ರಾಮದ ಪಶು ಚಿಕಿತ್ಸಾಲಯಕ್ಕೆ ಕರೆದೊಯ್ಯಲು ಕಷ್ಟಸಾಧ್ಯವಾಗುತ್ತಿದ್ದು, ಜಾನುವಾರುಗಳ ಜೀವ ರಕ್ಷಣೆಗಾಗಿ ಸುಸಜ್ಜಿತ ಪಶುಚಿಕಿತ್ಸಾಲಯಕ್ಕೆ ಈ ಭಾಗದ ಜನತೆಯ ಪ್ರಮುಖ ಬೇಡಿಕೆಯಾಗಿದ್ದು, ಈ ಭಾಗದ ಜನತೆಯ ಬೇಡಿಕೆಗನುಗುಣವಾಗಿ ಆರ್.ಐ.ಡಿ.ಎಫ್. 30 ರ ಯೋಜನೆಯಡಿ 50.00 ಲಕ್ಷ ರೂ.ಗಳ ಅನುದಾನವನ್ನು ಮಂಜೂರು ಮಾಡಿಸಲಾಗಿದೆ. ಮಂಜೂರಾದ ಅನುದಾನದಲ್ಲಿ ಸುಸಜ್ಜಿತ ಪಶುಚಿಕಿತ್ಸಾಲಯದ ನೂತನ ಕಟ್ಟಡವನ್ನು ನಿರ್ಮಿಸಿ ಈ ಭಾಗದ ಜಾನುವಾರುಗಳಿಗೆ ಸೂಕ್ತ ಚಿಕಿತ್ಸೆಯ ಸೌಲಭ್ಯ ಕಲ್ಪಿಸಿ ಜಾನುವಾರುಗಳನ್ನು ಸಂರಕ್ಷಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕೆಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಗ್ರಾ.ಪಂ.ನ ಅಧ್ಯಕ್ಷೆ ಲಕ್ಷ್ಮಿ ಚಂದ್ರಣ್ಣ, ಉಪಾಧ್ಯಕ್ಷ ಕುಮಾರಸ್ವಾಮಿ, ಗ್ರಾ.ಪಂ.ನ ಸದಸ್ಯರಾದ ಗಂಗಣ್ಣ, ರಮೇಶ್, ಮುಖಂಡರಾದ ಗೋವಿಂದಪ್ಪ, ಹರಿಹರರೆಡ್ಡಿ, ಪಶು ಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಹೆಚ್. ರಂಗಪ್ಪ, ಗ್ರಾ.ಪಂ.ನ ಅಭಿವೃದ್ಧಿ ಅಧಿಕಾರಿ ಬೀರಲಿಂಗಪ್ಪ, ಇನ್ನಿತರ ಮುಖಂಡರು , ಅಧಿಕಾರಿ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಗುಡುಗು–ಸಿಡಿಲಿನಿಂದಾಗುವ ಅನಾಹುತ ತಪ್ಪಿಸಲು ಮುನ್ನೆಚ್ಚರಿಕೆ ಸೂಚನೆ ಪಾಲಿಸಿ



**ಬಳ್ಳಾರಿ:** ಸಾಮಾನ್ಯವಾಗಿ ಆರಂಭದ ಮುಂಗಾರು ಪೂರ್ವದಲ್ಲಿ ಹಾಗೂ ಮುಂಗಾರಿನ ಮಳೆಗಾಲದಲ್ಲಿ ಕಂಡುಬರುವ ಗುಡುಗು–ಸಿಡಿಲಿನಿಂದಾಗುವ ಅಪಾಯಗಳನ್ನು ತಪ್ಪಿಸಲು ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಮೇ ತಿಂಗಳಿನಲ್ಲಿ ಕಂಡುಬರುವ ಮಳೆಗಾಲದ ಆರಂಭದ ಹಂತದಲ್ಲಿ ತೀವ್ರತರದ ಗುಡುಗು–ಸಿಡಿಲು ಕಂಡುಬರುವುದು ಸಾಮಾನ್ಯವಾಗಿದ್ದು, ಜೊತೆಗೆ ಬಿರುಸಾಗಿ ಗಾಳಿ ಸಹಿತ ಮಳೆ ಕಂಡುಬರುವುದು ವಾಡಿಕೆಯಾಗಿದೆ. ಈ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಗುಡುಗು ಸಿಡಿಲು ಸಹಿತ ಮಳೆ ಕಂಡುಬರುತ್ತಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದು ಅವರು ತಿಳಿಸಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಹೊರಡಿಸುವ ಮಾರ್ಗಸೂಚನೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯದ ದೃಷ್ಟಿಯಿಂದ ನೀಡುವ ಸಲಹೆಗಳನ್ನು ಅನುಸರಿಸಬೇಕು ಎಂದು ಹೇಳಿದ್ದಾರೆ.

**ಅನುಸರಿಸಬೇಕಾದ ಕ್ರಮ:** ಬಯಲು ಪ್ರದೇಶಗಳಲ್ಲಿ, ಗಿಡಗಳ ಕೆಳಗೆ ಅಥವಾ ಕಬ್ಬಿಣದಿಂದ ಕೂಡಿರುವ ಕಟ್ಟಡ ಅಥವಾ ಶೆಡ್‌ಗಳಲ್ಲಿ ಆಶ್ರಯ ಪಡೆಯದೇ ಸೂಕ್ತ ಸ್ಥಳದಲ್ಲಿ ಆಶ್ರಯ ಪಡೆಯಬೇಕು. ಇದರಿಂದ ಜೀವ ಹಾನಿ ತಪ್ಪಿಸಲು ಸಾಧ್ಯವಾಗುತ್ತದೆ. ಗುಡುಗ–ಿ–ಮಿಂಚು ಬರಲಿದೆ ಎಂದು ಗೊತ್ತಾದಾಗ ಬಯಲಿನಲ್ಲಿದ್ದರೆ. ತಕ್ಷಣ ಇರುವುದರಲ್ಲಿ ತಗ್ಗು ಪ್ರದೇಶಕ್ಕೆ ಹೋಗಿ ಕುಳಿತುಕೊಳ್ಳಬೇಕು.

ತಗ್ಗು ಪ್ರದೇಶ ಇಲ್ಲದೇ ಬಯಲಿನಲ್ಲಿಯೇ ಇರಬೇಕಾದರೆ ನಿಮ್ಮ ತಲೆಯನ್ನು ಮೊಣಕಾಲುಗಳ ನಡುವೆ ಹುದುಗಿಸಿಕೊಳ್ಳಬೇಕು. ಇದು ಮಿಂಚಿನಿಂದ ಮೆದುಳಿಗೂ, ಹೃದಯಕ್ಕೂ ಆಗುವ ಹಾನಿಯನ್ನು ತಪ್ಪಿಸುತ್ತದೆ. ಮರಗಳಿದ್ದ ಪ್ರದೇಶದಲ್ಲಿದ್ದರೆ ಅಲ್ಲಿಂದ ಬೇಗನೆ ಹೊರಬರುವುದು ಒಳ್ಳೆಯದು. ಏಕೆಂದರೆ ಸಿಡಿಲು ಮೋಡದಿಂದ ಭೂಮಿಗೆ ಹರಿಯಲು ಮರದಂತಹ ಹಸಿ, ಒದ್ದೆ ವಸ್ತುವನ್ನೇ ಆರಿಸಿಕೊಳ್ಳುತ್ತದೆ.

ಎತ್ತರದ ಗುಡ್ಡದ ಮೇಲಿದ್ದರೆ ತಗ್ಗು ಪ್ರದೇಶಲ್ಲೆ ಹೋಗಬೇಕು. ಕುರಿಮಂದೆ ಅಥವಾ ಜಾನುವಾರುಗಳ ಮಧ್ಯ ನಿಂತಿದ್ದರೆ ಅವುಗಳ ಮಧ್ಯದಲ್ಲಿ ಬಗ್ಗಿ ಕುಳಿತುಕೊಳ್ಳಿ, ಏಕೆಂದರೆ ಮಿಂಚು ಪ್ರಾಣಿಗಳಿಗಿಂತ ಎತ್ತರವಿರುವ ಮನುಷ್ಯನನ್ನೇ ಆರಿಸಿಕೊಳ್ಳುತ್ತದೆ.

ಕೆರೆಯಲ್ಲಿ ಈಜುವುದು, ಸ್ನಾನ ಮಾಡುವುದು ಬೇಡ, ನೀರಿನಲ್ಲಿದ್ದರೆ ತಕ್ಷಣ ಹೊರಬೇಕು. ವಿದ್ಯುತ್ ಕಂಬ, ಎಲೆಕ್ಟ್ರಿಕಲ್ ಟವರ್, ಮೊಬೈಲ್ ಟವರ್ ಟ್ರಾನ್ಸ್‌ಫಾರ್ಮರ್ ಮುಂತಾದವುಗಳ ಹತ್ತಿರವೂ ಇರಬಾರದು. ಮಳೆ ಬರುವ ಸಮಯದಲ್ಲಿ ಮನೆಯ ಮೇಲ್ಛಾವಣಿ ಸ್ವಚ್ಛ ಮಾಡುವ ಸಾಹಸ ಬೇಡ, ಮನೆಯ ಕಿಟಕಿಯ ಬಳಿ ನಿಲ್ಲುವುದಕ್ಕಿಂತಲೂ ಮನೆಯ ಮಧ್ಯದಲ್ಲಿರುವುದು ಸುರಕ್ಷಿತ.

ಗುಡುಗು–ಸಿಡಿಲಿನ ಸಂದರ್ಭದಲ್ಲಿ ಮೊಬೈಲ್‌ನಲ್ಲಿ ಮಾತನಾಡಬಾರದು. ಚಾರ್ಜ್ ಮಾಡುವ ಸಾಹಸವೂ ಬೇಡ. ಕಾರಿನಲ್ಲಿ ಪ್ರಯಾಣಿಸುತ್ತಿದ್ದರೆ ಗಾಜನ್ನು ಮುಚ್ಚಿಕೊಳ್ಳಿ, ಕಾರಿನ ಬಾಡಿಯನ್ನು ಸಾಧ್ಯವಾದಷ್ಟು ಸ್ಪರ್ಶಿಸದೇ ಮಧ್ಯದಲ್ಲಿ ಕುಳಿತುಕೊಳ್ಳುವುದು ಒಳ್ಳೆಯದು.

# ಬಸ್ ನಿಲ್ದಾಣಗಳಲ್ಲಿ ಕ್ಯೂ ಆರ್ ಕೋಡ್ ಮೂಲಕ ಸ್ವಚ್ಛತಾ ಅಭಿಯಾನ



**ಹಾವೇರಿ :** ವಾಕರಸಾ ಸಂಸ್ಥೆಯ ಸಾರಿಗೆ ಬಸ್ ನಿಲ್ದಾಣಗಳಲ್ಲಿ ಸಾರಿಗೆ ಸಂಸ್ಥೆ ಸ್ವಚ್ಛತೆ ಕಾಪಾಡುವ ಉದ್ದೇಶದಿಂದ "ನಮ್ಮ ಬಸ್ ನಿಲ್ದಾಣ, ಸ್ವಚ್ಛ ಬಸ್ ನಿಲ್ದಾಣ" ಎಂಬ ಹೆಸರಿನಲ್ಲಿ "ಕ್ಯೂ ಆರ್ ಕೋಡ್ ಮೂಲಕ ಸ್ವಚ್ಛತಾ ಅಭಿಯಾನ ಆರಂಭಿಸಲಾಗಿದ್ದು, ಸಾರ್ವಜನಿಕರು ಈ "ಕ್ಯೂ ಆರ್" ಕೋಡ ಬಳಸಿ ಬಸ್ ನಿಲ್ದಾಣದ ಸ್ವಚ್ಛತೆ ಬಗ್ಗೆ ತಮ್ಮ ಅಭಿಪ್ರಾಯ ಹಾಗೂ ಸಲಹೆಗಳನ್ನು ಸಂಸ್ಥೆಗೆ ನೀಡಬಹುದಾಗಿದೆ ಎಂದು ಹಾವೇರಿ ವಿಭಾಗದ ಸಾರಿಗೆ ಅಧಿಕಾರಿ ಅಶೋಕ. ಆರ್.ಪಾಟೀಲ್ ಅವರು ಹೇಳಿದರು.

ಅವರು ಹಾವೇರಿ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ, ನಿಲ್ದಾಣದಲ್ಲಿನ ಸಂಸ್ಥೆಯ ಸಿಬ್ಬಂದಿಗಳಿಗೆ ನಿಲ್ದಾಣದ ನಿರ್ವಹಣೆಯನ್ನು ಉತ್ತಮವಾಗಿ ನಿರ್ವಹಿಸಲು ತಿಳಿಸಿದರು ಹಾಗೂ ಸಾರ್ವಜನಿಕರಿಗೆ ಬಸ್ ನಿಲ್ದಾಣದ ನಿರ್ವಹಣೆಯ ಕುರಿತು "ಕಿಖ"ಕೋಡ ಖಅಂಓ ಮೂಲಕ ಅಭಿಪ್ರಾಯ ಸಲ್ಲಿಸಬಹುದಾಗಿದ್ದು, ಈ ಕುರಿತಂತೆ ಆನ್ ಲೈನ್ ಮೂಲಕ ಬಸ್ ನಿಲ್ದಾಣದ ಅಭಿಪ್ರಾಯ ಸಲ್ಲಿಸಬಹುದು ಎಂದು ತಿಳಿಸಿದರು.

ಇಡೀ ಸಾರಿಗೆ ಸಂಸ್ಥೆಯಲ್ಲಿ ವಾಯವ್ಯ ಸಾರಿಗೆ ಸಂಸ್ಥೆ ಪ್ರಥಮ ಬಾರಿಗೆ ಇಂತಹ ಪ್ರಯೋಗಕ್ಕೆ ಮುಂದಾಗಿದ್ದು, ಈ ಅಭಿಯಾನದಲ್ಲಿ ಬಸ್ ನಿಲ್ದಾಣಗಳ ಸ್ವಚ್ಛತೆ, ಶೌಚಾಲಯ ನಿರ್ವಹಣೆ, ತ್ಯಾಜ್ಯ ವಿಲೇವಾರಿ, ಶೌಚಾಲಯದ ದರ ಪಟ್ಟಿ ಅಳವಡಿಕೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸಂಚಾರ ನಿಯಂತ್ರಕರು ಪ್ರಯಾಣಿಕರೊಂದಿಗೆ ಸೌಜನ್ಯದ ನಡವಳಿಕೆ ಇತ್ಯಾದಿ ಅಂಶಗಳ ಕುರಿತು ಮೌಲ್ಯಮಾಪನ ಮಾಡಲು ಸಾರ್ವಜನಕರಿಗೆ ಅವಕಾಶ ನೀಡಲಾಗಿದೆ ಎಂದರು.

ಅಭಿಪ್ರಾಯ ಹಾಗೂ ಸಲಹೆ ಜತೆಗೆ ಆ ಬಸ್ ನಿಲ್ದಾಣಕ್ಕೆ ರ್‍ಯಾಂಕ್ ಕೂಡಾ ಕೊಡಬಹುದುದು, ನೀವು ಕೊಡುವ ರ್‍ಯಾಂಕ್ ಆಧಾರದ ಮೇಲೆಯೇ ಉತ್ತಮ ರೀತಿಯ ಸ್ವಚ್ಛತೆ ಕಾಪಾಡುವ ಬಸ್ ನಿಲ್ದಾಣಗಳನ್ನು ಹಾಗೂ ಅಲ್ಲಿನ ಸಿಬ್ಬಂದಿಗೆ "ನಮ್ಮ ಬಸ್ ನಿಲ್ದಾಣ ಸ್ವಚ್ಛ ನಿಲ್ದಾಣ" ಎಂಬ ಶೀರ್ಷಿಕೆಯಡಿ ಬಹುಮಾನ, ಪ್ರಶಸ್ತಿಗಳನ್ನು ನೀಡಿ ಪ್ರೋತ್ಸಾಹಿಸಲು ಸಾರಿಗೆ ಸಂಸ್ಥೆ ನಿರ್ಧರಿಸಿದೆ ಎಂದು ತಿಳಿಸಿದರು.

# ಕೃಷಿ ಸಚಿವರಿಂದ ಕೃತಕ ಬುದ್ಧಿಮತ್ತೆ ಕೇಂದ್ರದ ಕಟ್ಟಡ ಉದ್ಘಾಟನೆ

**ಧಾರವಾಡ :** ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು, ಇಂದು ಬೆಳಿಗ್ಗೆ ಧಾರವಾಡ ಜಂಟಿ ಕೃಷಿ ನಿರ್ದೇಶಕರ ಕಚೇರಿ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಕೇಂದ್ರದ ನೂತನ ಕಟ್ಟಡ ಹಾಗೂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ನೂತನ ಕಟ್ಟಡ ಮತ್ತು ಜೈವಿಕ ಗೊಬ್ಬರ ಗುಣ ನಿಯಂತ್ರಣ ಪ್ರಯೋಗಶಲಯ ಕಟ್ಟಡವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶಾಸಕ ಎನ್.ಎಚ್. ಕೋನರಡ್ಡಿ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್.ಪಾಟೀಲ, ಕೃಷಿ ಇಲಾಖೆ ಆಯುಕ್ತ ವೈ.ಎಸ್.ಪಾಟೀಲ, ಕೃಷಿ ಇಲಾಖೆ ನಿರ್ದೇಶಕ ಡಾ.ಜಿ.ಟಿ.ಪುತ್ರ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಲ್ಲನಗೌಡ ಪಾಟೀಲ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಕೃಷಿ ಇಲಾಖೆ ಅಧಿಕಾರಿಗಳು, ರೈತ ಪ್ರಮುಖರು ಉಪಸ್ಥಿತರಿದ್ದರು.



**ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಕೇಂದ್ರ:** ಕೃತಕ ಬುದ್ಧಿಮತ್ತೆಯನ್ನು ಕೃಷಿ ಕ್ಷೇತ್ರದ ಅಭಿವೃದ್ಧಿಯಲ್ಲಿ ಬಳಸುವುದು ಯೋಜನೆ ಉದ್ದೇಶವಾಗಿದೆ. ಇದರಿಂದ ವಿವಿಧ ಕ್ಷೇತ್ರಗಳ ಜ್ಞಾನವನ್ನು ಬಳಸಿಕೊಳ್ಳಬಹುದು. ಇತ್ತೀಚಿನ ದಿನಮಾನಗಳಲ್ಲಿ ಈ ತಂತ್ರಜ್ಞಾನ ಬಳಸಿ ಉತ್ಪಾದನಾ ಪದ್ಧತಿ ಸುಧಾರಿಸಲಾಗಿದೇ, ಇಳುವರಿ ಹೆಚ್ಚಾಗಿದೆ, ಕೃಷಿ ಕ್ಷೇತ್ರವು ವೈವಿಧ್ಯಮಯವಾಗಿದೆ. ಯಥೇಚ್ಚ ಅಂಕಿ ಅಂಶ ಮತ್ತು ದೊಡ್ಡ ಪ್ರಮಾಣದ ಮಾಹಿತಿಯನ್ನು ಸಂಗ್ರಹಿಸುವುದು, ಬಳಸುವುದು, ಅವಶ್ಯವಾಗಿದೆ.

ಎಲ್ಲಾ ಕೆಲಸವನ್ನು ಸುಲಭವಾಗಿ ಹಾಗೂ ನಿಖರವಾಗಿ ಮಾಡಲು ಸಹಾಯಕವಾಗಿದೆ. ಕಾಲಕಾಲಕ್ಕೆ ಬದಲಾಗುತ್ತಿರುವ ಕೃಷಿ ವಲಯದ ವಿದ್ಯಮಾನಗಳ ಹಿನ್ನೆಲೆಯಲ್ಲಿ ನೀತಿ ನಿರ್ಧಾರ ರೂಪಿಸುವಲ್ಲಿ ಪ್ರಸ್ತುತ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕಾಗಿದೆ.

ವಿವಿಧ ಬೇಸಾಯ ಕ್ರಮಗಳು, ಬಿತ್ತನೆ, ನೀರಾವರಿ, ಗೊಬ್ಬರ ಬಳಕೆ, ಕ್ರಿಮಿಕೀಟಗಳ ನಿರ್ವಹಣೆ ಮುಂತಾದವುಗಳಿಗೆ ಎಐಎಸಿ ನೆರವಿಗೆ ಬರುತ್ತದೆ. ದೂರಸಂವೇದಿ ತಂತ್ರಜ್ಞಾನದೊಂದಿಗೆ ವೈಜ್ಞಾನಿಕವಾಗಿ ಸಂಪನ್ಮೂಲಗಳ ನಿರ್ವಹಣೆಯನ್ನು ಮಾಡಬಹುದಾಗಿದೆ. ಕೃತಕ ಬುದ್ಧಿಮತ್ತೆ ಕೇಂದ್ರ ಕಟ್ಟಡವನ್ನು 3.75 ಕೋಟಿ ಮೊತ್ತದಲ್ಲಿ ಕರ್ನಾಟಕ ಗೃಹ ಮಂಡಳಿ ಇವರಿಂದ ನಿರ್ಮಿಸಲಾಗಿದೆ.

ಕಟ್ಟಡದಲ್ಲಿ ವರ್ಕ್ ಸ್ಪೇಸ್ ಕ್ಯೂಬಿಕಲ್ಸ್, ಸರ್ವರ್ ಕೊಠಡಿ, ಬ್ಯಾಟರಿ ಕೊಠಡಿ, ಯುಟಿಲಿಟಿ & ಟೂಲ್ ರೂಮ್, ಕಾನ್ಫರೆನ್ಸ್ ಹಾಲ್, ಹಾಡ್ ಕ್ಯಾಬಿನ್, ಊಟದ ಕೊಠಡಿ, ಲಿಫ್ಟ್, ಇನ್ನು ಹಲವಾರು ವ್ಯವಸ್ಥೆಗಳನ್ನು ಮಾಡಲಾಗಿದೆ.

**ಧಾರವಾಡ ಜಿಲ್ಲಾ ಕೃಷಿ ತರಬೇತಿ ಕೇಂದ್ರ:** ಕೃಷಿ ಇಲಾಖೆಯ ಹಿರಿಯ, ಕಿರಿಯ ಅಧಿಕಾರಿಗಳಿಗೆ ಮತ್ತು ರೈತ ಸಮುದಾಯದವರಿಗೆ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲು ಬೆಳೆ ಸಂಗೋಪನೆ ಅಲ್ಲದೆ ಕೃಷಿ ಸಂಬಂಧಿ ಎಲ್ಲ ಉಪಕಸುಬಗಳು ಹಾಗೂ ಆದಾಯ ತರುವ ಚಟುವಟಿಕೆಗಳ ಕುರಿತಾಗಿ ವಿವಿಧ ತರಬೇತಿಗಳನ್ನು ನೀಡಲಾಗುತ್ತಿದೆ. ತರಬೇತಿ ಕೇಂದ್ರದ ನೂತನ ಕಟ್ಟಡವನ್ನು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ಅಡಿಯಲ್ಲಿ, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಧಾರವಾಡ ಇವರಿಂದ ನಿರ್ಮಿಸಲಾಗಿದೆ. ಧಾರವಾಡ ಜೈವಿಕ ಗೊಬ್ಬರ ಗುಣ ನಿಯಂತ್ರಣ ಪ್ರಯೋಗಾಲಯ: ಜೈವಿಕ ಗೊಬ್ಬರ ಬಳಕೆಯಿಂದ ಕೃಷಿಯಲ್ಲಿ ರಸಗೊಬ್ಬರ ಪ್ರಮಾಣವನ್ನು ಕಡಿಮೆ ಮಾಡಬಹುದು, ಉತ್ಪಾದನಾ ವೆಚ್ಚವನ್ನು ತಗ್ಗಿಸುವುದು, ಪರಿಸರ ಮಾಲಿನ್ಯವನ್ನು ನಿಯಂತ್ರಿಸಬಹುದು. ಮಾರುಕಟ್ಟೆಯಲ್ಲಿ ವಿವಿಧ ಜೈವಿಕ ಗೊಬ್ಬರಗಳು ಲಭ್ಯವಿದ್ದು, ಅವುಗಳ ಗುಣಮಟ್ಟವನ್ನು ಖಾತ್ರಿ ಪಡಿಸಿಕೊಳ್ಳುವುದು ಅವಶ್ಯಕವಾಗಿದೆ.

ಜೈವಿಕ ಗೊಬ್ಬರ ಗುಣನಿಯಂತ್ರಣ ಪ್ರಯೋಗಾಲಯವು ಮಾದರಿ ವಿಶ್ಲೇಷಣೆ ಕೆಲಸವನ್ನು ಪೂರೈಸುತ್ತದೆ. 2019–20 ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯಲ್ಲಿ ಕಟ್ಟಡ ನವೀಕರಣ ಮತ್ತು ವಿಸ್ತರ್ಣೆ ಕಾಮಗಾರಿಯನ್ನು ಕೈಕೊಳ್ಳಲಾಗಿದೆ.

# ಮಣಿಪುರ: ಚಂದೇಲ್ ನಲ್ಲಿ ನಡೆದ ಕಾರ್ಯಾಚರಣೆಯಲ್ಲಿ 10 ಉಗ್ರರ ಹತ್ಯೆ; ಮುಂದುವರಿದ ಕೂಂಬಿಂಗ್



**ಇಂಫಾಲ:** ಮಣಿಪುರದ ಚಂದೇಲ್ ಜಿಲ್ಲೆಯಲ್ಲಿ ಉಗ್ರರು ಮತ್ತು ಅಸ್ಸಾಂ ರೈಫಲ್ಸ್ ಘಟಕದೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಕನಿಷ್ಠ 10 ಮಂದಿ ಉಗ್ರರು ಹತ್ಯೆಯಾಗಿದ್ದಾರೆ. ಕಾರ್ಯಾಚರಣೆ ಇನ್ನೂ ಮುಂದುವರಿದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಈ ಕುರಿತು ಸೇನೆಯ ಪೂರ್ವ ಕಮಾಂಡ್ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ., 'ಭಾರತ–ಮ್ಯಾನ್ಮಾರ್ ಗಡಿಗೆ ಸಮೀಪವಿರುವ ಚಂದೇಲ್ ಜಿಲ್ಲೆಯ ಖೆಂಗ್‌ಜಾಯ್ ತಹಸಿಲ್‌ನ ನ್ಯೂ ಸಮ್ತಾಲ್ ಗ್ರಾಮದ ಬಳಿ ಉಗ್ರರ ಚಲನವಲನಗಳ ಬಗ್ಗೆ ಗುಪ್ತಚರ ಅಧಿಕಾರಿಗಳು ನೀಡಿದ ಖಚಿತ ಮಾಹಿತಿ ಆಧರಿಸಿ ಅಸ್ಸಾಂ ರೈಫಲ್ಸ್ ಘಟಕವು ಮೇ 14 ರಂದು (ಬುಧವಾರ) ಕಾರ್ಯಾಚರಣೆಯನ್ನು ಪ್ರಾರಂಭಿಸಿತ್ತು.

ಈ ವೇಳೆ ಶಂಕಿತರೊಂದಿಗೆ ಗುಂಡಿನ ಚಕಮಕಿ ನಡೆದಿದ್ದು, ಸೇನಾ ಪಡೆ ತಕ್ಕ ಪ್ರತ್ಯುತ್ತರ ನೀಡಿದೆ. ಒಟ್ಟು 10 ಮಂದಿ ಉಗ್ರರನ್ನು ಹತ್ಯೆ ಮಾಡಲಾಗಿದ್ದು, ಅಪಾರ ಪ್ರಮಾಣದ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ಬಳ್ಳಾರಿ: ಸರ್ಕಾರಿ ಐಟಿಐ ಕಾಲೇಜು ಪ್ರವೇಶಾತಿಗೆ ಅರ್ಜಿ ಆಹ್ವಾನ

**ಬಳ್ಳಾರಿ :** ನಗರದ ರೇಡಿಯೋ ಪಾರ್ಕ್ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಪ್ರಸಕ್ತ ಸಾಲಿಗೆ ವಿವಿಧ ವೃತ್ತಿಗಳಿಗೆ ಪ್ರವೇಶಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯರಾದ ಪಂಡಿತಾರಾಧ್ಯ ಅವರು ತಿಳಿಸಿದ್ದಾರೆ.

10 ನೇ ತರಗತಿ ಪಾಸ್/ಫೇಲ್ ಆದ ಅಭ್ಯರ್ಥಿಗಳು ವೆಬ್ ಸೈಟ್ ವಿಳಾಸ www.cite.karnataka.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದ್ದು, ಇಲ್ಲವೇ ನೇರವಾಗಿ ಸಂಸ್ಥೆಗೆ ಭೇಟಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಮೇ 29 ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿದ ಸಂಸ್ಥೆಯಲ್ಲಿ ಮಾತ್ರ ದಾಖಲೆ ಪರಿಶೀಲನೆಗೆ ಕಡ್ಡಾಯವಾಗಿ ಹಾಜರಾಗಬೇಕು.

**ವಿಶೇಷ ಸೂಚನೆ :** ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡುವ ಮೊಬೈಲ್ ಸಂಖ್ಯೆ ಹಾಗೂ ಇ–ಮೇಲ್ ವಿಳಾಸವನ್ನು ಪ್ರವೇಶಾತಿ ಮತ್ತು ಪರೀಕ್ಷೆ ಮುಗಿಯುವವರೆಗೂ ಬದಲಾವಣೆ ಮಾಡುವಂತಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮೊ.9916300462 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವಕರ ದೃಢ ನಿರ್ಧಾರ, ಕಠಿಣ ಪರಿಶ್ರಮ, ಸತತ ಪ್ರಯತ್ನ ರಾಷ್ಟ್ರದ ಅಭಿವೃದ್ಧಿಗೆ ಶಕ್ತಿ

**ದಾವಣಗೆರೆ :** ಭಾರತವು ಯೌವನದ ಶಕ್ತಿಯಿಂದ ಕೂಡಿದ ರಾಷ್ಟ್ರವಾಗಿದೆ. ಇಂದಿನ ವಿದ್ಯಾರ್ಥಿಗಳು ಕೇವಲ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಷ್ಟೇ ಅಲ್ಲ, ನಾಳೆಯ ನಾಯಕರಾಗಿದ್ದಾರೆ. ಯುವಕರ ದೃಢ ನಿರ್ಧಾರ, ಕಠಿಣ ಪರಿಶ್ರಮ ಮತ್ತು ಸತತ ಪ್ರಯತ್ನಗಳನ್ನು ಸಮಾಜ ಮುಖಿ ಕಾರ್ಯಗಳಿಗೆ ಬಳಸಿ ರಾಷ್ಟ್ರದ ಅಭಿವೃದ್ಧಿಗೆ ಶಕ್ತಿಯಾಗಬೇಕು ಎಂದು ಪ್ರಾಧ್ಯಾಪಕ ಡಾ. ವೆಂಕಟೇಶ್‌ಬಾಬು ಕರೆ ನೀಡಿದರು.

ನಗರದ ಚಾಣಕ್ಯ ಪ್ರಥಮ ದರ್ಜೆ ಕಾಲೇಜಿನ ಆಶ್ರಯದಲ್ಲಿ ಹೊಸಳ್ಳಿ ಗ್ರಾಮದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರದ ನಾಲ್ಕನೇ ದಿನದ ಕಾರ್ಯಕ್ರಮದಲ್ಲಿ ಬುದ್ಧ ಪೂರ್ಣಿಮೆಯ ಸಂದರ್ಭದಲ್ಲಿ ಉಪಸ್ಥಿತರಿದ್ದು ಅವರು ಮಾತನಾಡುತ್ತಿದ್ದರು.

ಸ್ವಾಮಿ ವಿವೇಕಾನಂದ, ಭಗತ್ ಸಿಂಗ್,




ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಜೀವನದ ಉದಾಹರಣೆಗಳನ್ನು ನೀಡಿ, ಯುವಕರಲ್ಲಿ ದೇಶಭಕ್ತಿ, ಶಿಸ್ತು ಮತ್ತು ನೈತಿಕ ಮೌಲ್ಯಗಳ ಅಗತ್ಯವನ್ನು ಒತ್ತಿ ಹೇಳಿದರು. ಸಾಮಾಜಿಕ ಮಾಧ್ಯಮಗಳಲ್ಲಿ ಸಮಯ ವ್ಯರ್ಥ ಮಾಡುವ ಬದಲು, ಯುವಕರು ತಮ್ಮ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಒತ್ತು ನೀಡಬೇಕು ಎಂದು ವೆಂಕಟೇಶ್‌ಬಾಬು ಸಲಹೆ ನೀಡಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ಮಂಜುನಾಥ್ ಜೆ.ಎಂ. ಅವರು ಬುದ್ಧ ಪೂರ್ಣಿಮೆಯ ಮಹತ್ವ ಮತ್ತು ಗೌತಮ ಬುದ್ಧರ ತತ್ವಗಳ ಕುರಿತು ವಿವರಿಸುತ್ತಾ, ಬುದ್ಧ ಪೂರ್ಣಿಮೆಯು ಶಾಂತಿ, ಸಹಿಷ್ಣುತೆ ಮತ್ತು ಜ್ಞಾನದ ಪ್ರತೀಕವಾಗಿದೆ. ಬುದ್ಧರ ಜನನ, ಬೋಧಿ ಮತ್ತು ಮಹಾಪರಿನಿರ್ವಾಣವು ಈ ದಿನದಂದೇ ಸಂಭವಿಸಿದೆ. ಅವರ ಅಷ್ಟಾಂಗಮಾರ್ಗ ಸಮ್ಯಕ್ ದೃಷ್ಟಿ, ಸಮ್ಯಕ್ ಸಂಕಲ್ಪ, ಸಮ್ಯಕ್ ವಾಚನ ಮುಂತಾದ ತತ್ವಗಳು ಮಾನವೀಯತೆಯ ಮಾರ್ಗದರ್ಶಿಗಳಾಗಿವೆ ಎಂದು ತಿಳಿಸಿದರು. ಯುವಕರು ಬುದ್ಧನ ತತ್ವಗಳನ್ನು ಅಳವಡಿಸಿಕೊಂಡು ವ್ಯಕ್ತಿತ್ವ ವಿಕಾಸ, ಶಾಂತಿಯುತ ಸಮಾಜ ನಿರ್ಮಾಣ ಮತ್ತು ಜ್ಞಾನಮಾರ್ಗದಲ್ಲಿ ಮುನ್ನಡೆಯಬೇಕೆಂದು ಸಲಹೆ ನೀಡಿದರು.

ಚೈತನ್ಯ ಕಾಲೇಜಿನ ಉಪನ್ಯಾಸಕ ನಾಗರಾಜ್ ನಾಯಕ್ ಅವರು ಎನ್ನೆಸ್ಸೆಸ್‌ನ ಉದ್ದೇಶಗಳನ್ನು ವಿವರಿಸಿದರು. ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ನಾಯಕತ್ವ ಕೌಶಲ್ಯ ಮತ್ತು ಗ್ರಾಮೀಣ ಅಭಿವೃದ್ಧಿಯ ಜವಾಬ್ದಾರಿಯನ್ನು ಬೆಳೆಸುತ್ತದೆ. ಇದು ಪಠ್ಯೇತರ ಚಟುವಟಿಕೆಗಳ ಮೂಲಕ ವ್ಯಕ್ತಿತ್ವ ವಿಕಾಸಕ್ಕೆ ವೇದಿಕೆಯಾಗಿದೆ ಎಂದು ಒತ್ತಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ವಾಣಿಜ್ಯ ವಿಭಾಗದ ಉಪನ್ಯಾಸಕರಾದ ಕು. ಸಂಜನಾ ವಹಿಸಿದ್ದರು. ಮುಖ್ಯ ಅತಿಥಿಯಾಗಿ ಕಾಲೇಜಿನ ಪ್ರಾಂಶುಪಾಲ ಸ್ವಾಮಿ, ಸಂಯೋಜನಾಧಿಕಾರಿ ರವಿ ಕುಮಾರ್ ಹಲವಾಗಲು ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

# ಕೃಷಿಗೆ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಲಭ್ಯವಾಗುವಂತೆ ಕ್ರಮ



**ಹರಿಹರ :** ಕೃಷಿಗೆ ಅವಶ್ಯಕವಾಗಿರುವ ಉತ್ತಮ ಗುಣ ಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳು ಸಕಾಲದಲ್ಲಿ ರೈತರಿಗೆ ಲಭ್ಯವಾಗುವಂತೆ ಕ್ರಮ ವಹಿಸಲಾಗುವುದು ಎಂದು ಸಹಾಯಕ ಕೃಷಿ ನಿರ್ದೇಶಕ ಎಸ್.ನಟರಾಜ್ ಹೇಳಿದರು.

ನಗರದ ಕೃಷಿ ಇಲಾಖೆಯ ಆವರಣದಲ್ಲಿ ಕೃಷಿ ಪರಕರ ಮಾರಾಟ ಗಾರರಿಗೆ ಬುಧವಾರ ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಯನ್ನು ಉದ್ಘಾಟಿಸಿ ಮಾತನಾಡಿದ ಅವರು,2025–26 ನೇ ಸಾಲಿನ ಮುಂಗಾರು ಹಂಗಾಮು ಜೂನ್ ನಿಂದ ಪ್ರಾರಂಭ ವಾಗುತ್ತಿದ್ದು, ಕೃಷಿಗೆ ಅವಶ್ಯಕವಾಗಿರುವ ಉತ್ತಮ ಗುಣ ಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳು ಸಕಾಲದಲ್ಲಿ ರೈತರಿಗೆ ಲಭ್ಯವಾಗುವಂತೆ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಕೃಷಿ ನಿರ್ದೇಶಕರ ಕಛೇರಿಯ ಜಾರಿದಳ ಸಹಾಯಕ ಕೃಷಿ ನಿರ್ದೇಶಕ ಬಿ.ವಿ.ಶ್ರೀನಿವಾಸಲು ಮಾತನಾಡುತ್ತಾ ಎಲ್ಲಾ ಕೃಷಿ ಪರಿಕರ ಮಾರಾಟಗಾರರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ಕಾಯ್ದೆ ಕಾನೂನಿನ ಬಗ್ಗೆ ಅರಿವು ಮೂಡಿಸುವ ಉಪನ್ಯಾಸ ಸವಿಸ್ತಾರವಾಗಿ ನೀಡಿದರು.

ಇದೇ ವೇಳೆ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಜಾರಿದಳ ಸಹಾಯಕ ಕೃಷಿ ನಿರ್ದೇಶಕ ವಿ.ಪಿ.ಗೋವರ್ಧನ ಮಾತನಾಡಿ ಕೃಷಿ ಪರಿಕರ ಮಾರಾಟಗಾರರಿಗೆ ಕೀಟನಾಶಕ ಕಾಯ್ದೆಗೆ ಸಂಬಂಧಿಸಿದ ನೂತನ ತಿದ್ದುಪಡಿಗಳ ಬಗ್ಗೆ ವಿವರಣೆ ನೀಡಿದರು .

ಕೃಷಿ ಪರಿಕರ ಮಾರಾಟಗಾರರಿಗೆ ಒಂದು ದಿನದ ತರಬೇತಿ ಯಶಸ್ವಿಯಾಗಿ ನಡೆದ ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿ ಎನ್.ಕೆ. ವಿಕಾಸ್ ನಿರೂಪಿಸಿದರು. ಕೃಷಿ ಇಲಾಖೆ ತಾಂತ್ರಿಕ ಅಧಿಕಾರಿ ಶ್ರೀಮತಿ ಪೂರ್ಣಶ್ರೀ ಎಂ ಬಡಿಗೇರ, ಗಜಾನನ ಮೇಹರ್ವಾಡೆ, ಯೋಗೇಶ್ ಗೌಡ, ಎಂ.ವಿ.ರಾಕೇಶ್ ಮತ್ತು ಪ್ರಸಾದ ಬಿ.ಎಂ., ಗಣೇಶ್ ರವರು ಉಪಸ್ಥಿತರಿದ್ದರು.

## ಮೀನುಗಾರಿಕೆ ಇಲಾಖೆ: ಮನೆ ನಿರ್ಮಾಣಕ್ಕೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

**ಬಳ್ಳಾರಿ :** ಮೀನುಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನ ವಸತಿರಹಿತ ಮೀನುಗಾರರಿಗೆ ಸರ್ಕಾರದ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಸಿರುಗುಪ್ಪ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ ಮತ್ತು ಸಂಡೂರು ವಿಧಾನಸಭಾ ಕ್ಷೇತ್ರಕ್ಕೆ 25 ಮನೆಗಳು ಸೇರಿ ಒಟ್ಟು ಜಿಲ್ಲೆಗೆ 125 ಮನೆಗಳನ್ನು ಹಂಚಿಕೆ ಮಾಡಲಾಗಿದೆ.

ಅರ್ಜಿಗಳನ್ನು ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ (ಬಳ್ಳಾರಿ, ಸಿರುಗುಪ್ಪ, ಕಂಪ್ಲಿ ವಿಧಾನಸಭಾ ಕ್ಷೇತ್ರ) ಮತ್ತು ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಲ್ಲಿ ಪಡೆದುಕೊಳ್ಳಬಹುದು.

ಭರ್ತಿ ಮಾಡಿ ಅರ್ಜಿಗಳಲ್ಲಿ ಇದೇ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ ಎಂದು ಮೀನುಗಾರಿಕೆ ಉಪ ನಿರ್ದೇಶಕ ಶಿವಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎ–ಖಾತೆ/ಬಿ–ಖಾತೆ :

# 3 ತಿಂಗಳ ಕಾಲಾವಧಿ ವಿಸ್ತರಣೆ–ಸಚಿವ ರಹೀಮ್ ಖಾನ್

**ತುಮಕೂರು :** ನಗರ ಪ್ರದೇಶ ವ್ಯಾಪ್ತಿಯಲ್ಲಿ ಮನೆ, ನಿವೇಶನಗಳಿಗೆ ಎ–ಖಾತೆ ಮತ್ತು ಬಿ–ಖಾತೆ ಮಾಡಿಕೊಡುವ ಅವಧಿಯನ್ನು ಮತ್ತೆ 3 ತಿಂಗಳ ಕಾಲ ವಿಸ್ತರಣೆ ಮಾಡಲಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಮ್ ಖಾನ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಪುರಸಭೆ ಹಾಗೂ ಪಟ್ಟಣ ಪಂಚಾಯಿತ್ತಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಡವರ ಮನೆ, ನಿವೇಶನಗಳಿಗೆ ದಾಖಲಾತಿ ಮಾಡಿಕೊಡುವ ಸಲುವಾಗಿ ಬಿ ಖಾತೆಯನ್ನು ಜಾರಿಗೆ ತರಲಾಗಿದ್ದು, ಈಗಾಗಲೇ 3 ತಿಂಗಳ ಅವಧಿ ಮುಕ್ತಾಯಗೊಂಡಿದೆ. ರಾಜ್ಯದಲ್ಲಿ ಶೇ.50ರಷ್ಟು ಮಾತ್ರ ಬಿ ಖಾತೆಗಳಾಗಿರುವ ಹಿನ್ನೆಲೆಯಲ್ಲಿ ಉಳಿದವರಿಗೂ ಅನುಕೂಲ ಕಲ್ಪಿಸುವ ಸಲುವಾಗಿ ಬಿ ಖಾತೆ ಮಾಡಿಕೊಡುವ ಅವಧಿಯನ್ನು ಮತ್ತೆ 3 ತಿಂಗಳ ಕಾಲ ರಾಜ್ಯ ಸರ್ಕಾರ ವಿಸ್ತರಿಸಿದೆ ಎಂದರು.

ಕಳೆದ 30–40 ವರ್ಷಗಳಿಂದ ಯಾವುದೇ ದಾಖಲಾತಿಗಳಿಲ್ಲದೆ ಸಮಸ್ಯೆ ಎದುರಿಸುತ್ತಿದ್ದ ಬಡ ಜನರಿಗೆ ಅನುಕೂಲ ಕಲ್ಪಿಸಬೇಕೆಂಬ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಒತ್ತಾಸೆ ಮೇರೆಗೆ ಸಚಿವ ಸಂಪುಟ ಹಾಗೂ ವಿಧಾನಸಭೆಯಲ್ಲಿ ಈ ಸಂಬಂಧ ಮಸೂದೆ ಮಂಡಿಸಿ ಬಿ ಖಾತೆಯನ್ನು ಜಾರಿಗೊಳಿಸಲಾಗಿದೆ



ಎಂದು ಅವರು ತಿಳಿಸಿದರು.

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 10,000 ಎ ಖಾತೆ ಮತ್ತು 5800 ಬಿ ಖಾತೆ ಸೇರಿದಂತೆ 15800 ಎ ಮತ್ತು ಬಿ–ಖಾತೆಗಳಿವೆ ಎಂದು ಮಾಹಿತಿ ನೀಡುತ್ತಾ, ಪ್ರಸ್ತುತ 3 ತಿಂಗಳ ಅವಧಿಯಲ್ಲಿ ಶೇ.50ರಷ್ಟು ಮಾತ್ರ ಬಿ ಖಾತೆಯಾಗಿದೆ. ಉಳಿದ ಶೇ.50ರಷ್ಟು ಬಿ ಖಾತೆ ಆಗಬೇಕಾಗಿದೆ. ಹಾಗಾಗಿ ಉಳಿದವರಿಗೂ ಅನುಕೂಲವಾಗಲಿ ಎಂಬ ಉದ್ದೇಶದಿಂದ ಈ ಅವಧಿಯನ್ನು ಮತ್ತೆ ವಿಸ್ತರಣೆ ಮಾಡಲಾಗಿದೆ ಎಂದರು.

ನಗರೋತ್ಥಾನ ಯೋಜನೆಯಡಿ 102 ಕೋಟಿ ರೂ. ಹಣ ಬಿಡುಗಡೆಯಾಗಿದ್ದು, ಈ ಪೈಕಿ 40 ಕೋಟಿ ರೂ. ಮಾತ್ರ ಖರ್ಚಾಗಿದೆ. ಉಳಿದ ಹಣವನ್ನು ಆದಷ್ಟು ಶೀಘ್ರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗಿಸುವಂತೆ ಪಟ್ಟಣ ಪಂಚಾಯತಿ ಹಾಗೂ ಪುರಸಭೆ ಮುಖ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಜಿಲ್ಲೆಯ ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಸಂಬಂಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆಯೂ ಅಧಿಕಾರಿಗಳಿಗೆ ತಾಕೀತು ಮಾಡಲಾಗಿದೆ ಎಂದರು.

ಇಂದಿರಾ ಕ್ಯಾಂಟೀನ್‌ಗಳಲ್ಲಿ ಸ್ವಚ್ಛತೆ ಕಾಪಾಡುವಂತೆಯೂ ಹಾಗೂ ಸಾರ್ವಜನಿಕರಿಗೆ ಶುಚಿ, ರುಚಿಯಾದ ಆಹಾರ ನೀಡುವಂತೆಯೂ ಸೂಚನೆ ನೀಡಲಾಗಿದೆ. ಇಂದಿರಾ ಕ್ಯಾಂಟೀನ್‌ಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಆಗಾಗ್ಗೆ ಭೇಟಿ ನೀಡಿ ಪರಿಶೀಲಿಸುವಂತೆಯೂ ಸೂಚಿಸಿರುವುದಾಗಿ ಅವರು ಹೇಳಿದರು.

ಇಂದಿರಾ ಕ್ಯಾಂಟೀನ್‌ಗಳನ್ನು ಬಡವರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ರಾಜ್ಯ ಸರ್ಕಾರ ಜಾರಿಗೆ ತಂದಿದೆ. ಯಾವುದೇ ಕಾರಣಕ್ಕೂ ಈ ಕ್ಯಾಂಟೀನ್‌ಗಳಲ್ಲಿ ಜನರಿಗೆ ತೊಂದರೆಯಾಗದಂತೆ ತಿಂಡಿ, ಊಟದ ವ್ಯವಸ್ಥೆ ಮಾಡಬೇಕು. ಈ ಬಗ್ಗೆ ಅಧಿಕಾರಿಗಳು ನಿಗಾ ವಹಿಸಬೇಕು ಎಂದರು.

ಇಂದಿರಾ ಕ್ಯಾಂಟೀನ್‌ಗಳಲ್ಲಿ ಸಿಸಿ ಟಿವಿಗಳು ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು. ಒಂದು ವೇಳೆ ಇಂದಿರಾ ಕ್ಯಾಂಟೀನ್ ನಿರ್ವಹಣೆ ಬಗ್ಗೆ ನಿರ್ಲಕ್ಷ್ಯ ತೋರಿದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

# ರೋಟರಿ ಸಾಮಾಜಿಕ ಸೇವೆಯಲ್ಲಿ ಮುಂದು: ಹರೀಶ್



**ಹಾಸನ:** ರೋಟರಿ ಸಂಸ್ಥೆಯಂತಹ ಸಾಮಾಜಿಕ ಸೇವಾ ಸಂಸ್ಥೆ ಅಂತಾರಾಷ್ಟ್ರೀಯ ಮಟ್ಟದಲ್ಲೂ ಮತ್ತೊಂದಿಲ್ಲ ಎಂದು ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸಿ.ಕೆ ಹರೀಶ್ ಅಭಿಪ್ರಾಯಪಟ್ಟರು.

ನಗರದ ಕಲಾ ಕಾಲೇಜು ಮೈದಾನದಲ್ಲಿ ರೋಟರಿ ಕ್ಲಬ್ ಆಫ್ ಸೆಂಟ್ರಲ್ ವತಿಯಿಂದ ಆಯೋಜಿಸಲಾಗಿದ್ದ ಸೆಂಟ್ರಲ್ ಪ್ರಿಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೋಟರಿ ಸಂಸ್ಥೆಯು ವಿಶ್ವದಲ್ಲಿ ಪೋಲಿಯೋ ನಿರ್ಮೂಲನೆಯಲ್ಲಿ ಬಹುದೊಡ್ಡ ಪಾತ್ರ ವಹಿಸಿದೆ. ಜೊತೆಗೆ ಆಯಾ ಸಂದರ್ಭಕ್ಕೆ ಎದುರಾಗುವ ವಿಪತ್ತುಗಳ ನಿರ್ವಹಣೆಯಲ್ಲಿ ಸ್ಥಳೀಯ ಸರ್ಕಾರಗಳಿಗೆ ರೋಟರಿ ನೀಡುವ ನೆರವು ಬಹುದೊಡ್ಡ ಮಟ್ಟದಲ್ಲಿದ್ದು, ಇಂತಹ ಸಂಸ್ಥೆಗಳ ಕಾರ್ಯಗಳಲ್ಲಿ ಭಾಗವಹಿಸುವುದೇ ಹೆಮ್ಮೆಯ ಸಂಗತಿ ಎಂದರು.

ಕ್ರೀಡೆಯಿಂದ ಮಾನಸಿಕ ಹಾಗೂ ಶಾರೀರಿಕ ಆರೋಗ್ಯ ಉತ್ತಮವಾಗಿರುತ್ತದೆ. ಬಾಲ್ಯದಿಂದಲೇ ಮಕ್ಕಳಿಗೆ ದೈಹಿಕ ಆರೋಗ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಒಂದಿಲ್ಲೊಂದು ಕ್ರೀಡೆಯಲ್ಲಿ ತೊಡಗಿಸಿ ಅವರನ್ನು ಆರೋಗ್ಯವಂತ ಪ್ರಜೆಗಳನ್ನಾಗಿ ನಿರ್ಮಾಣ ಮಾಡುವ ಪಾತ್ರ ಸಮಾಜದ ಮೇಲಿದೆ ಎಂದು ತಿಳಿಸಿದರು.

ಅಂತಾರಾಷ್ಟ್ರೀಯ ಕ್ರೀಡಾಪಟು ಶಾಂತಕುಮಾರ್ ಮಾತನಾಡಿ, ರೋಟರಿ ಸಂಸ್ಥೆಯು ಸಮಾಜದಲ್ಲಿ ಹತ್ತಾರು ಕಾರ್ಯಗಳನ್ನು ರೂಪಿಸಿ ನೊಂದವರ ಪರ ನಿಲ್ಲುತ್ತಿದೆ.

ರೋಟರಿ ಸಂಸ್ಥೆಯ ಆಯೋಜಿಸುವ ಕಾರ್ಯಕ್ರಮಗಳಿಂದ ಸಮಾಜಕ್ಕೆ ಬಹಳಷ್ಟು ಅನುಕೂಲವಿದ್ದು ಅರ್ಹರು ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕಿದೆ ಎಂದರು.

ಚನ್ನರಾಯಪಟ್ಟಣ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಡೇನಹಳ್ಳಿ ಲೋಕೇಶ್ ಮಾತನಾಡಿ, ಕ್ರೀಡೆಯು ದೈಹಿಕ ಆರೋಗ್ಯ ಕಾಪಾಡುವ ಜೊತೆ ಜೊತೆಗೆ ಸ್ನೇಹ

ಹಾಗೂ ಸೌಹಾರ್ದತೆಯನ್ನು ಬೆಸೆಯುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಇತ್ತೀಚಿನ ದಿನಗಳಲ್ಲಿ ದೇಶದ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡುತ್ತಿದ್ದು, ದೇಶವನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಕ್ರೀಡೆಯಿಂದ ಗುರುತಿಸುವ ಮಟ್ಟಕ್ಕೆ ತಂದು ನಿಲ್ಲಿಸಿರುವುದು ಗೌರವದ ಸಂಗತಿಯಾಗಿದೆ ಎಂದರು.

ಮಾಜಿ ವಲಯ ಪಾಲಕ ರೊ. ಮೋಹನ್ ಮಾತನಾಡಿ, ರೋಟರಿ ಎಂದರೆ ಬರಿ ಸೇವೆಯಲ್ಲ. ರೋಟರಿಯಲ್ಲಿ ಇತರ ಕ್ಲಬ್ಗಳ ಜೊತೆಗೆ ಬಾಂದವ್ಯ ಬೆಸೆಯಲು ಕ್ರೀಡೆ ಸಹಕಾರಿಯಾಗಲಿದೆ. ಕ್ರೀಡಾ ಚಟುವಟಿಕೆಗಳು ಹೆಚ್ಚು ನಡೆದಷ್ಟು ರೋಟರಿಯಲ್ಲಿ ಸಮನ್ವಯ ಹೆಚ್ಚಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರೋಟರಿ ಕ್ಲಬ್ ಆಫ್ ಸೆಂಟ್ರಲ್ನ ಅಧ್ಯಕ್ಷ ನಾಗೇಶ್ ಎಂ.ಡಿ ಮಾತನಾಡಿ, ರೋಟರಿ ಕ್ಲಬ್ ಆಫ್ ಸೆಂಟ್ರಲ್ ನೂತನ ಕ್ಲಬ್ ಆಗಿದ್ದು, ವಿವಿಧ ಯೋಜನೆಗಳನ್ನು ರೂಪಿಸುತ್ತಿದೆ. ಮುಂದಿನ ದಿನಗಳಲ್ಲೂ ಕ್ಲಬ್ಬಿನ ಎಲ್ಲರ ಸಹಕಾರ ಪಡೆದು ಸಮಾಜಕ್ಕೆ ಇನ್ನು ಹೆಚ್ಚಿನ ಸೇವೆ ಮಾಡುವುದಾಗಿ ವಿಶ್ವಾಸ ನುಡಿಗಳನ್ನಾಡಿದರು.

ಮಾಜಿ ಜಿಲ್ಲಾ ಗವರ್ನರ್ ಗಳಾದ ರೊ. ಎಂ.ಕೆ ಗೋವರ್ಧನ್ ಕುಮಾರ್, ರೊ.ಬಿ.ಎನ್ ರಮೇಶ್,ವಲಯ ಪಾಲಕ ರೊ.ಸಂತೋಷ್, ರೊ.ನಿರ್ಮಲ್ ಕುಮಾರ್ ಜೈನ್ ಪಂದ್ಯಾವಳಿಯ ನಡುವೆ ಆಗಮಿಸಿ ಕ್ರೀಡಾಡುಗಳಿಗೆ ಶುಭ ಕೋರಿದರು.

ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ತಂಡಗಳ ಪೈಕಿ ರೋಟರಿ ಕ್ಲಬ್ ಆಫ್ ಮಿಡ್ ಟೌನ್ ತಂಡವು ಪ್ರಥಮ ಬಹುಮಾನ ಪಡೆದರೆ, ರೋಟರಿ ಕ್ಲಬ್ ಆಫ್ ಸೆಂಟ್ರಲ್ ರನ್ನರ್ ಅಪ್ ಪ್ರಶಸ್ತಿ ಪಡೆಯಿತು. ಚನ್ನರಾಯಪಟ್ಟಣ ವಿಷನ್ ರೋಟರಿ ತಂಡವು ಮೂರನೇ ಸ್ಥಾನ ಪಡೆದುಕೊಂಡಿತು.ಪಂದ್ಯಾವಳಿಯಲ್ಲಿ ವಿವಿಧ ಕ್ಲಬ್ ಗಳ ರೋಟರಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಭಾವಹಿಸಿದ್ದರು.

# 50%–50% ಕಾರ್ಯಕ್ರಮದಡಿ 66 ಸಾವಿರ ರೂ. ಬೆಲೆ ಬಾಳುವ ನಾನಾ ಸಾಮಗ್ರಿಗಳನ್ನು ವಿತರಿಸಿದ ಶಾಸಕ ಶ್ರೀನಿವಾಸ ಮಾನೆ




**ಹಾನಗಲ್:** ತಾಲೂಕಿನ ಯಳ್ಳೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಶಾಸಕ ಶ್ರೀನಿವಾಸ ಮಾನೆ 50%–50% ಕಾರ್ಯಕ್ರಮದಡಿ 66 ಸಾವಿರ ರೂ. ಬೆಲೆ ಬಾಳುವ ನಾನಾ ಸಾಮಗ್ರಿಗಳನ್ನು ವಿತರಿಸಿದರು.

ಸ್ಮಾರ್ಟ್ ಟಿವಿ, ಲೈಬ್ರರಿ ಬುಕ್ ಆಲ್ಮೇರಾ, ಲಾಕರ್ ಸ್ಟೀಲ್ ಆಲ್ಮೇರಾ, ಆಫೀಸ್ ಟೇಬಲ್ ಸೇರಿದಂತೆ ಹಲವು ಸಾಮಗ್ರಿಗಳನ್ನು ವಿತರಿಸಿದರು. ಈ ಸಾಮಗ್ರಿಗಳಿಗೆ ತಗುಲಿದ ವೆಚ್ಚದಲ್ಲಿ ಅರ್ಧ ಹಣವನ್ನು ಗ್ರಾಮಸ್ಥರು ಭರಿಸಿದ್ದರೆ ಇನ್ನರ್ಧ ಹಣವನ್ನು ಶಾಸಕ ಮಾನೆ ವೈಯಕ್ತಿಕವಾಗಿ ಭರಿಸಿದ್ದಾರೆ.

ಸರ್ಕಾರಿ ಶಾಲೆಗಳಿಗೆ ಸೌಲಭ್ಯ ಕಲ್ಪಿಸುವುದು ಸರ್ಕಾರದ ಕೆಲಸ ಎನ್ನುವ ಭಾವನೆಯಿಂದ ಹೊರ ಬರಬೇಕಿದೆ. ಸರ್ಕಾರದ ನೆರವು ಪಡೆಯದೇ ತಾಲೂಕಿನಲ್ಲಿ ಕಳೆದ 2 ವರ್ಷಗಳ ಅವಧಿಯಲ್ಲಿ 95 ಶಾಲೆಗಳಿಗೆ 3 ಕೋಟಿ ರೂ. ವೆಚ್ಚದಲ್ಲಿ ಸೌಲಭ್ಯ ಕಲ್ಪಿಸಲಾಗಿದೆ. ಕಲಿತ ಶಾಲೆಗೆ ಸೌಲಭ್ಯ ಕಲ್ಪಿಸಬೇಕಿರುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ತಾಲೂಕಿನಲ್ಲಿ ರೂಪಿಸಲಾಗಿರುವ 50%–50% ಕಾರ್ಯಕ್ರಮಕ್ಕೆ ಅಭೂತಪೂರ್ವ ಬೆಂಬಲ ಸಿಕ್ಕಿದೆ. ಇದರ ಪ್ರೇರಣೆಯಿಂದಲೇ ಶಿಕ್ಷಣ ಇಲಾಖೆ ಹಳೆ ಬೇರು, ಹೊಸ ಚಿಗುರು ಕಾರ್ಯಕ್ರಮ ರೂಪಿಸಿ, ಸಮುದಾಯ, ಹಳೆಯ ವಿದ್ಯಾರ್ಥಿಗಳ ಸಹಭಾಗಿತ್ವ ಪಡೆಯುತ್ತಿದೆ. ತಾಲೂಕಿನಲ್ಲಿ ಸಂಘ, ಸಂಸ್ಥೆಗಳು, ಸಹೃದಯಿ ದಾನಿಗಳ ಮನವೊಲಿಸಿ ಶಾಲೆಗಳಿಗೆ ಸುಸಜ್ಜಿತ ಕಟ್ಟಡ ದೊರಕಿಸಲಾಗುತ್ತಿದೆ. ತಾಲೂಕಿನ 11 ಶಾಲೆಗಳಲ್ಲಿ ಶೀಘ್ರ ರೋಟರಿ ಸಂಸ್ಥೆ ಶೌಚಾಲಯ ನಿರ್ಮಿಸಲಿದೆ ಎಂದು ಶಾಸಕ ಮಾನೆ ಈ ಸಂದರ್ಭದಲ್ಲಿ ತಿಳಿಸಿದರು.

ಎಸ್‌ಡಿಎಂಸಿ ಪದಾಧಿಕಾರಿಗಳು, ಶಿಕ್ಷಕರು, ಗ್ರಾಮಸ್ಥರು, ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಯುವನಿಧಿ: ಮೇ.25ರೊಳಗೆ ಸ್ವಯಂ ದೃಢೀಕರಣ ಮಾಡಿಕೊಳ್ಳಿ: ಅಶೋಕ ಮಂದಾಲಿ

**ಗದಗ:** ಯುವನಿಧಿ ಯೋಜನೆಯಲ್ಲಿ ಈಗಾಗಲೇ ನೋಂದಾಯಿಸಿಕೊಂಡು ಹಣ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ವರ್ಷದಲ್ಲಿ 4 ಬಾರಿ ಸ್ವಯಂ ಘೋಷಣೆಯನ್ನು ನೀಡಬೇಕು. ಪ್ರತಿ ಮೂರು ತಿಂಗಳಿಗೊಮ್ಮೆ ದಿನಾಂಕ 25 ರೊಳಗಾಗಿ ಸ್ವಯಂ ಘೋಷಣೆಯನ್ನು ನೀಡಬೇಕು.

ಮಾರ್ಚ್–2025, ಎಪ್ರೀಲ್–2025, ಮೇ–2025 ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಮೇ–2025ರ ಮಾಹೆಯಲ್ಲಿ ಸ್ವಯಂ ಘೋಷಣೆಯನ್ನು ನೀಡಬೇಕು. ಈ ತ್ರೈಮಾಸಿಕದ ಸ್ವಯಂ ದೃಢೀಕರಣವನ್ನು ಸಲ್ಲಿಸಲು ಮೇ.25 ಕ್ಕೆ ಕೊನೆಗೊಳ್ಳುತ್ತಿದ್ದು, ಯುವನಿಧಿ ಯೋಜನೆಯ ಫಲಾನುಭವಿಗಳು ನಿಗದಿತ ದಿನಾಂಕದೊಳಗೆ ಸೇವಾ ಸಿಂಧು ಪೋರ್ಟಲ್ ಲಾಗಿನ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ ದಾಖಲೆ ಪರಿಶೀಲನೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ 215 ಇಲ್ಲಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08372–220609. ಗೆ ಸಂಪರ್ಕಿಸಲು ಗದಗ ತಾಲ್ಲೂಕಾಮಟ್ಟದ ಪಂಚಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಅವರು ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

# ಸವಿತಾ ಸಮಾಜ ಜಿಲ್ಲಾ ಕಾರ್ಯಾಲಯ ಕೃಷ್ಣಗೌಡ್ರ ಪಾಟೀಲರಿಂದ ಉದ್ಘಾಟನೆ

**ಗದಗ :** ಕರ್ನಾಟಕ ರಾಜ್ಯ ಸವಿತಾ ಸಮಾಜ ಬೆಂಗಳೂರು ಗದಗ ಜಿಲ್ಲಾ ಘಟಕದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಅವರ ನೇತೃತ್ವದಲ್ಲಿ ಮತ್ತು ಅವರ ನಿಯೋಗದ ಫಲವಾಗಿ ಇಗಾಗಲೇ ಸ್ಥಾಪನೆಗೊಂಡಿರೂವ ಗದಗ ಜಿಲ್ಲಾ ಸವಿತಾ ಸಮಾಜದಲ್ಲಿ ಪ್ರಥಮವಾಗಿ ಇತಿಹಾಸ ಸೃಷ್ಟಿಸಿದ ಸವಿತಾ ಸಮಾಜ (ಹಿಂದುಳಿದ ವರ್ಗ) ಪತ್ತಿನ ಸಹಕಾರ ಸಂಘ ನಿ. ಗದಗ ಹಾಗೂ ಗದಗ ಜಿಲ್ಲಾ ಸವಿತಾ ಸಮಾಜದ ನೂತನ ಕಾರ್ಯಾಲಯವು ಗದಗ ವಿವೇಕಾನಂದ ರೋಡ 4ನೇ ಕ್ರಾಸ್ ಮಾಲಿಪಾಟೀಲ ಆಸ್ಪತ್ರೆ ಹತ್ತಿರ ಕಮಿತ್ಕರ ಕಾಂಪ್ಲೇಕ್ಸ್‌ನಲ್ಲಿ ದಿ.22/5/2025 ಗುರುವಾರ ಬೆಳಿಗ್ಗೆ 10:15 ಘಂಟೆಗೆ ಶ್ರೀ ಲಕ್ಷ್ಮಿದೇವಿಗೆ ಮಹಾಪೂಜಾ ಕಾರ್ಯಕ್ರಮ ಮಾಡುವ ಮೂಲಕ ಗದಗ ಜಿಲ್ಲಾ ಯುವ ಕಾಂಗ್ರೇಸ್ ನೂತನ ಅಧ್ಯಕ್ಷರಾದ ಕೃಷ್ಣಗೌಡ್ರ ಪಾಟೀಲರಿಂದ ಉದ್ಘಾಟನೆ ಜರಗುವುದು

ಈ ಒಂದು ಪೂಜಾ ಕಾರ್ಯಕ್ರಮದಲ್ಲಿ ರಾಜಕೀಯ ನಾಯಕರು ವಿವಿಧ ಸಮುದಾಯಗಳ ಮುಖಂಡರು ಗದಗ ಬೆಟಗೇರಿ ಸವಿತಾ ಸಮಾಜದ 5 ದೈವದ



ಹಾಗೂ ಗದಗ ಜಿಲ್ಲೆಗೆ ಸಂಬಂದಿಸಿದ ಎಲ್ಲ ತಾಲ್ಲೂಕ ಸವಿತಾ ಸಮಾಜದ ಅಧ್ಯಕ್ಷರುಗಳು ಪದಾಧಿಕಾರಿಗಳು ಪ್ರಮುಖ ನಾಯಕರುಗಳು ಗುರುಹಿರಿಯರು ಯುವಕರು ಬಂಧು ಬಾಂಧವರು ಬಾಗವಹಿಸುವರು ಎಂದು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಹೇಳಿದ್ದಾರೆ

ಕಾರಣ ಸವಿತಾ ಸಮಾಜದ ಸರ್ವ ಬಂದು ಬಾಂಧವರು ಯುವಕರು ತಾಯಂದಿರು ಹಿತೈಷಿಗಳು ಹಾಗೂ ಸಮಾಜದ ಸರ್ವರೂ ಸವಿತಾ ಸಮಾಜ (ಹಿಂದುಳಿದ ವರ್ಗ) ಪತ್ತಿನ ಸಹಕಾರ ಸಂಘ ಹಾಗೂ ಗದಗ ಜಿಲ್ಲಾ ಸವಿತಾ ಸಮಾಜದ ನೂತನ ಕಾರ್ಯಾಲಯ ಉದ್ಘಾಟನೆ ಕಾರ್ಯಕ್ರಮದಲ್ಲಿ ಬಾಗವಹಿಸಿ ಶುಭಕೊರಬೆಕೇಂದು ಹಿರಿಯರಾದ ಹನಮಂತಪ್ಪ ರಾಂಪೂರ. ಪರಶುರಾಮ ಕೊಟೇಕಲ್ಲ. ರಾಜು ಮಾನೆ. ವಿಕಾಸ ಕ್ಷೀರಸಾಗರ. ಅರೂಣ ರಾಂಪೂರ. ಸುರೇಶ ಬುದೂರ. ಶ್ರೀನಿವಾಸ ಕೊಟೇಕಲ್ಲ. ಹಾಗೂ ಚಾಯಾಚಿತ್ರಗಾರ ವಿನಾಯಕ ರಾಯಚೂರ ಪತ್ರಿಕಾ ಪ್ರಕಟಣೆಯ ಮುಲಕ ವಿನಂತಿಸಿದ್ದಾರೆ

### ರಸ್ತೆ ಸುರಕ್ಷತಾ ಸಭೆಯಲ್ಲಿ ಸಂಸದೆ ಡಾ.ಪ್ರಭಾಮಲ್ಲಿಕಾರ್ಜುನ್ ಹೇಳಿಕೆ

# ಬಾಕಿ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ, ಕಿರಿದಾದ ರಸ್ತೆ ವಿಸ್ತರಿಸಿ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡಿ

**ದಾವಣಗೆರೆ:** ಜಿಲ್ಲೆಯ ವಿವಿದೆಡೆ ಬಾಕಿ ಇರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ, ಹಲವೆಡೆ ಕಿರಿದಾದ ರಸ್ತೆ ಹಾಗೂ ಅಂಡರ್ ಪಾಸ್, ಸೇವಾ ರಸ್ತೆ ಸ್ಥಾಪಿಸಿ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಸಂಸದರಾದ ಡಾ;ಪ್ರಭಾ ಮಲ್ಲಿಕಾರ್ಜುನ್ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಲಾಗಿದ್ದ ರಸ್ತೆ ಸುರಕ್ಷತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಎಸ್.ಎಸ್.ಹೈಟೆಕ್ ಮುಖ್ಯ ಆಸ್ಪತ್ರೆಯ ಮುಖ್ಯ ದ್ವಾರ ರಾಷ್ಟ್ರೀಯ ಹೆದ್ದಾರಿ–48ರ, ಚೈನೇಜ್ ಅಂಡರ್ ಪಾಸ್ ಬಳಿ ಭಾರಿ ವಾಹನ, ನಗರ ಸಾರಿಗೆ, ಲಾರಿ, ಬಸ್ ವಾಹನಗಳು ಸಂಚರಿಸುತ್ತಿವೆ. ಇಲ್ಲಿನ ಕೆಳ ಸೇತುವೆ ತುಂಬಾ ಕಿರಿದಾಗಿದ್ದು, ಸಂಚಾರ ದಟ್ಟಣೆ ಹೆಚ್ಚಾಗಿದೆ. ಈ ಕುರಿತು ಮಾಹಿತಿ ಪಡೆದ ಸಂಸದೆ ಶೀಘ್ರದಲ್ಲಿಯೇ ಇದನ್ನು ಪರಿಶೀಲಿಸಿ ಸಮಗ್ರ ಮಾಹಿತಿ ಒದಗಿಸಬೇಕು ಎಂದು ಹೆದ್ದಾರಿ ಪ್ರಾಧಿಕಾರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಷ್ಟೇ ಅಲ್ಲದೇ ಕೆಲವು ರಾಷ್ಟ್ರೀಯ ಹೆದ್ದಾರಿ ಅಂಡರ್ ಪಾಗಳಲ್ಲಿ ಸೂಕ್ತವಾದ ಬೆಳಕಿನ ವ್ಯವಸ್ಥೆ ಇಲ್ಲಾ. ಸಂಜೆ ಹಾಗೂ ರಾತ್ರಿಯ ಸಮಯದಲ್ಲಿ ಸಾರ್ವಜನಿಕರು, ಮಹಿಳೆಯರು, ವಿದ್ಯಾರ್ಥಿಗಳು ಸಂಚರಿಸುತ್ತಿರುತ್ತಾರೆ. ಅವರುಗಳಿಗೆ ತೊಂದರೆಯಾಗದಂತೆ ಅಗತ್ಯವಿರವ ಕಡೆ ಕ್ಯಾರೇಜ್–ವೇ ಹೆಚ್ಚಿಸುವುದರ ಜೊತೆಗೆ ಬೆಳಕಿನ ವಿದುದೀಪದ ವ್ಯವಸ್ಥೆ ಮಾಡಬೇಕು. ಇದರಿಂದ ಕಳ್ಳತನ, ಅಪಘಾತ ಸೇರಿದಂತೆ ಇನ್ನಿತರೆ ಅಹಿತಕರ



ಘಟನೆಗಳು ಜರುಗುವ ಸಂಭವ ಕಡಿಮೆಯಾಗುತ್ತದೆ ಎಂದ ಅವರು, ಮಳೆಗಾಲ ಆರಂಭವಾಗಿದೆ, ಹಲವೆಡೆ ನೀರು ನಿಲ್ಲುವ ಕುರಿತು ವರದಿ, ಆರೋಪ ಕೇಳಿ ಬರುತ್ತಿವೆ. ಆದ್ದರಿಂದ ಅಂತಹ ಸ್ಥಳಗಳನ್ನು ಗುರುತಿಸಿ ಸರಿಪಡಿಸಬೇಕು ಎಂದರು.

ಹರಿಹರ ತಾಲ್ಲೂಕಿನ ಹರಗನಹಳ್ಳಿ ಹಾಗೂ ಆನಗೋಡು, ಹೆಬ್ಬಾಳು ಬಳಿ ಏಕಾ–ಏಕಿ ತಿರುವು ಪಡೆದುಕೊಳ್ಳುವ ವಾಹನಗಳಿಗೆ ಡಾಬಾ ಹೋಟೆಲ್, ಪೆಟ್ರೋಲ್ ಬಂಕ್, ಇನ್ನಿತರೆ ಅಂಗಡಿ ಮುಂಗಟ್ಟುಗಳು ಅವೈಜ್ಞಾನಿಕ ಮತ್ತು ಅನಧಿಕೃತವಾಗಿ ನಿರ್ಮಿಸಿರುವುದರಿಂದ ಅಪಘಾತ ಹೆಚ್ಚಾಗುತ್ತಿವೆ. ಅಲ್ಲಿನ ಅನಧಿಕೃತ, ಮತ್ತು ನಿಯಮಬಾಹಿರವಾಗಿ ಇರುವವರ ಮೇಲೆ ಸೂಕ್ತ ಕ್ರಮಕೈಗೊಳ್ಳುವಂತೆ ಸೂಚನೆ ನೀಡಿದರು.

ಟೋಗಳಲ್ಲಿ ಎಪಿಆರ್ ನಂಬರ್ ಪ್ಲೇಟ್ ನೊಂದಣಿ ಮಾಡಿಕೊಳ್ಳುವ ಉತ್ತಮ ಗುಣಮಟ್ಟದ ಸಿಸಿಟಿವಿ ಮತ್ತು ಬೆಳಕಿನ ವಿದ್ಯುದೀಪಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ನಿರ್ದೇಶಿಸಿದರು.

ಇದಕ್ಕೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಸಕರಾತ್ಮಕವಾಗಿ ಸ್ಪಂದಿಸಿ ಸೂಕ್ತ ಕ್ರಮಕೈಗೊಳ್ಳಲಾಗುವುದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾ ವ್ಯಾಪ್ತಿಯಲ್ಲಿ ಪ್ರತಿ 70 ಕಿ.ಮೀ ವ್ಯಾಪ್ತಿಗೆ 2 ಅಂಬುಲೆನ್ಸ್ ವ್ಯವಸ್ಥೆ ಕಲ್ಪಿಸಬೇಕು. ಯಾವುದೇ ರೀತಿಯ ಅಪಘಾತಗಳು ಸಂಭವಿಸಿದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕೂಡಲೇ ಸ್ಪಂದಿಸಬೇಕು. ಪ್ರಾಧಿಕಾರದ ಸಹಾಯವಾಣಿ ಸಂಖ್ಯೆ 1033 ಸಂಖ್ಯೆ ಸರಿಯಾದ ರೀತಿಯಲ್ಲಿ ಬಳಕೆಯಾಗುತ್ತಿಲ್ಲ. ಆದ್ದರಿಂದ ಸಹಾಯವಾಣಿ ಸಂಖ್ಯೆಯನ್ನು ಸ್ಥಳೀಯ ಭಾಷೆಯಲ್ಲಿ ಸಂವಹನ ನಡೆಸಲು ಸಹಾಯವಾಗುವಂತೆ ಕ್ರಮವಹಿಸಬೇಕು. ಕೆಲವು ಸಂದರ್ಭಗಳಲ್ಲಿ ಒಬ್ಬ ವ್ಯಕ್ತಿ ಇದ್ದಾಗ ಅಪಘಾತಗಳು ಸಂಭವಿಸಿದಲ್ಲಿ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ತುರ್ತು ಗಮನಹರಿಸಿ ಸರಿಯಾದ ಸಂದರ್ಭದಲ್ಲಿ ಅಂಬುಲೆನ್ಸ್, ರಕ್ಷಣೆ ಮಾಡುವ ಮೂಲಕ ಸ್ಪಂದಿಸಲು ತಿಳಿಸಿದರು.

ಅದೇ ರೀತಿ ಜಿಲ್ಲೆಯಲ್ಲಿ ಹಾದು ಹೋಗಿರುವ ಕುಂದವಾಡ ರಸ್ತೆಯಲ್ಲಿ ಸೇವಾ ರಸ್ತೆ ನಿರ್ಮಿಸಿಲ್ಲ. ಸೂಕ್ತ ಚರಂಡಿ ವ್ಯವಸ್ತೆ ಕಲ್ಪಿಸದ ಕಾರಣ ಮಳೆ ನೀರು ಸಂಪೂರ್ಣ ಮನೆಗಳಿಗೆ ನುಗ್ಗಿ ಅವಾಂತರ ಸೃಷ್ಟಿಯಾಗಿದೆ. ಇಂತಹ ಅವೈಜ್ಞಾನಿಕವಾದ ಕಾಮಗಾರಿ ನಿರ್ಮಿಸಿರುವುದಕ್ಕೆ ಅಸಮಧಾನ ವ್ಯಕ್ತಪಡಿಸಿದರು. ರಸ್ತೆಯ ಇಕ್ಕೆಲಗಳಲ್ಲಿ ಗಿಡಗಂಟಿಗಳು ಬೆಳೆದು ನಿಂತಿದ್ದು, ಸಾರ್ವಜನಿಕರಿಗೆ, ಸವಾರರಿಗೆ ತೊಡಕುಂಟಾಗಿರುವ ಕುರಿತು ದೂರುಗಳು ಕೇಳಿ ಬರುತ್ತಿವೆ. ಆದ್ದರಿಂದ ತ್ವರಿತವಾಗಿ ತೆರವು ಮಾಡಿಸಿಸುವ ಮೂಲಕ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ಅನುಕೂಲ ಮಾಡಿಕೊಡಲು ತಿಳಿಸಿದರು.

ಹೂವಿನ ಗೂಡಂಗಡಿಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಸೂಚನೆ: ನಗರದ ಪಿ.ಬಿ ರಸ್ತೆಯ ದೇವರಾಜ ಅರಸು ವೃತ್ತದ ಬಳಿ ಇರುವ ಬಿಎಸ್ಎನ್ಎಲ್ ಕಚೇರಿಯ ಮುಂಭಾಗ ಸುಮಾರು 15–15 ಹೂವಿನ ಗೂಡಂಗಿಡಿಗಳಿದ್ದು, ಅವರುಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ವಾಹನ ಸಂಚಾರಕ್ಕೆ ಅಡ್ಡಿಪಡಿಸದಂತೆ ತಾತ್ಕಾಲಿಕವಾಗಿ ಸೂಕ್ತ ಕ್ರಮವಹಿಸಬೇಕು. ತದನಂತರದ ದಿನಗಳಲ್ಲಿ ಒಂದೆಡೆ ಶಾಶ್ವತ ಸ್ಥಳ ಗುರುತಿಸಿ ಸ್ಥಳಾಂತರಿಸುವ ಕಾರ್ಯ ಮಾಡಬೇಕು ಎಂದು ಪಾಲಿಕೆ ಅಧಿಕಾರಿಗಳಿಗೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ ತಿಳಿಸಿದರು.

ಆಟೋರಿಕ್ಷಾಗಳಿಗೆ ಮೀಟರ್ ಮತ್ತು ಡಿಸ್ಪ್ಲೇ ಬೋರ್ಡ್ ಕಡ್ಡಾಯ: ನಗರದಲ್ಲಿನ ಆಟೋ ಚಾಲಕರಿಗೆ ಮೀಟರ್ ಮತ್ತು ಡಿಸ್ಪ್ಲೇ ಬೋರ್ಡ್ ಕಡ್ಡಾಯವಾಗಿ ಅಳವಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಆಟೋ ಚಾಲಕ ಸಂಘದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇಲ್ಲಿಯವರೆಗೂ ನಗರದಲ್ಲಿ 525 ಆಟೋರಿಕ್ಷಾಗಳನ್ನು ಜಪ್ತಿ ಮಾಡಿಕೊಳ್ಳಲಾಗಿದೆ. ಇನ್ನೂ ಮುಂದೆಯೂ ಮಾಡಲಾಗುವುದು ಆದ್ದರಿಂದ ಮೊದಲು ಮೀಟರ್ ಮತ್ತು ಡಿಸ್ಪ್ಲೇ ಬೋರ್ಡ್ ಅಳವಡಿಕೊಂಡಲ್ಲಿ ತಮ್ಮ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲಾಗುವುದು ಎಂದರು.

ಈ ವೇಳೆ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ನರೇಂದ್ರಬಾಬು, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವಿಜಯ್ ಕುಮಾರ್ ಎಂ ಸಂತೋಷ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ್, ವಿಭಾಗೀಯ ನಿಯಂತ್ರಣಾಧಿಕಾರಿ ಫಕ್ರುದ್ದೀನ್, ಡಿಹೆಚ್ಒ ಡಾ.ಷಣ್ಮುಖಪ್ಪ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ರೈತ ಸಂಪರ್ಕ ಕೇಂದ್ರಗಳಲ್ಲಿ 852.6 ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು

# ಕೃಷಿ ಪರಿಕರ ಮಾರಾಟದಲ್ಲಿ ನಿಯಮ ಉಲ್ಲಂಘಿಸಿದರೆ ಕ್ರಮ: ಹೆಚ್.ಎಲ್.ಸುಜಾತ

**ಚಿಕ್ಕಮಗಳೂರು:** ರೈತ ಸಂಪರ್ಕ ಕೇಂದ್ರಗಳಲ್ಲಿ 852.6 ಕ್ವಿಂಟಾಲ್ ಬಿತ್ತನೆ ಬೀಜಗಳನ್ನು ದಾಸ್ತಾನಿರಿಸಿ ರೈತರಿಗೆ ವಿತರಿಸುವ ಕಾರ್ಯ ಪ್ರಗತಿಯಲ್ಲಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ಹೆಚ್. ಎಲ್.ಸುಜಾತ ತಿಳಿಸಿದ್ದಾರೆ.

ಈ ಸಂಬಂಧ ಪ್ರಕಟಣೆಯನ್ನು ಬಿಡುಗಡೆ ಮಾಡಿರುವ ಅವರು, ಈಗಾಗಲೇ ಪೂರ್ವ ಮುಂಗಾರು ಬೆಳೆಗಳಾದ ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ ಬೆಳೆಗಳು ಸೇರಿದಂತೆ ರೈತರಿಗೆ ಬಿತ್ತನೆಗೆ ಬೇಕಾಗುವ ಬಿತ್ತನೆ ಬೀಜವನ್ನು ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನಿಡಲಾಗಿದ್ದು, ರೈತರಿಗೆ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಏಪ್ರಿಲ್ ಹಾಗೂ ಮೇ ತಿಂಗಳ ರಸಗೊಬ್ಬರ ಬೇಡಿಕೆಯು 37,237 ಮೆಟ್ರಿಕ್ ಟನ್ ಆಗಿದ್ದು, ಜಿಲ್ಲೆಯಲ್ಲಿ ಈಗಾಗಲೇ 41,151 ಮೆಟ್ರಿಕ್ ಟನ್‌ನಷ್ಟು ದಾಸ್ತಾನು ಇದೆ. ರೈತರಿಗೆ ಉತ್ತಮ ಗುಣಮಟ್ಟದ ಕೃಷಿ ಪರಿಕರಗಳನ್ನು ಒದಗಿಸುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಹಲವಾರು ಕ್ರಮಗಳನ್ನು ವಹಿಸಲಾಗಿರುತ್ತದೆ. ದರಪಟ್ಟಿ–ದಾಸ್ತಾನು ಫಲಕ ಅಳವಡಿಸಿ:

ಜಿಲ್ಲೆಯ ರಸಗೊಬ್ಬರ ಮಾರಾಟಗಾರರು ರಸಗೊಬ್ಬರಗಳನ್ನು ಚೀಲದ ಮೇಲೆ ಮುದ್ರಿತವಾದ ಗರಿಷ್ಠ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡಬಾರದು. ಕಾನೂನು ಕ್ರಮದ ಎಚ್ಚರಿಕೆ:

2024–25ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ವಿವಿಧ ಕೃಷಿ ಪರಿಕರಗಳನ್ನು (ಒಟ್ಟು 11.77 ಲಕ್ಷ ಮೌಲ್ಯದ)

ಕಾನೂನು ಬಾಹಿರವಾಗಿ ಮಾರಾಟ ಮಾಡುತ್ತಿದ್ದ ಮಾರಾಟಗಾರರಿಂದ ಇಲಾಖೆಯಿಂದ ಸ್ವಾಧೀನಪಡಿಸಿಕೊಳ್ಳಲಾಗಿದೆ. ಪ್ರಸಕ್ತ ಸಾಲಿನಲ್ಲಿ 7.31 ಲಕ್ಷ ಮೌಲ್ಯದ ರಸಗೊಬ್ಬರಗಳನ್ನು ವಶಪಡಿಸಿಕೊಳ್ಳಲಾಗಿದೆ. ಅದೇ ರೀತಿ ಪ್ರಸಕ್ತ ಸಾಲಿನಲ್ಲಿ ಕೃಷಿ ಪರಿಕರ ಮಾರಾಟಗಾರರು ಕೃಷಿ ಪರಿಕರಗಳಿಗೆ ಸಂಬಂಧಿಸಿದ ನಿಯಮಗಳನ್ನು ಮೀರಿ ಮಾರಾಟ ಮಾಡುವುದು ಕಂಡು ಬಂದಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಅವರು ಮುನ್ನೆಚ್ಚರಿಕೆ ನೀಡಿದ್ದಾರೆ.

ಪ್ರಸ್ತುತ ಜಿಲ್ಲೆಯಲ್ಲಿ ಉತ್ತಮ ಮಳೆ ಆಗುತ್ತಿದ್ದು ಮೇ 20ರವರೆಗೆ ಜಿಲ್ಲೆಯಲ್ಲಿ ಒಟ್ಟು 184 ಮಿ.ಮಿ ಮಳೆಯಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ಶಸ್ತ್ರ, ಆಯುಧಗಳ ಠೇವಣಿ

**ಚಿಕ್ಕಮಗಳೂರು:** ವಿವಿಧ ಕಾರಣಗಳಿಂದ ಖಾಲಿ ಇರುವ/ ತೆರವಾಗಿರುವ ಗ್ರಾಮ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಚುನಾವಣೆ ನಡೆಯುವ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿಮತದಾನವನ್ನು ಮುಕ್ತ ಹಾಗೂ ನಿ?ಕ್ಷಪಾತವಾಗಿ ಮತ್ತು ಸುವ್ಯವಸ್ಥಿತವಾಗಿ ನಡೆಸುವ ಹಿತದೃಷ್ಟಿಯಿಂದ ಅಜ್ಜಂಪುರ ತಾಲ್ಲೂಕು ಸೊಕ್ಕೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಶಾಂತಿ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವುದು ಅತ್ಯಾವಶ್ಯಕವಾಗಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಮೇ 23 ರಂದು ಸಂಜೆ 5:00 ಗಂಟೆಯಿಂದ ಮೇ 25 ರಂದು ಸಂಜೆ ಚುನಾವಣಾ ಪ್ರಕ್ರಿಯೆ ಮುಗಿಯುವರೆಗೂ ಆ ವ್ಯಾಪ್ತಿಯ ಪೊಲೀಸ್ ಠಾಣೆಯಲ್ಲಿ ಪರವಾನಗಿ ಆಧಾರಿತ ಎಲ್ಲಾ ಶಸ್ತ್ರ, ಆಯುಧಗಳ ಠೇವಣಿ ಇರಿಸುವಂತೆ ಹಾಗೂ ಚುನಾವಣೆ ಘೋಷಿತ ಪ್ರದೇಶದಲ್ಲಿ ಯಾವುದೇ ವ್ಯಕ್ತಿಗಳು ಶಸ್ತ್ರ, ಆಯುಧಗಳನ್ನು ಹೊಂದಿ ತಿರುಗಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳೂ ಆಗಿರುವ ಜಿಲ್ಲಾ ದಂಡಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಆದೇಶ ಹೊರಡಿಸಿದ್ದಾರೆ.

## ರಸಗೊಬ್ಬರ ವಿತರಣೆಗೆ ಸಹಾಯವಾಣಿ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ರಸಗೊಬ್ಬರಗಳ ಸಮರ್ಪಕ ಸರಬರಾಜು, ದಾಸ್ತಾನು ಮತ್ತು ವಿತರಣೆಗೆ ಸಹಾಯವಾಣಿಗಳನ್ನು ಆರಂಭಿಸಲಾಗಿದೆ. ರೈತರು ರಸಗೊಬ್ಬರಗಳನ್ನು ಖರೀದಿಸುವ ಸಂದರ್ಭದಲ್ಲಿ ಮಾರಾಟಗಾರರು ಅಧಿಕೃತ ರಶೀದಿಗಳನ್ನು ನೀಡದಿದ್ದರೆ ಅಥವಾ ಎಂ.ಆರ್.ಪಿ. ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿದ್ದರೆ ಇಲ್ಲವೇ ಬೇರೆ ಯಾವುದೇ ರೀತಿಯ ಕಾನೂನು ಉಲ್ಲಂಘನೆ ಮಾಡುತ್ತಿದ್ದರೆ, ಸಹಾಯವಾಣಿ ಮೊಬೈಲ್ ಸಂಖ್ಯೆಗಳಿಗೆ ದೂರು ನೀಡುವಂತೆ ಜಂಟಿ ಕೃಷಿ ನಿರ್ದೇಶಕಿ ಎಚ್.ಎಲ್.ಸುಜಾತ ಕೋರಿದ್ದಾರೆ.ಎಲ್ಲ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯ ಸಹಾಯವಾಣಿ ಮೊಬೈಲ್ ಸಂಖ್ಯೆಗಳು ಲಭ್ಯವಿದ್ದು, ಚಿಕ್ಕಮಗಳೂರು–8277930894, ಮೂಡಿಗೆರೆ–8277930914, ಕೊಪ್ಪ–8277930913, ಶೃಂಗೇರಿ–8277928494, ನರಸಿಂಹರಾಜಪುರ–8277930921, ತರೀಕೆರೆ–8277930923, ಕಡೂರು–8277930937, ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಹಾಯಕ ಕೃಷಿ ನಿರ್ದೇಶಕರು (ಉ ಮತ್ತು ಮೌ)–8277930896 ಹಾಗೂ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ)–8277930893 ಇವರನ್ನು ದೂರುಗಳಿದ್ದಾಗ ಸಂಪರ್ಕಿಸಬಹುದು ಎಂದು ಮಾಹಿತಿ ನೀಡಲಾಗಿದೆ.

## ಅರ್ಜಿಆಹ್ವಾನ

**ಹಾಸನ :** ಸರ್ಕಾರಿಕೈಗಾರಿಕಾತರಬೇತಿ ಸಂಸ್ಥೆ, ಮೊಸಳೆಹೊಸಹಳ್ಳಿಯಲ್ಲಿ 2025–2026ನೇ ಸಾಲಿಗೆ ಆನ್‌ಲೈನ್ ಮೂಲಕ ಪ್ರವೇಶ ಪಡೆಯಲಿಚ್ಚಿಸುವ ಎಸ್.ಎಸ್.ಎಲ್.ಸಿ. ಉತ್ತೀರ್ಣ/ಪಿ.ಯು.ಸಿ ಅನುತ್ತೀರ್ಣಅಭ್ಯರ್ಥಿಗಳು www. cite.karnataka.gov.in. ವೆಬ್‌ಸೈಟ್ ಮೂಲಕ ಮೇ.28 ರವರೆಗೆಅರ್ಜಿ ಸಲ್ಲಿಸಬಹುದಾಗಿದ್ದು, ಲಭ್ಯವಿರುವ ವೃತ್ತಿಗಳು (1) ಎಲೆಕ್ಟ್ರೀಷಿಯನ್, (2)ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್, (3)ಫಿಟ್ಟರ್, (4) ಎಂ.ಆರ್.ಎ.ಸಿ ಮತ್ತು (5)ಮೆಕ್ಯಾನಿಕ್ ಮೋಟಾರ್ ವೆಹಿಕಲ್(ಎಂ. ಎಂ.ವಿ). ಹೆಚ್ಚಿನ ವಿವರಗಳಿಗೆ ದೂರವಾಣಿಸಂಖ್ಯೆಗಳು 9980804191 , 9845503627ಸಂಪರ್ಕಿಸಬಹುದುಎಂದುಮೊಸಳೆಹೊಸಹಳ್ಳಿಯ ಸರ್ಕಾರಿಕೈಗಾರಿಕಾತರಬೇತಿ ಸಂಸ್ಥೆಯಪ್ರಾಚಾರ್ಯರು ತಿಳಿಸಿದ್ದಾರೆ.

## ಬೇಕರಿ ಉತ್ಪನ್ನಗಳ ಕುರಿತು ಕೌಶಲ್ಯಾಭಿವೃದ್ಧಿ ತರಬೇತಿ

**ಶಿವಮೊಗ್ಗ :** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ಮೇ 29 ರಿಂದ ಜೂನ್ 27 ರವರೆಗೆ 1 ತಿಂಗಳು ಶಿವಮೊಗ್ಗ ಕೃಷಿ ಮಹಾವಿದ್ಯಾಲಯ ಆವರಣದ ಬೇಕರಿ ಘಟಕದಲ್ಲಿ ವಿವಿಧ ಬೇಕರಿ ಉತ್ಪನ್ನಗಳಾದ ಬೆಣ್ಣೆ ಬಿಸ್ಕತ್ತು, ಕೋಕೋನಟ್ ಕುಕಿಸ್, ಕೋಕೊನಟ್ ಬಿಸ್ಕತ್ತು, ಮಸಾಲ ಬಿಸ್ಕತ್ತು, ಕೋಕೊನಟ್ ಕ್ಯಾಸಲ್ಸ್, ಫ್ರುಟ್ ಕೇಕ್, ಸ್ಪಾಂಜ್‌ಕೇಕ್, ಜೆಲ್‌ಕೇಕ್, ಬಟರ್ ಐಸಿಂಗ್, ಮಿಲ್ಕ ಬ್ರೆಡ್, ಪಪ್‌ಪೇಸ್ಟ್ರೀ, ದಿಲ್ ಪಸಂದ್, ಬಾಂಬೆ ಕಾರ ಹಾಗೂ ಇತರೆ ಬೇಕರಿ ಉತ್ಪನ್ನಗಳ ತಯಾರಿಕೆಯ ಬಗ್ಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಆಯೋಜಿಸಿದೆ.ಆಕಸ್ತರು ತರಬೇತಿ ಶುಲ್ಕ ರೂ. 4500/–ಗಳನ್ನು ಪಾವತಿಸಿ, ಮೇ 28 ರೊಳಗಾಗಿ ದೂರವಾಣಿ ಮೂಲಕ ಅಥವಾ ಖುದ್ದಾಗಿ ಕೃಷಿ ಮಹಾವಿದ್ಯಾಲಯವನ್ನು ಸಂಪರ್ಕಿಸಿ ಹೆಸರನ್ನು ನೋಂದಾಯಿಸಿಕೊಳ್ಳುವಂತೆ ಕೃಷಿ ಮತ್ತು ತೋಟಗಾರಿಕೆ ಮಹಾವಿದ್ಯಾಲಯದ ಪ್ರೊಫೆಸರ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ನೋಂದಾವಣೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಡಾ. ಜಯಶ್ರೀ ಎಸ್. –9449187763 ಮತ್ತು ಜಯಶಂಕರ–9686555897 ಇವರುಗಳನ್ನು ಸಂಪರ್ಕಿಸುವುದು.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಡಿ.ಎ.ಸಿ.ಜಿ. ಪಾಲಿಟೆಕ್ನಿಕ್‌ನ ಸೆಮಿಸ್ಟರ್ ಡಿಪ್ಲೊಮಾಗೆ 2025–26ನೇ ಸಾಲಿನಲ್ಲಿ ಪ್ರವೇಶ ಬಯಸಿ ಆನ್‌ಲೈನ್‌ನಲ್ಲಿ ಭರ್ತಿಯಾಗದೆ ಉಳಿದ ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿ ಆಫ್‌ಲೈನ್ ಮೂಲಕ ಮೆರಿಟ್ ಮತ್ತು ರೋಸ್ಟರ್‌ಗನುಗುಣವಾಗಿ ಭರ್ತಿ ಮಾಡಲಾಗುವುದು. ಎಸ್.ಎಸ್. ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ನಿಗದಿತ ದಾಖಲಾತಿಗಳೊಂದಿಗೆ ಸಲ್ಲಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

## ಮೇ.26 ರಿಂದ ಎಸ್.ಎಸ್.ಎಲ್.ಸಿ ಪರೀಕ್ಷೆ-2। ಜಿಲ್ಲೆಯಲ್ಲಿ 28 ಪರೀಕ್ಷಾ ಕೇಂದ್ರ: 7902 ವಿದ್ಯಾರ್ಥಿಗಳು

# ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಿ -ಜಿಲ್ಲಾಧಿಕಾರಿ ಟಿ.ವೆಂಕಟೇಶ್

**ಚಿತ್ರದುರ್ಗ:** ಎಸ್.ಎಸ್.ಎಲ್.ಸಿ ಪರೀಕ್ಷೆ-2 ನಿಯೋಜಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಮನ್ವಯದಿಂದ ಕಾರ್ಯ ನಿರ್ವಹಿಸುವ ಮೂಲಕ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದೇ ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಎಸ್.ಎಸ್.ಎಲ್.ಸಿ ಪರೀಕ್ಷೆ-2 ಸಂಬಂಧ ಜರುಗಿದ ಪೂರ್ವ ಸಿದ್ಧತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಮಾರ್ಗದರ್ಶಿ ನಿಯಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಮಂಡಳಿಯಿಂದ ಸರಬರಾಜು ಆಗುವ ಪ್ರಶ್ನೆ ಪತ್ರಿಕೆಗಳನ್ನು ಸಂಗ್ರಹಿಸಿಡುವ ತಾಲೂಕು ಖಜಾನೆಗಳಲ್ಲಿ ಹೆಚ್ಚಿನ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಬೇಕು. ಪರೀಕ್ಷೆಯ ಪಾವಿತ್ರತೆ ಕಾಪಾಡಲು ವೆಬ್ ಕಾಸ್ಟಿಂಗ್ ಘಟಕ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಲು ಅಗತ್ಯಕ್ರಮವಹಿಸಬೇಕು ಎಂದು ಹೇಳಿದರು.

**28 ಪರೀಕ್ಷಾ ಕೇಂದ್ರ 7902 ವಿದ್ಯಾರ್ಥಿಗಳು:** ಇದೇ ಮೇ.26ರಿಂದ ಜೂನ್ 02 ರವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆ-2 ನಡೆಯಲಿದೆ. ಮೇ.26ರಂದು ಪ್ರಥಮ ಭಾಷೆ, ಮೇ.27ರಂದು ಗಣಿತ, ಮೇ.28ರಂದು ಇಂಗ್ಲೀಷ್, ಮೇ.29ರಂದು



ಸಮಾಜ ವಿಜ್ಞಾನ, ಮೇ.30ರಂದು ಹಿಂದಿ, ಮೇ.31ರಂದು ವಿಜ್ಞಾನ ವಿಷಯದ ಪರೀಕ್ಷೆ ನಡೆಯಲಿದೆ. ಎಸ್ಎಸ್ಎಲ್ಸಿ ಪರೀಕ್ಷೆ-2ಗೆ 7902 ವಿದ್ಯಾರ್ಥಿಗಳು ನೊಂದಣಿಯಾಗಿದ್ದು, 28 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಎಲ್ಲ ಪರೀಕ್ಷಾ ಕೇಂದ್ರಗಳಿಗೆ ಈಗಾಗಲೇ ಮುಖ್ಯ ಅಧೀಕ್ಷಕರು ಮತ್ತು ಕಸ್ಟೋಡಿಯನ್ನರವನ್ನು ನೇಮಕ ಮಾಡಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್. ಮಂಜುನಾಥ್ ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯ 28 ಪರೀಕ್ಷಾ ಕೇಂದ್ರಗಳಲ್ಲಿ 4 ರಿಂದ 5 ಪರೀಕ್ಷಾ ಕೇಂದ್ರಗಳಿಗೆ ಒಬ್ಬರಂತೆ ಜಿಲ್ಲಾ ಹಂತ, ತಾಲ್ಲೂಕು ಹಂತದ ಅಧಿಕಾರಿಗಳನ್ನು ವೀಕ್ಷಕರನ್ನಾಗಿ ನೇಮಕ ಮಾಡಬೇಕು. ಪರೀಕ್ಷೆ ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಪ್ರದೇಶವನ್ನು 144 ಸೆಕ್ಷನ್ ಪ್ರಕಾರ ನಿಷೇಧಿತ ಪ್ರದೇಶ ಎಂದು ಘೋಷಣೆ ಮಾಡಬೇಕು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಶಿಕ್ಷಣಾಧಿಕಾರಿ ಸಿದ್ದಪ್ಪ, ಡಿವೈಎಸ್ಪಿ ದಿನಕರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಎಲ್ಲಾ ತಾಲ್ಲೂಕುಗಳ ಬಿ.ಇ.ಓ, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಇದ್ದರು.

# ಕಾಂಗ್ರೆಸ್ ಸರ್ಕಾರದ ವೈಫಲ್ಯಗಳ ಪಟ್ಟಿ ಬಿಡುಗಡೆ

**ಬೆಂಗಳೂರು :** ರಾಜ್ಯದ ಕಾಂಗ್ರೆಸ್ ಸರ್ಕಾರದ 2 ವರ್ಷದ ಸಾಧನೆಯ ವಿರುದ್ಧ ರಾಜ್ಯ ಬಿಜೆಪಿ ಆರೋಪ ಪಟ್ಟಿಯನ್ನು ಬಿಡುಗಡೆ ಮಾಡಿದೆ.

ಬೆಂಗಳೂರು ನಗರ ಬಿಜೆಪಿ ಕಚೇರಿಯಲ್ಲಿಂದು ಪ್ರತಿಪಕ್ಷ ನಾಯಕ ಆರ್. ಅಶೋಕ್, ಮಾಜಿ ಸಚಿವರು, ಶಾಸಕರುಗಳಾದ ಡಾ. ಸಿ.ಎನ್. ಅಶ್ವತ್ಥನಾರಾಯಣ, ಗೋಪಾಲಯ್ಯ, ರಘು ಇವರುಗಳು ಜಂಟಿ ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳ ಆರೋಪ ಪಟ್ಟಿಯನ್ನು ಬಿಡುಗಡೆ ಮಾಡಿದರು.

ಕರ್ನಾಟಕದ ಜನರ ಬದುಕಿಗೆ ಶಾಪವಾದ ವಸೂಲಿ ಸರ್ಕಾರ ಎಂಬ ಶೀರ್ಷಿಕೆಯೊಂದಿಗೆ ಬಿಜೆಪಿ 8



ಪುಟಗಳ ಈ ಆರೋಪ ಪಟ್ಟಿಯನ್ನು ಬಿಡುಗಡೆ ಮಾಡಿ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಪಟ್ಟಿ ಮಾಡಿದೆ.

ಆರೋಪ ಪಟ್ಟಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಕಾಂಗ್ರೆಸ್‌ನವರು ನಯಾ ಪೈಸೆ ಸಾಧನೆ ಮಾಡದೆ ಇಲ್ಲಿ ಸಂಭ್ರಮದ ಸಮಾವೇಶ ಮಾಡಿದ್ದಾರೆ. ಪಾಕಿಸ್ತಾನದಲ್ಲಿ ಸೋಲಿಗೆ ಕಾರಣರಾದ ಸೇನಾ ಮುಖ್ಯಸ್ಥ ಮುನೀರ್‌ಗೆ ಫೀಲ್ಡ್ ಮಾರ್ಷಲ್ ಹುದ್ದೆಗೆ ಬಡ್ತಿ ಕೊಟ್ಟಿರುವ ಹಾಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ದಿವಾಳಿ ಮಾಡಲ್ ಆಫ್ ಕರ್ನಾಟಕ ಎಂಬ ಬಿರುದು ಕೊಡುತ್ತೇವೆ ಎಂದರು.

ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಯಾವ ಸಾಧನೆಯನ್ನೂ ಮಾಡಿಲ್ಲ. ಎಲ್ಲವನ್ನೂ ಸಾಲ ಮಾಡಿಯೇ ಮಾಡಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿನ್ನೆ ಗೃಹ ಲಕ್ಷ್ಮಿ ಹಣವನ್ನು ತಿಂಗಳು ತಿಂಗಳು ಕೊಡುತ್ತೇವೆ ಎಂದು ಹೇಳಿಲ್ಲ, ದುಡ್ಡು ಬಂದಾಗ ಕೊಡುತ್ತೇವೆ ಎಂದಿದ್ದಾರೆ. ಜನ ಇವರ ವಂಚನೆಯನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

## 5 ಲಕ್ಷ ರೂ. ಲಂಚ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದ ಬಿಬಿಎಂಪಿ ಇಬ್ಬರು ಇಂಜಿನಿಯರ್‌ಗಳು

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ(ಃಃಒಕ)ಯ ಇಬ್ಬರು ಇಂಜಿನಿಯರ್‌ಗಳು ಬುಧವಾರ ಐದು ಲಕ್ಷ ರೂಪಾಯಿ ಲಂಚ ಸ್ವೀಕರಿಸುತ್ತಿದ್ದ ವೇಳೆ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ವ್ಯಕ್ತಿಯೊಬ್ಬರಿಂದ ಲಂಚ ಸ್ವೀಕರಿಸುತ್ತಿದ್ದ ಹೆಬ್ಬಾಳ ಉಪ ವಿಭಾಗದ ಎಇಇ ಮಹದೇವ ಮತ್ತು ಆರ್‌ಎಂವಿ ಉಪ ವಿಭಾಗದ ಎಇ ಸುರೇಂದ್ರ ಅವರನ್ನು ಲೋಕಾಯುಕ್ತ ಅಧಿಕಾರಿಗಳ ಬಂಧಿಸಿ, ಹಣ ಜಪ್ತಿ ಮಾಡಿದ್ದಾರೆ.

ಎನ್‌ಒಸಿ ನೀಡಲು ಸಂಜಯ್ ಎಂಬುವವರಿಗೆ 10 ಲಕ್ಷ ರೂಪಾಯಿ ಲಂಚ ನೀಡುವಂತೆ ಈ ಇಬ್ಬರು ಇಂಜಿನಿಯರ್?ಗಳು ಬೇಡಿಕೆ ಇಟ್ಟಿದ್ದರು. ಅದರಂತೆ ಮುಂಗಡವಾಗಿ 5 ಲಕ್ಷ ರೂ. ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಅಧಿಕಾರಿಗಳು ರೆಡ್ ಹ್ಯಾಂಡ್ ಆಗಿ ಹಿಡಿದಿದ್ದಾರೆ.

## ಕುತೂಹಲ ಕೆರಳಿಸಿರುವ ಕಲ್ಕಟ್ಟೆ ಗಾನ ದೀವಿಗೆ



**ಚಿಕ್ಕಮಗಳೂರು:** ಕಳೆದ ಎಂಟು ತಿಂಗಳಿಂದ ನಿರಂತರವಾಗಿ ಹೊರಬರುತ್ತಿರುವ ಕಲ್ಕಟ್ಟೆ ಗಾನ ದೀವಿಗೆಯು ಚಿಕ್ಕಮಗಳೂರಿನ ಧಾರ್ಮಿಕ ಶ್ರದ್ಧಾಕೇಂದ್ರಗಳ ಬಗ್ಗೆ ಕುತೂಹಲ ಮೂಡಿಸುತ್ತಿದೆ. ವಿದೇಶಗಳಲ್ಲಿನ ಚಿಕ್ಕಮಗಳೂರಿಗರು ಕೂಡತಮ್ಮೂರಿನ ಪ್ರತಿ ದೇವಾಲಯ ಗೀತೆಗಳನ್ನು ಕೇಳಿ, ತಮ್ಮ ಬಾಲ್ಯದ ದಿನಗಳ ಧಾರ್ಮಿಕ ಸಂಭ್ರಮಗಳನ್ನು ನೆನಪುಮಾಡಿಕೊಳ್ಳುತ್ತಿದ್ದಾರೆ ಎಂದು ಕ್ಯಾಲಿಫೋರ್ನಿಯಾದ ಕನ್ನಡ ಸಂಘದ ಸಂಚಾಲಕ ರಘು ಹಾಲೂರು ಹೇಳಿದ್ದಾರೆ.

ಅವರು ನಗರದ ಕಲ್ಕಟ್ಟೆ ಪುಸ್ತಕದ ಮನೆ, ಅಖಿಲ ಭಾರತೀಯ ಸಾಹಿತ್ಯ ಪರಿಷತ್, ಶ್ರೀ ಗುರುಕೃಪಾ ಸಂಗೀತ ಸೇವಾ ಟ್ರಸ್ಟ್, ದೀವಿಗೆ ಬಳಗ, ಸೂರಂಕಣದವರು ನೇಕಾರ ಬೀದಿಯಲ್ಲಿನ ಶ್ರೀ ಕೋದಂಡರಾಮಸ್ವಾಮಿ ದೇವಾಲಯದಲ್ಲಿ ಇತ್ತೀಚೆಗೆ ಏರ್ಪಡಿಸಿದ್ದ ಭಕ್ತಿಗೀತೆ ಲೋಕಾರ್ಪಣೆ ಸಮಾರಂಭದಲ್ಲಿ ಮಾತನಾಡಿದರು.

ಆರಂಭಿಸುವುದು ವಿಶೇಷವಲ್ಲ. ಉತ್ಸಾಹವಿದ್ದಾಗ ಇದು ನಡೆಯುತ್ತದೆ. ಆದರೆ, ಅದನ್ನು ನಿರಂತರವಾಗಿ ನಡೆಸಿಕೊಂಡು ಬರುವುದು ಸಾಧನೆ. ನಮ್ಮಪಾಡಿಗೆ ನಾವೇನೇ ಮಾಡುತ್ತಿದ್ದರೂ ಟೀಕೆಟಿಪ್ಪಣಿಗಳು ಬರುತ್ತಲೇ ಇರುತ್ತವೆ. ಇವುಗಳನ್ನು ಮೀರಿ ಮುಂದುವರೆಯಲು ನಮ್ಮ ಕಾರ್ಯಗಳ ಬಗ್ಗೆ ನಮಗೆ ಶ್ರದ್ಧೆ, ನಿಷ್ಠೆ ಬೇಕು. ಇದು ಕಲ್ಕಟ್ಟೆ ಗಾನ ದೀವಿಗೆ ಸರಣಿಯಲ್ಲಿ ಎದ್ದು ಕಾಣುತ್ತಿದೆ ಎಂದು ಅವರು ಹೇಳಿದರು.

ಹಾಡಿಗೆ ಸಾಹಿತ್ಯ ನೀಡಿ, ರಾಗ ಸಂಯೋಜಿಸಿ, ವೀಡಿಯೋ ಮಾಡಿ, ಗಾಯನ ಸೇವೆಗೈದ ನಾಗರಾಜರಾವ್ ಕಲ್ಕಟ್ಟೆಯವರು ಈ ದೇವಸ್ಥಾನ ಪುಟ್ಟದಾದರೂ, ಇಲ್ಲಿನ ದೇವರ ಹೆಸರಿನ ಸಂಘದವರು ಸೌಜನ್ಯತೆಯಿಂದ ಸಹಕರಿಸಿ ಮಾಹಿತಿಯನ್ನು ನೀಡಿದ್ದಾರೆ. ಜೊತೆಗೆ ಅರ್ಚಕರ ಬೆಂಬಲ ಈ ಗೀತೆ ಹೊರ ಬರಲು ಕಾರಣವಾಗಿದೆ. ಈ ಸರಣಿಯ ಗೀತೆಗಳಲ್ಲಿ ಪ್ರತಿ ದೇವಾಲಯಗಳ ಧಾರ್ಮಿಕ ಆಚರಣಾ ಪದ್ಧತಿ, ಹಿನ್ನೆಲೆ, ದೇವರ ಮಹಿಮೆಗಳನ್ನು ಹೇಳುವ ಕ್ರಮವನ್ನು ರೂಢಿಸಲಾಗಿದೆ ಎಂದರು.

ಹಿನ್ನೆಲೆ ಸಂಗೀತ ನೀಡಿದ ಕೆ.ಎನ್. ನಾಗಭೂಷಣ್ ಮಾತನಾಡಿದರು.

# ಸಿಡಿಎ ಆಯುಕ್ತರನ್ನು ವಜಾಗೊಳಿಸಲು ಭೀಮ್ ಆರ್ಮಿ ಒತ್ತಾಯ

**ಚಿಕ್ಕಮಗಳೂರು:** ನಕಲು ಸಹಿ ಬಳಸಿಕೊಂಡು ದಾಖಲೆ ಸೃಷ್ಟಿಸಿದವರ ವಿರುದ್ಧ ಪ್ರಕರಣ ದಾಖಲಿಸದೆ ನಿರ್ಲಕ್ಷ್ಯ ತೋರಿರುವ ಸಿಡಿಎ ಆಯುಕ್ತರನ್ನು ಸೇವೆಯಿಂದ ವಜಾಗೊಳಿಸಬೇಕು ಎಂದು ಜಿಲ್ಲಾ ಭೀಮ್ ಆರ್ಮಿ ಪದಾಧಿಕಾರಿಗಳು ಇಂದು ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಭೀಮ್ ಆರ್ಮಿ ಗೌರವಾಧ್ಯಕ್ಷ ಹೊನ್ನೇಶ್ ಸಿಡಿಎಯಲ್ಲಿ ರಾಮನಹಳ್ಳಿ ಗ್ರಾಮದ ಪ್ರದೇಶವನ್ನು ವ್ಯಕ್ತಿಯೊರ್ವರು ವಸತಿ ಉದ್ದೇಶಕ್ಕಾಗಿ ಬಳಸಲು ದಲ್ಲಾಳಿಯೋರ್ವನಿಂದ ಏಕ ನಿವೇಶನ ರೂಪುರೇಷೆ ನಕ್ಷೆ ಅನುಮೋದನೆಗೆ ಕೋರಿ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಲಾಗಿತ್ತು ಎಂದರು.

ದಲ್ಲಾಳಿಗೆ ಸಂಬಂಧಪಟ್ಟ ವ್ಯಕ್ತಿಯಿಂದ ಲಕ್ಷಾಂತರ ಹಣ ಪಡೆದು ಪ್ರಾಧಿಕಾರದ ಆಯುಕ್ತರು ನಕಲಿ ಸಹಿ



ಬಳಸಿ, ದಾಖಲೆಯನ್ನು ಮಾಡಿಕೊಟ್ಟಿದ್ದಾರೆ. ದಾಖಲೆಗೆ ಸಂಬಂಧಿಸಿದಂತೆ ಪ್ರಾಧಿಕಾರದಲ್ಲಿ ವಿಚಾರಿಸಿದರೆ ನಕಲಿ ಸಹಿ ಎಂಬುದು ಸ್ಪಷ್ಟವಾಗಿ ತಿಳಿದು ಬಂದಿದೆ ಎಂದರು.

ಆದರೆ ಈವರೆಗೂ ಆಯುಕ್ತರು ತಪ್ಪಿತಸ್ಥರ ಯಾವುದೇ ಪ್ರಕರಣ ದಾಖಲಿಸದಿರುವುದು ಹಲವು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ಹೀಗಾಗಿ ಶೀಘ್ರವೇ ಆಯುಕ್ತರನ್ನು ಅಮಾನತ್ತುಗೊಳಿಸಿ ಪ್ರಕರಣವನ್ನು ಸೂಕ್ತ ತನಿಖೆ ನಡೆಸುವ ಮೂಲಕ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಭೀಮ್ ಆರ್ಮಿ ತಾಲ್ಲೂಕು ಅಧ್ಯಕ್ಷ ಧರ್ಮೇಶ್, ರೈತ ವಿಭಾಗದ ಜಿಲ್ಲಾಧ್ಯಕ್ಷ ರಾಜು, ಎಸ್ಸಿಎಸ್ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯ ಹುಣಸೇಮಕ್ಕಿ ಲಕ್ಷ್ಮಣ್, ಮುಖಂಡರುಗಳಾದ ರುದ್ರಾಚಾರಿ ಮತ್ತಿತರರು ಹಾಜರಿದ್ದರು.

# ನಗರ ಹಸಿರೀಕರಣಗೊಳಿಸಲು ವಿವಿಧ ಸಂಘಟನೆಗಳ ಮುಖಂಡರ ಸಭೆ : ಸುಜಾತ

**ಚಿಕ್ಕಮಗಳೂರು:** ನಗರವನ್ನು ಹಸಿರೀಕರಣಗೊಳಿಸುವ, ಸ್ವಚ್ಛ-ಸುಂದರಗೊಳಿಸುವ ಸಂಬಂಧ ವಿವಿಧಸಂಘಟನೆಗಳಪ್ರಮುಖರೊಂದಿಗೆ ನಗರಸಭೆ ಅಧ್ಯಕ್ಷರು ಸಮಾಲೋಚನೆ ನಡೆಸಿ, ಸಲಹೆ-ಸೂಚನೆಗಳನ್ನು ಆಲಿಸಿದರು.

ನಗರಸಭೆ ಸಭಾಂಗಣದಲ್ಲಿ ಇಂದು ನಡೆದ ಸಭೆಯ ನಂತರ ಸುದ್ದಿಗಾರರ ಜೊತೆ ಮಾತನಾಡಿದ ಅಧ್ಯಕ್ಷೆ ಸುಜಾತ ಶಿವಕುಮಾರ್, ನಗರವನ್ನು ಹಸಿರೀಕರಣಗೊಳಿಸುವುದು ಸೇರಿದಂತೆ, ಸ್ವಚ್ಛತೆ, ನೀರು ಸರಬರಾಜು, ರಸ್ತೆ




ಇನ್ನಿತರೆ ಮೂಲ ಸೌಕರ್ಯಗಳನ್ನು ಸಮಗ್ರವಾಗಿ ಅನುಷ್ಠಾನಗೊಳಿಸುವ ಕುರಿತಂತೆ ಚರ್ಚಿಸಲಾಗಿದೆ ಎಂದು ತಿಳಿಸಿದರು.

ನಗರದ ಅಭಿವೃದ್ಧಿ ದೃಷ್ಟಿಯಿಂದ ಅಸ್ತಿತ್ವಕ್ಕೆ ಬಂದಿರುವ ಟ್ರಸ್ಟ್‌ಗಳು, ಸಂಘಟನೆಗಳು ಮತ್ತು ವೈಯಕ್ತಿಯ ಆಸಕ್ತಿ ಹೊಂದಿರುವ ವ್ಯಕ್ತಿಗಳೊಂದಿಗೆ ಸಮಾಲೋಚನೆ ನಡೆಸಲಾಗಿದೆ. ಪ್ಲಾಸ್ಟಿಕ್ ಮುಕ್ತ ಆರೋಗ್ಯಕರ ನಗರವನ್ನಾಗಿಸುವುದು ಸಭೆಯ ಉದ್ದೇಶವಾಗಿತ್ತು ಎಂದರು.

ಈಗಾಗಲೇ ನಮ್ಮ ನಗರ ಸ್ವಚ್ಛತೆಯಲ್ಲಿ ರಾಜ್ಯದಲ್ಲೇ ಎರಡನೇ ಸ್ಥಾನ ಗಳಿಸಿದೆ. ಮನುಷ್ಯರಿಗೆ ಅಗತ್ಯ ಸೌಕರ್ಯಗಳ ಜೊತೆಗೆ ಪ್ರಾಣಿ, ಪಕ್ಷಿಗಳಿಗೂ ನೆರಳು, ನೀರು, ಆಹಾರ ಆಶ್ರಯಕ್ಕಾಗಿ ಮರ ಗಿಡಗಳು, ಶೆಲ್ಟರ್‌ಗಳು ಬೇಕಾಗಿದೆ. ಈ ನಿಟ್ಟನಿಲ್ಲಿ ಒಂದಷ್ಟು ಉಪಯುಕ್ತ ಹಣ್ಣಿನ ಗಿಡಗಳನ್ನು ನಡೆಬೇಕು ಎನ್ನುವ ಉದ್ದೇಶವಿದೆ. ಇದಕ್ಕಾಗಿ ಅರಣ್ಯ ಇಲಾಖೆ ಅಧಿಕಾರಿಗಳ ಜೊತೆ ಚರ್ಚಿಸಿದ್ದೇವೆ. ಗಿಡಗಳನ್ನು ನೀಡುತ್ತೇವೆ ಎಂದು ಭರವಸೆ ನೀಡಿದ್ದಾರೆ ಎಂದರು.

ಇದೇ ವೇಳೆ ಸಂಘ-ಸಂಸ್ಥೆಗಳು ಗಿಡಗಳನ್ನು ನೆಡುವ ಕಾರ್ಯಕ್ಕೆ ತಾವು ಕೈ ಜೋಡಿಸುವುದಾಗಿ ಭರವಸೆ ನೀಡಿವೆ. ನಗರಸಭೆ ಕಡೆಯಿಂದ ನೀರಿನ ವ್ಯವಸ್ಥೆ ಮಾಡಲು ಕೋರಿದ್ದಾರೆ. ಅದಕ್ಕೆ ನಾವು ಸಿದ್ಧರಿದ್ದೇವೆ ಎಂದು ತಿಳಿಸಿದರು. ಮುಂದಿನ ದಿಗಳಲ್ಲಿ ನಗರವನ್ನು ಇನ್ನಷ್ಟು ಸುಂದರ ಹಾಗೂ ಸ್ವಚ್ಛ ನಗರವನ್ನಾಗಿ ಮಾರ್ಪಡಿಸುತ್ತೇವೆ. ಒಳ್ಳೆಯ ಆಮ್ಲ ಜನಕ ನೀಡುವ, ನೆರಳು ನೀಡುವ ಮರ-ಗಿಡಗಳನ್ನು ನೆಟ್ಟು ಎಲ್ಲರಿಗೂ ಅನುಕೂಲ ಕಲ್ಪಿಸಲು ಈ ಅಭಿಯಾನ ಹಮ್ಮಿಕೊಂಡಿದ್ದೇವೆ ಎಂದು ಹೇಳಿದರು.

ನಗರದ 53 ವಾರ್ಡ್‌ಗಳಲ್ಲಿ ಯಾವುದೇ ಪಕ್ಷ ಬೇಧವಿಲ್ಲದೆ, ವಿದ್ಯಾರ್ಥಿಗಳು, ಪ್ರಮುಖರು, ಮಹಿಳೆಯರು, ಸ್ವಸಹಾಯ ಸಂಘಗಳು ಸೇರಿ ಟ್ರಸ್ಟ್ ರಚಿಸಿಕೊಂಡು ಕಸ ನಿರ್ವಹಣೆ ಹೊಣೆ ಹೊರುವ ಜೊತೆಗೆ ಮಕ್ಕಳಿಂದ ಗಿಡಗಳನ್ನು ನೆಡಿಸಿ.

# ಶಿಕ್ಷಣ ವಂಚಿತ ಮಕ್ಕಳ ಬಗ್ಗೆ ಎಚ್ಚರಿಕೆ ವಹಿಸಲು ಅಧಿಕಾರಿಗಳಿಗೆ ಸೂಚನೆ

**ಚಿಕ್ಕಮಗಳೂರು, ಮೇ 22:** ಅಲ್ಪಸಂಖ್ಯಾತರ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಎಚ್ಚರ ವಹಿಸಲು ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇಂದು ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ ಅನುಷ್ಠಾನದ ಕುರಿತು ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಅಂಗನವಾಡಿ ಶಿಕ್ಷಕರಿಗೆ ಹಾಗೂ ಸಹಾಯಕಿಯರಿಗೆ ಮಕ್ಕಳನ್ನು ಅವರ ಮಾತೃ ಭಾಷೆಯಲ್ಲಿ ಮಾತನಾಡಿಸುವ ಸಾಮರ್ಥ್ಯ ಇರಬೇಕು ಹಾಗೂ ಅಂಗನವಾಡಿ, ಶಾಲಾ ಶಿಕ್ಷಣದಿಂದ ವಂಚಿತರಾಗಿರುವ ಮಕ್ಕಳನ್ನು ಗುರುತಿಸಿ ಅಂತವರನ್ನು ಪುನಃ ಶಾಲೆಗೆ ದಾಖಲಿಸಿ ಅವರಿಗೆ ವಿದ್ಯಾಭ್ಯಾಸ ನೀಡಲು ಸೂಚಿಸಿದರು.

ಸಂವಾದದಲ್ಲಿ ಅಲ್ಪಸಂಖ್ಯಾತರ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಅಭಿವೃದ್ಧಿ ಬಗ್ಗೆ ಚರ್ಚಿಸಲಾಯಿತು. ಅಲ್ಪಸಂಖ್ಯಾತರ



ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗಾಗಿ ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮಕ್ಕೆ ಸಂಬಂಧಿಸಿದ ಇಲಾಖೆಯ ಎಲ್ಲಾ ಕಾರ್ಯಕ್ರಮಗಳಲ್ಲಿ ಸಾಧ್ಯವಾದಷ್ಟು ಆರ್ಥಿಕ ಮತ್ತು ಭೌತಿಕ ಗುರಿಗಳಿಗೆ ಅನುಗುಣವಾಗಿ ಪ್ರಗತಿ ಸಾಧಿಸಲು ಸೂಚಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ. ಎನ್. ಮಾತನಾಡಿ, ಉದ್ಯೋಗಸ್ಥ ಮಹಿಳಾ ವಸತಿ ನಿಲಯಗಳನ್ನು ಜಿಲ್ಲೆಯಲ್ಲಿ ಸ್ಥಾಪಿಸಲು ಸರ್ಕಾರದ ಹಂತದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಶಿಫಾರಸ್ಸು ಮಾಡಲು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕರಿಗೆ ಮನವಿ ಮಾಡಿದರು. ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ಆಪ್ತ ಸಹಾಯಕ ಮುಜೀಬುಲ್ಲಾ ಜಫಾರಿ, ಅಲ್ಪಸಂಖ್ಯಾತರ ಆಯೋಗದ ಸದಸ್ಯ, ನಿವೃತ್ತ ಐಎಎಸ್ ಅಧಿಕಾರಿ ಅಬ್ದುಲ್ ಖಾದರ್, ಜಿ.ಪಂ. ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ, ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.


**ಮಹಾನಗರ ಪಾಲಿಕೆ ಕಾರ್ಯಾಲಯ, ದಾವಣಗೆರೆ.**

ನಂ:ದಾಮಪಾ:ಕಾಅ1.ಇ.ಟೆಂಡರ್:10:2025-26 ದಿನಾಂಕ:20-05-2025

**ಟೆಂಡರ್ ಪ್ರಕಟಣೆ (ಕೆಪಿಪಿಪಿ ಪೋರ್ಟಲ್ ಮುಖಾಂತರ)**

2022-23 ನೇ ಸಾಲಿನ ಎನ್.ಸಿ.ಎ.ಪಿ ನಿಧಿ ಉಳಿಕೆ./ ಪಾಲಿಕೆ ಸಾಮಾನ್ಯ ನಿಧಿ.-03 ಕಾಮಗಾರಿ, 2024-25 ನೇ ಸಾಲಿನ ಪಾಲಿಕೆ ಸಾಮಾನ್ಯ ನಿಧಿ.-01 ಕಾಮಗಾರಿ : ಒಟ್ಟು 04 ಕಾಮಗಾರಿಗಳಿಗೆ ಕೆಪಿಪಿಪಿ ಪೋರ್ಟಲ್ ಮುಖಾಂತರ ಸಿಂಗಲ್/ಡಬಲ್ ಕವರ್ ಪದ್ಧತಿಯಲ್ಲಿ ಟೆಂಡರ್ ಕರೆಯಲಾಗಿದ್ದು, ಅರ್ಹ ಗುತ್ತಿಗೆದಾರರು/ಏಜನ್ಸಿದಾರರು/ ಸರಬರಾಜುದಾರರು ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್ ವೆಬ್ ಸೈಟ್ https://kppp.karnataka.gov.in ನಲ್ಲಿ ಟೆಂಡರ್‌ಗಾಗಿ ಭಾಗವಹಿಸಬಹುದು ಹೆಚ್ಚಿನ ವಿವರಗಳನ್ನು ಮಹಾನಗರ ಪಾಲಿಕೆಯ ಕಛೇರಿಯ ವೆಬ್ ಸೈಟ್ www.davanagerecity.mrc.gov.in ರಲ್ಲಿ ಹಾಗೂ ಕೆಪಿಪಿಪಿ ಸಹಾಯಕ ದೂರವಾಣಿ ಸಂಖ್ಯೆ: +91-8046010000 +91-8068948777 ರಿಂದ ಮಾಹಿತಿ ಪಡೆಯಬಹುದು. ಅಂದಾಜು ಮೊತ್ತ, ಟೆಂಡರ್‌ಗಿಟ್ಟ ಮೊತ್ತ, ಇ.ಎಂ.ಡಿ. ಮೊತ್ತ ಮತ್ತು ಟೆಂಡರ್ ದಿನಾಂಕಗಳಲ್ಲಿ ಯಾವುದೇ ಬದಲಾವಣೆ ಇದ್ದಲ್ಲಿ ಕೆಪಿಪಿಪಿ ಪೋರ್ಟಲ್‌ನಲ್ಲಿ ಗಮನಿಸುವುದು ಹಾಗೂ ಯಾವುದೇ ಪತ್ರಿಕಾ ಪ್ರಕಟಣೆಗಳನ್ನು ಹೊರಡಿಸಲಾಗುವುದಿಲ್ಲ.

**ಕ್ರಮ ಸಂ.1 ರಿಂದ 02ರ ಅಲ್ಪಾವಧಿ ಕಾಮಗಾರಿಗೆ :** ಕೆ.ಪಿ.ಪಿ.ಪಿ.ಯಲ್ಲಿ ಟೆಂಡರ್ ದಾಖಲೆಗಳನ್ನು ಪಡೆಯಬಹುದಾದ ದಿನಾಂಕ : 23-05-2025 ಟೆಂಡರ್ ಬಗ್ಗೆ ಮಾಹಿತಿ ಪಡೆಯಲು ಕೊನೆಯ ದಿನಾಂಕ: 31-05-2025 ಸಮಯ : 16.00 ಟೆಂಡರ್ ಸಲ್ಲಿಸುವ ಅಂತಿಮ ದಿನಾಂಕ 31-05-2025 ಸಮಯ : 17.00 ಟೆಂಡರ್/ತಾಂತ್ರಿಕ ಬಿಡ್ ತೆರೆಯುವ ದಿನಾಂಕ : 02-06-2025 ಸಮಯ : 11.00

**ಕ್ರಮ ಸಂ.04 ರ ಕಾಮಗಾರಿಗೆ:** ಕೆ.ಪಿ.ಪಿ.ಪಿ.ಯಲ್ಲಿ ಟೆಂಡರ್ ದಾಖಲೆಗಳನ್ನು ಪಡೆಯಬಹುದಾದ ದಿನಾಂಕ : 23-05-2025 ಟೆಂಡರ್ ಬಗ್ಗೆ ಮಾಹಿತಿ ಪಡೆಯಲು ಕೊನೆಯ ದಿನಾಂಕ: 06-06-2025 ಸಮಯ : 16.00 ಟೆಂಡರ್ ಸಲ್ಲಿಸುವ ಅಂತಿಮ ದಿನಾಂಕ 06-06-2025 ಸಮಯ : 17.00 ಟೆಂಡರ್/ತಾಂತ್ರಿಕ ಬಿಡ್ ತೆರೆಯುವ ದಿನಾಂಕ : 09-06-2025 ಸಮಯ : 11.00

ವಾಸಾಇ/ದಾವಣಗೆರೆ/83/ ಕೆಎಸ್ಎಂಸಿಎ/2025-26

ಸಹಿ/-ಕಾರ್ಯಪಾಲಕ ಅಭಿಯಂತರರು, ಮಹಾನಗರ ಪಾಲಿಕೆ, ದಾವಣಗೆರೆ


# ನವೀಕೃತಗೊಳಿಸಲಾದ ರೈಲ್ವೇ ನಿಲ್ದಾಣಕ್ಕೆ ಪ್ರಧಾನಿ ಮೋದಿ ಚಾಲನೆ

**ಬಾಗಲಕೋಟೆ :** ಅಮೃತ್ ಭಾರತ್ ಯೋಜನೆಯಡಿ ನವೀಕೃತಗೊಳಿಸಲಾದ ನಗರದ ರೈಲ್ವೆ ನಿಲ್ದಾಣವನ್ನು ಗುರುವಾರ ಲೋಕಾರ್ಪಣೆಗೊಳಿಸಲಾಯಿತು.

ರಾಜಸ್ತಾನದ ಬಿಕಾನೇರ್‌ನಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ವರ್ಚ್ಯುವಲ್ ಮೂಲಕ ನಿಲ್ದಾಣ ಉದ್ಘಾಟಿಸಿದರು. ನಗರದ ರೈಲ್ವೆ ನಿಲ್ದಾಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೇಂದ್ರ ರೈಲ್ವೆ ಖಾತೆ ಸಹಾಯಕ ಸಚಿವ ವಿ.ಸೋಮಣ್ಣ ಹಾಗೂ ಜನಪ್ರತಿನಿಗಳು ಭಾಗವಹಿಸಿದ್ದರು.

ಉದ್ಘಾಟನೆ ಸಮಾರಂಭದಲ್ಲಿ ಮಾತನಾಡಿದ ಸಚಿವ ವಿ.ಸೋಮಣ್ಣ "ಕೇಂದ್ರ ಸರಕಾರ ರೈಲ್ವೆ ವಲಯದ ಅಭಿವೃದ್ಧಿಗೆ ಆದ್ಯತೆ ನೀಡಿದ್ದು, ರಕ್ಷಣಾ ವ್ಯಾಪ್ತಿಯ ನಂತರ ಅತಿ ಹೆಚ್ಚು ಅನುದಾನ ರೈಲ್ವೆಗೆ ಮೀಸಲಿರಿಸಲಾಗಿದೆ. 2 ಲಕ್ಷ 65 ಸಾವಿರ ಕೋಟಿ ರೂ. ಅನುದಾನದಲ್ಲಿ



ದೇಶಾದ್ಯಂತ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಇಂದು 141 ಕೋಟಿ ರೂ. ವೆಚ್ಚದಲ್ಲಿ ರಾಜ್ಯದ 5 ನವೀಕೃತ ನಿಲ್ದಾಣಗಳನ್ನು ಲೋಕಾರ್ಪಣೆಗೊಳಿಸಲಾಗಿದೆ. ನಮ್ಮ ಸರಕಾರ 10 ವರ್ಷದಲ್ಲಿ 7 ಲಕ್ಷ 50 ಸಾವಿರ ಕೋಟಿ ರೂ. ವೆಚ್ಚದಲ್ಲಿ 44 ಸಾವಿರ ಕಿ.ಮೀ. ಹೊಸ ಹಳಿ ಅಳವಡಿಸಿದೆ. ಯುಪಿಎ ಸರಕಾರದ ಅವಧಿಯಲ್ಲಿ ಡಬ್ಲಿಂಗ್ ಹಳಿ ಅಳವಡಿಸಲು 11,500 ಕೋಟಿ ರೂ. ವೆಚ್ಚ ಮಾಡಲಾಗಿತ್ತು. ನಮ್ಮ ಸರಕಾರದ ಅವಧಿಯಲ್ಲಿ 70 ಸಾವಿರ ಕೋಟಿ ರೂ. ವ್ಯಯಿಸಲಾಗಿದೆ. ಈ ಮೊದಲು ರಾಜಕೀಯ ಕಾರಣಕ್ಕಾಗಿ ರೈಲ್ವೆ ವಲಯ ಬಳಕೆಯಾಗುತ್ತಿತ್ತು. ನಮ್ಮ ಸರಕಾರ ವಿಕಸಿತ ಭಾರತದ ಧ್ಯೇಯ ಹೊಂದಿದೆ" ಎಂದು ಸಮರ್ಥಿಸಿಕೊಂಡರು.

ಸಂಸದ ಪಿ.ಸಿ.ಗದ್ದಿಗೌಡರ "ಕುಡಚಿ ರೈಲು ಮಾರ್ಗದ ಕಾಮಗಾರಿಗೆ ರಾಜ್ಯ ಸರಕಾರದಿಂದ ಭೂಸ್ವಾಧೀನ ವಿಳಂಬವಾಗಿದೆ. ಚಿತ್ರದುರ್ಗ-ಆಲಮಟ್ಟಿ ಹೊಸ ರೈಲು ಮಾರ್ಗಕ್ಕೆ ಶೀಘ್ರ ಡಿಪಿಆರ್ ಸಿದ್ಧಗೊಳ್ಳಲಿದೆ. 16 ಕೋಟಿ ರೂ. ವೆಚ್ಚದಲ್ಲಿ ನವೀಕರಣಗೊಂಡಿರುವ ನಗರದ ನಿಲ್ದಾಣದಲ್ಲಿ ಅತ್ಯಾಧುನಿಕ ಸೌಲಭ್ಯ ಒದಗಿಸಲಾಗಿದೆ" ಎಂದರು.

ವಿಧಾನಪರಿಷತ್ ಸದಸ್ಯ ಪಿ. ಎಚ್.ಪೂಜಾರ "ಪ್ರಯಾಣಿಕರ ಹಿತದೃಷ್ಟಿಯಿಂದ ವಿಜಯಪುರ-ಬೆಂಗಳೂರು ಸೂಪರ್ ಫಾಸ್ಟ್ ರೈಲು ಆರಂಭಿಸಬೇಕು. ಅಯೋಧ್ಯೆಗೆ ಸಂಚರಿಸುವ ರೈಲು ವಾರಕ್ಕೆ ಮೂರು ಬಾರಿ ಸಂಚರಿಸುವಂತೆ ವಿಸ್ತರಿಸಬೇಕು. ಗುಜರಾತ್, ರಾಜಸ್ತಾನಗಳಿಗೆ ಸಂಪರ್ಕ ಕಲ್ಪಿಸುವ ರೈಲು ಸೌಲಭ್ಯ ಒದಗಿಸಬೇಕು, ಜನಶತಾಬ್ದಿ ಎಕ್ಸ್‌ಪ್ರೆಸ್ ಬಾಗಲಕೋಟೆಗೆ ವಿಸ್ತರಿಸಬೇಕು" ಎಂದು ಮನವಿ ಮಾಡಿದರು.

ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ, ತೇರದಾಳ ಶಾಸಕ ಸಿದ್ದು ಸವದಿ, ವಿಧಾನಪರಿಷತ್ ಸದಸ್ಯ ಹಣಮಂತ ನಿರಾಣಿ, ಮಾಜಿ ಸಚಿವ ಮುರಗೇಶ ನಿರಾಣಿ, ಮಾಜಿ ಶಾಸಕ ವೀರಣ್ಣ ಚರಂತಿಮಠ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ, ಉಪಾಧ್ಯಕ್ಷೆ ಶೋಭಾ ರಾವ್, ರೈಲ್ವೆ ಇಲಾಖೆ ಡಿಆರ್‌ಎಂ ಬೇಲಾ ಮೀನಾ, ರಾಮಮನೋಹರ್ ಇದ್ದರು.

## ಇತಿಹಾಸ ಪ್ರೇಮಿಗಳನ್ನು ಸೆಳೆಯುವ ಭಾರತದ 5 ಸುಂದರ ಕೋಟೆಗಳು



ಭಾರತದ ಇತಿಹಾಸವನ್ನು ಎತ್ತಿ ಹಿಡಿಯುವ ಪುರಾತನ ಕೋಟೆ, ಅರಮನೆಗಳು, ದೇವಾಲಯಗಳು ಅಂದಿನ ಕಾಲದ ವಾಸ್ತುಶಿಲ್ಪ ಹಾಗು ಆಗಿನ ಜನರ ಕಲಾನೈಪುಣ್ಯತೆಯ ಬಗ್ಗೆ ಅವರಿಗಿದ್ದ ಅಭಿರುಚಿಯ ಬಗ್ಗೆ ತಿಳಿಸುತ್ತದೆ. ನೀವು ಇತಿಹಾಸ, ನಿಗೂಢತೆ ಮತ್ತು ಉಸಿರುಕಟ್ಟುವ ನೋಟಗಳ ಅಂತಿಮ ಮಿಶ್ರಣವನ್ನು ಪಡೆಯುತ್ತೀರಿ. ನೀವು ಇತಿಹಾಸವನ್ನು ಪ್ರೀತಿಸುತ್ತಿದ್ದರೆ, ಭಾರತದ 5 ಕೋಟೆಗಳ ಬಗ್ಗೆ ನಾವು ಮಾಹಿತಿ ನೀಡುತ್ತೇವೆ. ಅವುಗಳು ದೇಶದ ಇತಿಹಾಸ ಪ್ರೇಮಿಗಳನ್ನು ಮಾತ್ರ ಆಕರ್ಷಿಸುವುದಿಲ್ಲ ಬದಲಾಗಿ ವಿದೇಶಿಗರನ್ನು ಬಹಳ ಸೆಳೆಯುತ್ತದೆ.

ರಾಜಸ್ಥಾನ ಇತಿಹಾಸ ಪ್ರೇಮಿಗಳ ಸ್ವರ್ಗ ಎಂದೇ ಹೇಳಬಹುದು. ಏಕೆಂದರೆ ಇಲ್ಲಿ ಇತಿಹಾಸವನ್ನು ನೆನಪಿಸುವ ಅನೇಕ ಕೋಟೆಗಳು, ಅರಮನೆಗಳು ಇವೆ. ಅವುಗಳಲ್ಲಿ ಚಿತ್ತೋರ್‌ಗಡ್ ಕೋಟೆಯು ಒಂದು. ಇದು ರಾಣಿ ಪದ್ಮಿನಿಯ ಶೌರ್ಯದ ಕಥೆಗಳನ್ನು ಹೇಳುತ್ತದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**